ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು , ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 138
11-11-2025 ಸೋಮವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 138

## ಕಾನಿಪ ಸಂಘ; ಅಧ್ಯಕ್ಷರಾಗಿ ಮಂಜುನಾಥ್ ಮರು ಆಯ್ಕೆ



| ಒಟ್ಟು ಸದಸ್ಯರು 353 | |
|---|---|
| ಅರ್ಹರ ಮತ ಪಟ್ಟಿ | 324 |
| ಚಲಾವಣೆಯಾದ ಮತ | 306 |
| ಮತ ಹಾಕದವರು | 18 |
| ತಿರಸ್ಕೃತ ಮತಗಳು | 22 |

**ದಾವಣಗೆರೆ:** ಇಲ್ಲಿನ ದೇವರಾಜ ಅರಸು ಬಡಾವಣೆಯ ವಾರ್ತಾ ಭವನದಲ್ಲಿ ಭಾನುವಾರ ನಡೆದ ಚುನಾವಣೆಯಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷರಾಗಿ ಮಂಜುನಾಥ್ ಆಯ್ಕೆಯಾದರು.

ಮಂಜುನಾಥ್ 154 ಮತ ಪಡೆದರೆ, ಪ್ರತಿಸ್ಪರ್ಧಿಗಳಾದ ರವಿ ಆರ್. 133 ಮತ, ರವಿ ಎನ್.ಆರ್. 7 ಮತಗಳನ್ನು ಪಡೆದರು.

ಉಪಾಧ್ಯಕ್ಷ ಸ್ಥಾನ: ಸುಭಾನ್ ಸಾಬ್ ಬಿ.ಪಿ. (182 ಮತ), ಶ್ರೀನಿವಾಸ್ ಟಿ. (160), ತಿಪ್ಪೇಸ್ವಾಮಿ ಆರ್.ಎಸ್. (135) ಮತ ಪಡೆದು ಆಯ್ಕೆಯಾದರು.

ಬದರಿನಾಥ್ ಎನ್.ವಿ. 161 ಮತ ಪಡೆದು ಪ್ರಧಾನ ಕಾರ್ಯದರ್ಶಿಯಾಗಿ ಆಯ್ಕೆಯಾದರು.

ಕಾರ್ಯದರ್ಶಿಯಾಗಿ ಅಂಜನೇಯ ಎನ್. ಕೆ. (131), ವೇದಮೂರ್ತಿ ಸಿ. (127) ಹಾಗೂ ಮುದ್ದಯ್ಯ ಬಿ.ಎಸ್. (124) ಆಯ್ಕೆಯಾದರು.

ಖಜಾಂಚಿ ಸ್ಥಾನಕ್ಕೆ ವೀರೇಶ್ ಜೆ.ಎಸ್. 125 ಮತ ಪಡೆದು ಆಯ್ಕೆಯಾದರು.

ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಸ್ಥಾನಕ್ಕೆ ಕೆ.ಚಂದ್ರಣ್ಣ 183 ಮತ ಪಡೆದು ಆಯ್ಕೆಯಾದರು.

ಕಾರ್ಯಕಾರಿ ಸಮಿತಿ ಸದಸ್ಯ ಸ್ಥಾನ: ಚಿದಾನಂದ ಜಿ.ಎಸ್. (200 ಮತ), ಜೈಮುನಿ ಕೆ. (177), ಸುರೇಶ ಆರ್. ಕುಣೆಬೆಳಕೆರೆ (174), ಪ್ರವೀಣ .ಆರ್ ಬಿ (167), ಭಾರತಿ (152), ಕಿರಣ್ ಎಸ್.ಜಿ. (150), ಮಂಜುನಾಥ್ ಕಾಡಜ್ಜಿ ಪಿ. (150), ರಾಘವೇಂದ್ರರಾವ್.ಎಲ್.ಸಿ. (145), ವಿಷ್ಣುಕುಮಾರ್ ಗೇನೇರ್ (143), ವಿಶ್ವನಾಥ್ ಮೈಲಾಳ್ (141), ರಘು ಪ್ರಸಾದ್ (136), ಏಕಾಂತಪ್ಪ ಕೆ. 133, ಚನ್ನಬಸಪ್ಪ ಕೆ.ಎಸ್. (127), ಚನ್ನಬಸವ ಎಂ. ಎಸ್. 126, ಅಣ್ಣಪ್ಪ ಬಿ. 125 ಮತ ಪಡೆದು ಆಯ್ಕೆಯಾಗಿದ್ದಾರೆ.

2025-28ನೇ ಸಾಲಿನ ಆಡಳಿತ ಮಂಡಳಿಯ ವಿವಿಧ ಸ್ಥಾನಗಳಿಗೆ ಒಟ್ಟು 55 ಅಭ್ಯರ್ಥಿಗಳು ಸ್ಪರ್ಧಿಸಿದ್ದರು ಎಂದು ಚುನಾವಣಾಧಿಕಾರಿ ಮಲ್ಲಿಕಾರ್ಜುನ್ ಕಬ್ಬರು ತಿಳಿಸಿದರು.

ಬೆಳಿಗ್ಗೆ 9 ಗಂಟೆಯಿಂದ ಮಧ್ಯಾಹ್ನ 3 ಗಂಟೆವರೆಗೆ ಮತದಾನ ನಡೆಯಿತು. ಮಧ್ಯಾಹ್ನ 3.30ರಿಂದತಡ ರಾತ್ರಿ ತನಕ ಮತ ಎಣಿಕೆ ನಡೆಯಿತು

### ಕೈದಿಗಳಿಗೆ 'ರಾಜಾತಿಥ್ಯ'

## ಅಗ್ರಹಾರ ಜೈಲಿನ ಮೂವರು ಹಿರಿಯ ಅಧಿಕಾರಿಗಳಿಗೆ ತಲೆದಂಡ



**ಬೆಂಗಳೂರು:** ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ಕೈದಿಗಳಿಗೆ ರಾಜಾತಿಥ್ಯ ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರು ಅಧಿಕಾರಿಗಳನ್ನು ಅಮಾನತು ಮಾಡಲಾಗಿದ್ದು, ಮುಖ್ಯ ಅಧೀಕ್ಷಕನನ್ನು ವರ್ಗಾವಣೆಗೊಳಿಸಲಾಗಿದೆ.

ಪರಪ್ಪನ ಅಗ್ರಹಾರ ಕೈದಿಗಳಿಗೆ ನಿಯಮ ಮೀರಿ ವಿಶೇಷ ಸವಲತ್ತು ನೀಡಿರುವ ವಿಚಾರವನ್ನು ರಾಜ್ಯ ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು, ಈ ಸಂಬಂಧ ಹಿರಿಯ ಅಧಿಕಾರಿಗಳೊಂದಿಗೆ ಗೃಹ ಸಚಿವ ಪರಮೇಶ್ವರ್ ಅವರು ಇಂದು ಮಹತ್ವದ ಸಭೆ ನಡೆಸಿದ್ದಾರೆ.

ಸಭೆಯಲ್ಲಿ ಅಧಿಕಾರಿಗಳೊಂದಿಗೆ ಮಾತುಕತೆ ನಡೆಸಿದ ಪರಮೇಶ್ವರ್ ಅವರು, ಕಾರಾಗೃಹದ ಅಧೀಕ್ಷಕ ಮ್ಯಾಗೇರಿ, ಸಹಾಯಕ ಅಧೀಕ್ಷಕ ಅಶೋಕ್ ಭಜಂತ್ರಿ ಅವರನ್ನು ಅಮಾನತುಗೊಳಿಸಿದ್ದು, ಕಾರಾಗೃಹದ ಮುಖ್ಯ ಅಧೀಕ್ಷಕರು ಕೆ.ಸುರೇಶ್ ಅವರನ್ನು ವರ್ಗಾವಣೆಗೊಳಿಸಿ ಆದೇಶ ಹೊರಡಿಸಿದ್ದಾರೆ.

ಅಲ್ಲದೆ, ಇನ್ನು ಮುಂದೆ ಈ ರೀತಿ ಪ್ರಕರಣ ಮರುಕಳಿಸದೇ ಇರಲು ಕಾನೂನು ಸುವ್ಯವಸ್ಥೆ ವಿಭಾಗದ ಎಡಿಜಿಪಿ ನೇತೃತ್ವದಲ್ಲಿ ಸಮಿತಿ ರಚಿಸಿದ್ದಾರೆ.

ಸಭೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಪರಮೇಶ್ವರ್ ಅವರು, ಘಟನೆ ಬಗ್ಗೆ ತನಿಖೆಗೆ ಉನ್ನತ ಮಟ್ಟದ ಸಮಿತಿ ರಚನೆ ಮಾಡಿದ್ದೇವೆ. ಕಾನೂನು ಸುವ್ಯವಸ್ಥೆ ವಿಭಾಗದ ಎಡಿಜಿಪಿ ಆರ್.ಹಿತೇಂದ್ರ, ಸಂದೀಪ್ ಪಾಟೀಲ್, ಅಮರನಾಥ್ ರೆಡ್ಡಿ, ರಿಷ್ಯಂತ್ ಸಮಿತಿಗೆ ಒಂದು ತಿಂಗಳಲ್ಲಿ ವರದಿ ನೀಡುವಂತೆ ಸೂಚಿಸಿದ್ದೇನೆ ಎಂದು ಹೇಳಿದರು.

ಪರಪ್ಪನ ಅಗ್ರಹಾರ ಸೆಂಟ್ರಲ್ ಜೈಲಿನಲ್ಲಿ 5,000 ಕೈದಿಗಳಿದ್ದು, ಅಪರಾಧಿಗಳು ಮತ್ತು ವಿಚಾರಣಾಧೀನ ಕೈದಿಗಳು ಒಟ್ಟಿಗೆ ಇರುತ್ತಾರೆ. ಹೀಗಾಗಿ ಜೈಲುಗಳ ಮೇಲೆ ನಿಗಾವಹಿಸಲು ಕಮಾಂಡ್ ಸೆಂಟರ್ ಸ್ಥಾಪನೆ ಮಾಡಲು ಉದ್ದೇಶಿಸಲಾಗಿದ್ದು, 15 ದಿನದೊಳಗೆ ಇದು ಕಾರ್ಯನಿರ್ವಹಿಸಲಿದೆ. ಇನ್ಮುಂದೆ ಜೈಲಿನ ಮುಖ್ಯಸ್ಥರಾಗಿ ಐಪಿಎಸ್ ಅಧಿಕಾರಿ ನೇಮಕ ಮಾಡಲಾಗುವುದು ಎಂದು ಮಾಹಿತಿ ನೀಡಿದರು.

5 ವರ್ಷಗಳ ನಂತರ ಜೈಲಿನ ಅಧಿಕಾರಿಗಳ ವರ್ಗಾವಣೆ ಕಡ್ಡಾಯವಾಗಲಿದ್ದು, ದೀರ್ಘಕಾಲ ಒಂದೇ ಕಡೆ ಕೆಲಸ ಮಾಡಿದರೆ ಬೇರು ಬಿಡುತ್ತಾರೆ. ಅವರು ಪ್ರಭಾವ ಬೀರುವ ಸಾಧ್ಯತೆ ಹಿನ್ನೆಲೆಯಲ್ಲಿ ಅಂತವರನ್ನು ಬೇ-ರೆಡೆಗೆ ವರ್ಗಾವಣೆ ಮಾಡಲು ನಿರ್ಧಾರ ಕೈಗೊಳ್ಳಲಾಗಿದೆ. ಜೊತೆಗೆ ಕಾರಾಗೃಹ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ನಿರ್ದೇಶನ ನೀಡಲಾಗಿದ್ದು, ಕೆಪಿಎಸ್‌ಸಿ ಮೂಲಕ ಅಧಿಕಾರಿಗಳ ನೇಮಕಾತಿಗೆ ಕ್ರಮ ಕೈಗೊಳ್ಳಲಾಗುವುದು.

ಸಹಾಯಕ ಅಧೀಕ್ಷಕರು ಸೇರಿದಂತೆ 1,000 ಸಿಬ್ಬಂದಿ ನೇಮಕ ಮಾಡಲು ಉದ್ದೇಶಿಸಲಾಗಿದ್ದು, ಸಿಬ್ಬಂದಿ ಕೊರತೆ ನೀಗಿಸಿದರೆ ಎಲ್ಲವನ್ನು ಸಮರ್ಪಕವಾಗಿ ನಿರ್ವಹಿಸಬಹುದು ಎಂದು ತಿಳಿಸಿದರು.

## ಇಂದು ಎರಡನೇ ಹಂತದ ಚುನಾವಣೆ

### ನ.14ಕ್ಕೆ ಬಿಹಾರ ಫಲಿತಾಂಶ ಘೋಷಣೆ

**ಪಾಟ್ನಾ, ನ.10**- ನಾಳೆ ಬಿಹಾರ ವಿಧಾನಸಭೆಯ ಎರಡನೆ ಹಂತದ ಚುನಾವಣೆ ನಡೆಯಲಿದ್ದು, ನ. 14 ರಂದು ಚುನಾವಣಾ ಫಲಿತಾಂಶ ಘೋಷಣೆಯಾಗಲಿದೆ. ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರ ಜೆಡಿ (ಯು)-ಬಿಜೆಪಿ ನೇತೃತ್ವದ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟ (ಎನ್‌ಡಿಎ) ಅಧಿಕಾರವನ್ನು ಉಳಿಸಿಕೊಳ್ಳುತ್ತದೆಯೇ ಅಥವಾ ತೇಜಸ್ವಿ ಯಾದವ್ ಅವರ ರಾಷ್ಟ್ರೀಯ ಜನತಾದಳ (ಆರ್‌ಜೆಡಿ) ನೇತೃತ್ವದ ಇಂಡಿಯಾ ಒಕ್ಕೂಟ ಸರ್ಕಾರ ಅಸ್ತಿತ್ವಕ್ಕೆ ಬರುವುದೋ ಎನ್ನುವುದು ಕೂತುಹಲ ಕೆರಳಿಸಿದೆ.

ಬಿಹಾರ ವಿಧಾನಸಭಾ ಚುನಾವಣೆ 2025 ರ ಮೊದಲ ಹಂತದ ನಂತರ ಪಾಟ್ನಾದ ಎಎನ್ ಕಾಲೇಜಿನಲ್ಲಿ ಎಲೆಕ್ಟ್ರಾನಿಕ್ ಮತಯಂತ್ರಗಳನ್ನು (ಇವಿಎಂ) ಇಡಲಾಗುತ್ತಿರುವ ಸ್ಟ್ರಾಂಗ್ ರೂಮ್‌ನಲ್ಲಿ ಪೊಲೀಸ್ ಸಿಬ್ಬಂದಿ ಕಾವಲು ಕಾಯುತ್ತಿದ್ದಾ-ರೆ. ನವೆಂಬರ್ 6 ರಂದು ನಡೆದ ಮೊದಲ ಹಂತದ ಮತದಾನವು 18 ಜಿಲ್ಲೆಗಳ 121 ಕ್ಷೇತ್ರಗಳನ್ನು ಒಳಗೊಂಡಿತ್ತು ಮತ್ತು 65.08% ಮತದಾನವಾಗಿದೆ, ಇದು 2020 ರ ವಿಧಾನಸಭಾ ಚುನಾವಣೆಯಲ್ಲಿ ದಾಖಲಾದ 57.29% ಮತದಾನಕ್ಕಿಂತ ಗಮನಾರ್ಹವಾಗಿ ಹೆಚ್ಚಾಗಿದೆ.

ಇಂದು ನಿಗದಿಯಾಗಿರುವ ಎರಡನೇ ಹಂತದಲ್ಲಿ ಗಯಾ, ನವಾಡಾ, ಜಮುಯಿ, ಭಾಗಲ್ಪುರ್ ಮತ್ತು ಪೂರ್ಣಿಯಾ ಸೇರಿದಂತೆ 20 ಜಿಲ್ಲೆಗಳ ಉಳಿದ 122 ಕ್ಷೇತ್ರಗಳಿಗೆ ಮತದಾನ ನಡೆಯಲಿದೆ.ಬಿಹಾರದ ಮುಖ್ಯ ಚುನಾವಣಾ ಅಧಿಕಾರಿ (ಸಿಇಒ) ಮೊದಲ ಹಂತದ ಮತದಾನ ಶಾಂತಿಯುತವಾಗಿ ಮುಕ್ತಾಯಗೊಂಡಿದೆ ಮತ್ತು ಹಿಂದಿನ ವಿಧಾನಸಭಾ ಚುನಾವಣೆಗಳಿಗೆ ಹೋಲಿಸಿದರೆ ಮತದಾರರ ಭಾಗವಹಿಸುವಿಕೆಯಲ್ಲಿ ಸುಮಾರು 8% ಹೆಚ್ಚಳವಾಗಿದೆ ಎಂದು ದೃಢಪಡಿಸಿದ್ದಾರೆ.

ಬಿಜೆಪಿ, ಜೆಡಿ(ಯು), ಹಿಂದೂಸ್ತಾನಿ ಅವಾಮ್ ಮೋರ್ಚಾ (ಜಾತ್ಯತೀತ) ಮತ್ತು ಸಣ್ಣ ಪಾಲುದಾರರನ್ನು ಒಳಗೊಂಡಿರುವ ಆಡಳಿತಾರೂಢ ಎನ್‌ಡಿಎ, ಪ್ರಸ್ತುತ ಹೊರಹೋಗುವ ವಿಧಾನಸಭೆಯಲ್ಲಿ 132 ಶಾಸಕರ ಬಲವನ್ನು ಹೊಂದಿದೆ ? ಬಹುಮತಕ್ಕೆ ಅಗತ್ಯವಿರುವ 122-ಅಂಕಗಳಿಗಿಂತ ಸ್ವಲ್ಪ ಹೆಚ್ಚಿದೆ. 2020 ರಲ್ಲಿ ಏಕೈಕ ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮಿದ ಆರ್‌ಜೆಡಿ ಈಗ 75 ಶಾಸಕರನ್ನು ಹೊಂದಿದೆ, ನಂತರ ಕಾಂಗ್ರೆಸ್ (19) ಮತ್ತು ಸಿಪಿಐ (ಎಂಎಲ್)-ಲಿಬರೇಷನ್ (12) ಇವೆ.ಬಿಹಾರ ರಾಜಕೀಯದಲ್ಲಿ ಸುಮಾರು ಎರಡು ದಶಕಗಳಿಂದ ಪ್ರಬಲ ವ್ಯಕ್ತಿಯಾಗಿರುವ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರು 2020 ರಿಂದ ಹಲವು ಬಾರಿ ಮೈತ್ರಿಗಳನ್ನು ಬದಲಾಯಿಸಿದ್ದಾರೆ.

## ಜಿಲ್ಲಾ ಮಟ್ಟದ ಮಕ್ಕಳ ದಿನಾಚರಣೆ

**ದಾವಣಗೆರೆ:** ರಾಜ್ಯ ಭಾಲಭವನ ಸೊಸೈಟಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಬಾಲಭವನ ಸಮಿತಿ, ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು ಇವರುಗಳ ಸಂಯುಕ್ತಾಶ್ರಯದಲ್ಲಿ ನವಂಬರ್ 12 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜೆ.ಹೆಚ್ ಪಟೇಲ್ ಬಡಾವಣೆಯ ಜಿಲ್ಲಾ ಬಾಲಭವನದಲ್ಲಿ ಜಿಲ್ಲಾ ಮಟ್ಟದ ಮಕ್ಕಳ ದಿನಾಚರಣೆಯನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮವನ್ನು ಜಿ.ಪಂ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ಮಾಧವ್ ವಿಠ್ಠಲ್ ರಾವ್ ಉದ್ಘಾಟಿಸುವರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಕೆ.ಎಸ್ ರಾಜಾನಾಯ್ಕ ಅಧ್ಯಕ್ಷತೆ ವಹಿಸುವರು.

### ದೆಹಲಿಯ ಕೆಂಪುಕೋಟೆ ಮೆಟ್ರೋ ನಿಲ್ದಾಣದ ಬಳಿ ಕಾರು ಸ್ಫೋಟ:

## 8 ಮಂದಿ ಸಾವು, ಹಲವರಿಗೆ ಗಾಯ



**ಹೊಸದಿಲ್ಲಿ:** ಬಿಗಿ ಭದ್ರತಾ ವಲಯವಾಗಿರುವ ದೆಹಲಿಯ ಕೆಂಪು ಕೋಟೆ ಮೆಟ್ರೋ ನಿಲ್ದಾಣದ ಬಳಿ ಕಾರೊಂದರಲ್ಲಿ ಸಂಭವಿಸಿದ ಭೀಕರ ಸ್ಫೋಟದಿಂದಾಗಿ ಎಂಟು ಮಂದಿ ಸಾವನ್ನಪ್ಪಿದ್ದು, ಹಲವರ ದೇಹಗಳು ಛಿದ್ರ ಛಿದ್ರವಾಗಿವೆ. ಈ ಘಟನೆಯಿಂದ ಇಡೀ ದೆಹಲಿ ಬೆಚ್ಚಿಬಿದ್ದಿದ್ದು, ಹೈ ಅಲರ್ಟ್ ಘೋಷಿಸಲಾಗಿದೆ.

ಸೋಮವಾರ(ನ.10) ಸಂಜೆ ಸುಮಾರು 6:55ಕ್ಕೆ ಕೆಂಪು ಕೋಟೆ ಲಾ ಕಿಲಾ ಮೆಟ್ರೊ ನಿಲ್ದಾಣ ಗೇಟ್ ಸಂಖ್ಯೆ 1ರ ಚಾಂದನಿ ಚೌಕ್‌ನ ಲಾಲ್ ಕಿಲಾ ಬಳಿ ನಿಂತಿದ್ದ ಕಾರಿನಲ್ಲಿ ಪ್ರಬಲ ಸ್ಫೋಟ ಸಂಭವಿಸಿದೆ. ಸ್ಫೋಟದ ತೀವ್ರತೆಗೆ ಹಲವರ ದೇಹಗಳು ಗುರುತು ಸಿಗದಂತೆ ಛಿದ್ರಗೊಂಡಿವೆ. ಈವರೆಗೆ ಎಂಟು ಮಂದಿ ಮೃತಪಟ್ಟಿದ್ದಾರೆ ಎಂದು ಖಾಸಗಿ ಮಾಧ್ಯಮಗಳು ವರದಿ ಮಾಡಿವೆ. ಏಳೆಂಟಕ್ಕೂ ಹೆಚ್ಚು ಮಂದಿ ಗಂಭೀರವಾಗಿ ಗಾಯಗೊಂಡಿದ್ದು, ಅವರನ್ನು ಸಮೀಪದ ಆಸ್ಪತ್ರೆಗೆ ದಾಖಲಿಸಲಾಗಿದೆ. ಇನ್ನು ಹೆಚ್ಚು ಮಂದಿ ಮೃತಪಡುವ ಸಾಧ್ಯತೆ ಇದೆ ಎನ್ನಲಾಗಿದೆ.

ಮೆಟ್ರೋ ನಿಲ್ದಾಣದ ಬಳಿ ಕಾರು ಸ್ಫೋಟ ಸಂಭವಿಸಿರುವ ಬಗ್ಗೆ ಕರೆ ಬಂದಿತ್ತು. ಸ್ಫೋಟದ ತೀವ್ರತೆಗೆ ಕಾರಿನಲ್ಲಿ ಬೆಂಕಿ ಕಾಣಿಸಿಕೊಂಡಿದ್ದು, ನೋಡನೋಡುತ್ತಿದ್ದಂತೆ ಪಕ್ಕದಲ್ಲಿದ್ದ 3-4 ವಾಹನಗಳಿಗೂ ಬೆಂಕಿ ವ್ಯಾಪಿಸಿದೆ ಎಂದು ಅಗ್ನಿಶಾಮಕ ದಳವು ಮಾಹಿತಿ ನೀಡಿದೆ.ಕಾರು ಸ್ಫೋಟಗೊಂಡ ಮಾಹಿತಿ ತಿಳಿಯುತ್ತಲೇ ಪೊಲೀಸರು ಮತ್ತು ಅಗ್ನಿಶಾಮಕ ದಳದ ಸಿಬ್ಬಂದಿ ಸ್ಥಳಕ್ಕೆ ದೌಡಾಯಿಸಿ, ತ್ವರಿತವಾಗಿ ಬೆಂಕಿಯನ್ನು ನಿಯಂತ್ರಣಕ್ಕೆ ತಂದರು. ಸದ್ಯ ನಗರದಾದ್ಯಂತ ಪೊಲೀಸರು ಹೈ ಅಲರ್ಟ್ ಘೋಷಿಸಿದ್ದು ಕಟ್ಟುನಿಟ್ಟಿನ ಕ್ರಮ ಕೈಗೊಂಡಿದ್ದಾರೆ.

ಮುನ್ನೆಚ್ಚರಿಕಾ ಕ್ರಮವಾಗಿ ಇಡೀ ಪ್ರದೇಶವನ್ನು ಸುತ್ತುವರಿದು ಬಂದ್ ಮಾಡಲಾಗಿದೆ. ಸ್ಫೋಟಕ್ಕೆ ನಿಖರ ಕಾರಣವನ್ನು ಪತ್ತೆಹಚ್ಚಲು ವಿಧಿವಿಜ್ಞಾನ ತಜ್ಞರು ಸ್ಥಳವನ್ನು ಪರಿಶೀಲಿಸುತ್ತಿದ್ದಾರೆ. ಇದರ ಹಿಂದೆ ಯಾವುದೇ ವಿಧ್ವಂಸಕ ಕೃತ್ಯದ ಸಾಧ್ಯತೆ.

## ಕಾಂಗ್ರೆಸ್‌ನ ಓಟ್ ಚೋರಿ ಆರೋಪ ಭೂತದ ಬಾಯಲ್ಲಿ ಭಗವದ್ಗೀತೆ ಕೇಳಿದಂತೆ: ಎಂ.ಪಿ.ಆರ್. ಲೇವಡಿ



**ದಾವಣಗೆರೆ.ನ.10:** ದೇಶದಲ್ಲಿ ಓಟ್ ಚೋರಿ ಮಾಡಿಕೊಂಡೆ 70 ವರ್ಷ ಆಡಳಿತ ನಡೆಸಿದ ಕಾಂಗ್ರೆಸ್ ಈಗ ಚುನಾವಣಾ ಆಯೋಗದ ವಿರುದ್ಧ ಓಟ್ ಚೋರಿ ಆರೋಪ ಮಾಡುತ್ತಿರುವುದು ಭೂತದ ಬಾಯಲ್ಲಿ ಭಗವದ್ಗೀತೆ ಕೇಳಿದಂತಿವೆ ಎಂದು ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಲೇವಡಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮತ ಕಳ್ಳತನ ಆರಂಭಿಸಿದ್ದೇ ಕಾಂಗ್ರೆಸ್ ಪಕ್ಷ. ಹೀಗಾಗಿ ಕಾಂಗ್ರೆಸ್ಸಿಗೆ ಓಟ್ ಚೋರಿ ಬಗ್ಗೆ ಮಾತನಾಡುವ ಯಾವುದೇ ನೈತಿಕತೆ ಇಲ್ಲ. ಮತಗಳ್ಳತನ ಮಾಡಿದ್ದರಿಂದಲೇ ಕಾಂಗ್ರೆಸ್ ಅನೇಕ ವರ್ಷಗಳ ಕಾಲ ಆಡಳಿತ ನಡೆಸುವುದು ಸಾಧ್ಯವಾಯಿತು ಎಂದರು.

ಮಾಜಿ ಪ್ರಧಾನಿ ಇಂದಿರಾ ಗಾಂಧಿ ಚುನಾವಣಾ ಪೂರ್ವದಲ್ಲಿ ಮಾಡಿದ ಅಕ್ರಮದಲ್ಲಿ ತಪ್ಪಿತಸ್ಥರೆಂಬುದು ನ್ಯಾಯಾಲಯದಲ್ಲಿ ಸಾಬೀತಾಗಿ ಲೋಕಸಭಾ ಸದಸ್ಯತ್ವ ಕಳೆದುಕೊಂಡು ಜೈಲಿಗೆ ಹೋಗುವ ಸಂದರ್ಭ ಬಂದಿತ್ತು. ಅದರಿಂದ ತಪ್ಪಿಸಿಕೊಳ್ಳಲಿಕ್ಕಾಗಿಯೇ ದೇಶದ ಮೇಲೆ ತುರ್ತು ಪರಿಸ್ಥಿತಿ ಹೇರಿದ್ದನ್ನು ಜನ ಮರೆತಿಲ್ಲ. ಇಂತಹವರ ಮೊಮ್ಮಗ ರಾಹುಲ್ ಗಾಂಧಿ ಕೇಂದ್ರ ಚುನಾವಣಾ ಆಯೋಗದ ವಿರುದ್ಧ ಮಾಡಿರುವ ಆರೋಪಗಳು ಭೂತದ ಬಾಯಲ್ಲಿ ಭಗವದ್ಗೀತೆ ಕೇಳಿದಂತಿವೆ ಎಂದು ಲೇವಡಿ ಮಾಡಿದರು.

ಚುನಾವಣಾ ಆಯೋಗವು ಸ್ವಾಯತ್ತ ಸಂಸ್ಥೆಯಾಗಿದ್ದು, ಅದರ ಮೇಲೆ ಯಾವುದೇ ಸರ್ಕಾರ ಅಧಿಕಾರ ಚಲಾಯಿಸಲು ಸಾಧ್ಯವಿಲ್ಲ. ಬಿಜೆಪಿ ಮತಗಳ್ಳತನ ಮಾಡಿದ್ದರೆ ಕರ್ನಾಟಕದಲ್ಲಿ ಕಾಂಗ್ರೆಸ್ 136 ಸ್ಥಾನ ಗೆದ್ದು ಅಧಿಕಾರಕ್ಕೆ ಬರುತ್ತಿರಲಿಲ್ಲ. ಕನಕಪುರದಲ್ಲಿ ಡಿ.ಕೆ.ಶಿವಕುಮಾರ್ 2 ಲಕ್ಷಕ್ಕೂ ಹೆಚ್ಚು ಮತಗಳ ಅಂತರದಿಂದ ಗೆದ್ದದ್ದು ಮತಗಳ್ಳತನವೇ? ವರುಣ ಕ್ಷೇತ್ರದಲ್ಲಿ ಸಿದ್ದರಾಮಯ್ಯ 40 ಸಾವಿರ ಮತಗಳ ಅಂತರದಿಂದ ಗೆದ್ದದ್ದು ಏನು? ಎಂದು ಅವರು ಪ್ರಶ್ನಿಸಿದರು.

ಸಿಎಂ ಸಿದ್ದರಾಮಯ್ಯನವರ ಅಪ್ತ ಸಿ.ಎಂ.ಇಬ್ರಾಹಿಂ 3 ಸಾವಿರ ಮತಗಳನ್ನು ಖರೀದಿ ಮಾಡಿದ್ದೇವೆ ಅಂತಾ ಹೇಳಿದ್ದರು. ಅದರ ಬಗ್ಗೆ ರಾಹುಲ್ ಗಾಂಧಿ ಮೌನವಾಗಿರುವುದು ಏಕೆ? ರಾಹುಲ್ ಗಾಂಧಿ ಮಾತುಗಳನ್ನು ಕಾಂಗ್ರೆಸ್ ಪಕ್ಷದಲ್ಲಿಯೇ ಯಾರೂ ನಂಬುವುದಿಲ್ಲ. ಸಿದ್ದರಾಮಯ್ಯ ಕುರ್ಚಿ ಕಳೆದುಕೊಳ್ಳುವ ಭೀತಿಯಲ್ಲಿದ್ದಾರೆ. ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗಲು ಮತಗಳ್ಳತನ ವಿರುದ್ಧ ಸಹಿ ಸಂಗ್ರಹಿಸುವ ಪ್ರಹಸನದ ಅಭಿಯಾನ ಆರಂಭಿಸಿದ್ದಾರೆ ಎಂದು ಹೇಳಿದರು. ನಾವು ಕೂಡ ಕಾಂಗ್ರೆಸ್ಸಿಗಿಂತ ಮೂರು ಪಟ್ಟು ಸಹಿ ಸಂಗ್ರಹಿಸುವ ಸಾಮರ್ಥ್ಯ ಹೊಂದಿದ್ದೇವೆ. ಓಟ್ ಚೋರಿ ಆರೋಪ ನಿಜವಾಗಿದ್ದರೆ ಕಾಂಗ್ರೆಸ್ ನಾಯಕರು ಚುನಾವಣಾ ಆಯೋಗ ಅಥವಾ ನ್ಯಾಯಾಲಯಕ್ಕೆ ದೂರು ನೀಡಲಿ. ಬಿಹಾರ ಚುನಾವಣಾ ಫಲಿತಾಂಶ ಬಂದ ನಂತರ ಇವೆಲ್ಲಾ ನಾಟಕ ಮುಗಿಯುತ್ತವೆ ಎಂದು ಅವರು ನುಡಿದರು.

ರಾಜ್ಯದಲ್ಲಿ ಅಭಿವೃದ್ಧಿ ಕೆಲಸಗಳು ಸಂಪೂರ್ಣವಾಗಿ ನಿಂತುಹೋಗಿವೆ. ಸಿಎಂ ಸಿದ್ದರಾಮಯ್ಯ ಗ್ಯಾರಂಟಿಗಳ ಭ್ರಮೆಯಲ್ಲಿ ರಾಜ್ಯವನ್ನು ನರಕದ ಪರಿಸ್ಥಿತಿಗೆ ತಳ್ಳಿದ್ದಾರೆ. ಈ ಮಧ್ಯೆ ರಾಜ್ಯ ರಾಜಕೀಯದಲ್ಲಿ ಬಿರುಕು ಕಾಣಿಸುತ್ತಿದೆ. ಒಳ ಜಗಳದಲ್ಲಿ ಸರ್ಕಾರ ಪತನವಾಗುತ್ತದೆ ಅಂತಾ ಕಾಂಗ್ರೆಸ್ ಹಿರಿಯ ನಾಯಕರೇ ಹೇಳುತ್ತಿದ್ದಾರೆ. ಸಿಎಂ ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ನಡುವಿನ ಅಸಮಾಧಾನ, ಒಳಜಗಳದಿಂದ ಕಾಂಗ್ರೆಸ್ ಸರ್ಕಾರ ನವೆಂಬರ್ 26ರೊಳಗೆ ಪತನವಾಗುವುದು ಖಚಿತ. ಕಾದು ನೋಡಿ ಎಂದು ಅವರು ಭವಿಷ್ಯ ನುಡಿದರು.

ಆರೆಸ್ಸೆಸ್ ಪಥ ಸಂಚಲನ ವಿರೋಧಿಸಿ ಸರ್ಕಾರಕ್ಕೆ ಪತ್ರ ಬರೆದವರು, ನ್ಯಾಯಾಲಯಕ್ಕೆ ಓಡಿದವರು ದೇವನಹಳ್ಳಿ ವಿಮಾನ ನಿಲ್ದಾಣದಲ್ಲಿ ಮುಸ್ಲಿಮರು ನಮಾಜ್ ಮಾಡಿದ್ದರ ಬಗ್ಗೆ ಮೌನವಾಗಿದ್ದಾರೆ. ಸರ್ಕಾರ ಎಲ್ಲರಿಗೂ ಒಂದೇ ನಿಯಮ ಅನ್ವಯಿಸಬೇಕು. ಏರ್ ಪೋರ್ಟ್ ನಲ್ಲಿ ನಮಾಜ್ ಮಾಡುವುದು ಸರಿಯಲ್ಲ. ಇಂತಹ ಘಟನೆಗಳ ವಿರುದ್ಧ ಸರ್ಕಾರ ಕ್ರಮ ಕೈಗೊಳ್ಳಬೇಕು. ಆದರೆ ಕಾಂಗ್ರೆಸ್ ಸರ್ಕಾರ ದ್ವಂದ್ವ ನೀತಿ ಅನುಸರಿಸುತ್ತಿದೆ.

## ಸಿಎಂ ಮನೆಗೆ ಮುತ್ತಿಗೆ ಯತ್ನ ಬಿಜೆಪಿ ನಾಯಕರು ಪೊಲೀಸರ ವಶಕ್ಕೆ



**ಬೆಂಗಳೂರು:** ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲಿನಲ್ಲಿ ಖೈದಿಗಳಿಗೆ ರಾಜ್ಯಾತಿಥ್ಯ ನೀಡುತ್ತಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ಧರಾಮಯ್ಯ, ಗೃಹ ಸಚಿವ ಡಾ.ಜಿ. ಪರಮೇಶ್ವರ್‌ರವರ ರಾಜೀನಾಮೆಗೆ ಆಗ್ರಹಿಸಿ ಮುಖ್ಯಮಂತ್ರಿಗಳ ಮನೆಗೆ ಮುತ್ತಿಗೆ ಹಾಕಲು ಯತ್ನಿಸಿದ ಬಿಜೆಪಿ ನಾಯಕರುಗಳನ್ನು ಪೊಲೀಸರು ವಶಕ್ಕೆ ಪಡೆದುಕೊಂಡರು.

ಜೈಲುಗಳಲ್ಲಿ ಖೈದಿಗಳಿಗೆ ರಾಜ್ಯಾತಿಥ್ಯ ಸಿಗುತ್ತಿದೆ. ಇದಕ್ಕೆ ಹೊಣೆ ಹೊತ್ತು ಮುಖ್ಯಮಂತ್ರಿಗಳು, ಗೃಹ ಸಚಿವರು ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಪ್ರತಿಪಕ್ಷ ನಾಯಕರುಗಳಾದ ಆರ್. ಅಶೋಕ್, ಚಲವಾದಿ ನಾರಾಯಣಸ್ವಾಮಿ ನೇತೃತ್ವದಲ್ಲಿ ಬಿಜೆಪಿಯ ಶಾಸಕರು, ಕಾರ್ಯಕರ್ತರು ಇಂದು ಮುಖ್ಯಮಂತ್ರಿಗಳ ಮನೆಗೆ ಮುತ್ತಿಗೆ ಹಾಕಲು ಮುಂದಾದಾಗ ಅವರನ್ನು ತಡೆದ ಪೊಲೀಸರು ಎಲ್ಲ ನಾಯಕರನ್ನು ವಶಕ್ಕೆ ಪಡೆದು, ಪೊಲೀಸ್ ವ್ಯಾನ್ ಹತ್ತಿಸಿಕೊಂಡು ಮುಖ್ಯಮಂತ್ರಿಗಳ ಮನೆ ಮುತ್ತಿಗೆ ಪ್ರಯತ್ನವನ್ನು ವಫಲಗೊಳಿಸಿದರು.

ಜೈಲಿನಲ್ಲಿ ಖೈದಿಗಳಿಗೆ ರಾಜ್ಯಾತಿಥ್ಯ ನೀಡುತ್ತಿರುವುದನ್ನು ಖಂಡಿಸಿ ಬಿಜೆಪಿ ನಾಯಕರುಗಳು ಘೋಷಣೆಗಳನ್ನು ಕೂಗಿದರು.

**ಜೈಲು ನೈಟ್ ಕ್ಲಬ್ ಆಗಿದೆ:ಬಿವೈವಿ**

ಈ ಪ್ರತಿಭಟನೆಯಲ್ಲಿ ಪಾಲ್ಗೊಂಡು ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರದ, ಪರಪ್ಪನ ಅಗ್ರಹಾರ ಜೈಲು ಒಂದ ರೀತಿ ನೈಟ್ ಕ್ಲಬ್ ಆಗಿದೆ.

ಭಯೋತ್ಪಾದಕರು, ಐಎಸ್‌ಐ ಏಜೆ-ಂಟರು ಮುಸ್ಲಿಂ ಮೂಲಭೂತವಾದಿಗಳು ಎಲ್ಲರಿಗೂ ಪರಪ್ಪನ ಅಗ್ರಹಾರ ಜೈಲು ಮನರಂಜನಾ ಕ್ಲಬ್ ಆಗಿದೆ. ಇಂತಹ ದೇಶ ದ್ರೋಹಿಗಳಿಗೆ ಟಿವಿ, ಮೊಬೈಲ್ ಫೋನ್, ಗುಂಡು ತುಂಡುಗಳ ವ್ಯವಸ್ಥೆ ಕಲ್ಪಿಸಲಾಗುತ್ತಿದೆ ಎಂದು ದೂರಿದರು.

## ಭೂರಹಿತ ಭೋವಿ ಮಹಿಳಾ ಕೃಷಿ ಕಾರ್ಮಿಕರಿಗೆ ಜಮೀನು ಖರೀದಿಗೆ ನೆರವು: ರಾಮಪ್ಪ



**ಚಿಕ್ಕಮಗಳೂರು, ನ.10:** ಭೂ ಒಡೆತನ ಯೋಜನೆಯಡಿ ಭೋವಿ ಸಮುದಾಯದ ಭೂ ರಹಿತ ಮಹಿಳಾ ಕೃಷಿ ಕಾರ್ಮಿಕರಿಗೆ ಜಮೀನು ಖರೀದಿಸಲು ನಿಗಮದಿಂದ ರೂ. 20 ಲಕ್ಷ ಧನಸಹಾಯ ನೀಡಲಾಗುವುದು ಎಂದು ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ರಾಮಪ್ಪ ಎಂ. ತಿಳಿಸಿದರು.

ಇಂದು ನಗರದ ಜಿಲ್ಲಾ ಪಂಚಾಯಿತಿ ಅಬ್ದುಲ್ ನಜೀರ್‌ಸಾಬ್ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಅವರು ನಿಗಮದ ಯೋಜನೆಗಳ ಕುರಿತು ಮಾತನಾಡಿ, ಫಲಾನುಭವಿಯು ವಾಸಿಸುತ್ತಿರುವ ಸ್ಥಳದಿಂದ ಗರಿಷ್ಠ 10 ಕಿ.ಮೀ. ವ್ಯಾಪ್ತಿಯೊಳಗೆ ಜಮೀನು ಖರೀದಿಸಿ ಭೋವಿ ಸಮುದಾಯದ ಭೂರಹಿತ ಮಹಿಳಾ ಕೃಷಿ ಕಾರ್ಮಿಕರನ್ನು ಭೂ ಮಾಲೀಕರನ್ನಾಗಿ ಮಾಡುವುದು ಈ ಯೋಜನೆಯ ಉದ್ದೇಶವಾಗಿದೆ ಎಂದರು.

ಜಿಲ್ಲೆಯಲ್ಲಿ ಭೋವಿ ಸಮುದಾಯವು 5 ವಿಧಾನಸಭಾ ಕ್ಷೇತ್ರಗಳಿಂದ 33.000 ಜನಸಂಖ್ಯೆ ಇರುವುದಾಗಿ ಅಂಕಿ ಅಂಶದ ಮೂಲಕ ತಿಳಿದು ಬಂದಿದ್ದು, ಈ ಕಾರಣದಿಂದಾಗಿ ಅಧಿಕಾರಿಗಳು ಜೊತೆಗೂಡಿ ಸಂಪೂರ್ಣವಾಗಿ ಎಲ್ಲ 8 ಯೋಜನೆಗಳ ಬಗ್ಗೆ ವಿವರಣೆಯನ್ನು ಕೊಡುವುದರ ಮೂಲಕ ಸರ್ಕಾರದ ಸೌಲಭ್ಯಗಳು ಸಮುದಾಯದ ಜನರಿಗೆ ತಲುಪಲು ಅಧಿಕಾರಿಗಳು ಹೆಚ್ಚು ಪ್ರಚಾರ ಕೈಗೊಂಡು ಯೋಜನೆಯ ಲಾಭ ದೊರೆಯುವಂತೆ ಮಾಡಬೇಕು ಎಂದರು. ಕುರಿ ಮೇಕೆ ಸಾಕಾಣಿಕೆ ಯೋಜನೆಯಡಿ 10 ಕುರಿ 1 ಟಗರು ಖರೀದಿಸಲು ಒಂದು ಲಕ್ಷ ಸಹಾಯಧನ ಪಡೆಯುವ ಅವಕಾಶವಿದ್ದು, ಸಮುದಾಯದ ಜನರು ಇದರ ಸದುಪಯೋಗ ಪಡೆದುಕೊಳ್ಳಬೇಕು. ಹೈನುಗಾರಿಕೆ ಮಾಡುವವರಿಗೆ 2 ಹಸು ನೀಡಲಾಗುವುದು. ಸ್ವಯಂ ಉದ್ಯೋಗ ಕೈಗೊಳ್ಳಲು ಸ್ವಯಂ ಸ್ವಾವಲಂಬಿ ಎಂಬ ಸಾರಥಿ ಹಳದಿ ಬೋರ್ಡಿನ ಯೋಜನೆಯಡಿ ರೂ.4 ಲಕ್ಷ ವಾಹನ ಖರೀದಿಗೆ ಧನಸಹಾಯ ನೀಡಲಾಗುತ್ತದ' ಎಂದ ಅವರು ಗಂಗಾ ಕಲ್ಯಾಣ ಯೋಜನೆಯಡಿ ರೈತರಿಗೆ ಕೊಳವೆ ಬಾವಿ ಕೊರೆದು ಪಂಪ್‌ಸೆಟ್ ಆಳವಡಿಸಿ ವಿದ್ಯುದ್ದೀಕರಣಗೊಳಿಸಿ ನೀರಾವರಿ ಸೌಲಭ್ಯ ಕಲ್ಪಿಸಲು ರೂ.3.75 ಲಕ್ಷ ಧನಸಹಾಯ ನೀಡಲಾಗುವುದು ಎಂದು ತಿಳಿಸಿದರು. ಮೈಕ್ರೋಕ್ರೆಡಿಟ್ ಯೋಜನೆಯಡಿ 10 ಜನ ಮಹಿಳಾ ಸದಸ್ಯರು ಸಂಘವನ್ನು ನೋಂದಾಯಿಸಿಕೊಂಡಿದ್ದರೆ, ಅಂತಹ ಮಹಿಳಾ ಸಂಘದ ಮಹಿಳಾ ಸದಸ್ಯರಿಗೆ 5 ಲಕ್ಷ ರೂ ಸಹಾಯಧನದೊಂದಿಗೆ ಸಾಲ ಸೌಲಭ್ಯ ನೀಡಲಾಗುವುದು. ಈ ಆರ್ಥಿಕ ನೆರವನ್ನು ಅವರು ಬಳಸಿಕೊಂಡು ತಮ್ಮದೇ ಆದ ಸ್ವಂತ ಉದ್ಯೋಗದ ಮೂಲಕ ಅವರನ್ನು ಸಬಲರನ್ನಾಗಿ ಮಾಡುವ ಉದ್ದೇಶ ನಮ್ಮ ನಿಗಮದ್ದಾಗಿದೆ. ಪ್ರತಿ ಜಿಲ್ಲೆಗೆ ಭೇಟಿ ನೀಡಿ ಫಲಾನುಭವಿಗಳಿಗೆ ಸಿಗಬೇಕಾದ ಸೌಲಭ್ಯವನ್ನು ಮಾರ್ಚ್ 31ರೊಳಗೆ ನೇರವಾಗಿ ತಲುಪಿಸಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ತಿಳಿಸಿದರು.

ಗೋಷ್ಠಿಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಬಿ.ಮಾಲತಿ, ಕ್ಯಾಪ್ಟನ್ ರಾಜೇಶ್ ಜಯಸಿಂಹ, ನಿಗಮದ ಅಧಿಕಾರಿ ಮನೀಶ್ ನಾಯಕ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ರಾಶಿ ಭವಿಷ್ಯ

### ಮೇಷ ರಾಶಿ

ಮೋಜಿಗಾಗಿ ಹೊರಹೋಗುವವರಿಗೆ ಸಂತೋಷ ಮತ್ತು ಆನಂದವನ್ನು ಹಂಚಿಕೊಳ್ಳಿ. ವಿವಾಹಿತ ಜನರು ಇಂದು ತಮ್ಮ ಮಕ್ಕಳ ಶಿಕ್ಷಣದ ಮೇಲೆ ಹೆಚ್ಚು ಹಣವನ್ನು ಖರ್ಚು ಮಾಡಬೇಕಾಗುತ್ತದೆ. ಒಬ್ಬರು ಇನ್ನೊಬ್ಬರ ದೃಷ್ಟಿಕೋನವನ್ನು ಅರ್ಥಮಾಡಿಕೊಳ್ಳುವ ಮೂಲಕ ವೈಯಕ್ತಿಕ ಸಮಸ್ಯೆಗಳನ್ನು ಪರಿಹರಿಸಿ. ಅವುಗಳನ್ನು ಸಾರ್ವಜನಿಕಗೊಳಿಸಿದರೆ ನಿಮಗೆ ಅಪಖ್ಯಾತಿ ಉಂಟಾಗುವ ಸಾಧ್ಯತೆಗಳು ಹೆಚ್ಚಿರುತ್ತವೆ.

### ವೃಷಭ ರಾಶಿ

ನಗು ನಿಮ್ಮ ಎಲ್ಲ ಸಮಸ್ಯೆಗಳಿಗೆ ಪರಿಹಾರವಾದ್ದರಿಂದ ನಕ್ಕುಬಿಡಿ. ಇಂದು ನೀವು ಭೂಮಿ, ವಸತಿ, ಅಥವಾ ಸಾಂಸ್ಕೃತಿಕ ಯೋಜನೆಗಳಿಗೆ ಸಂಬಂಧಿಸಿದ ಸಮಸ್ಯೆಗಳಿಗೆ ಗಮನ ನೀಡಬೇಕು. ಸ್ನೇಹಿತರು ಮತ್ತು ಸಂಬಂಧಿಗಳೊಡನೆ ಆನಂದಿಸಿ. ಪ್ರತಿ ದಿನ ಪ್ರೀತಿಯಲ್ಲಿ ಬೀಳುವ ನಿಮ್ಮ ಸ್ವಭಾವವನ್ನು ಬದಲಾಯಿಸಿ. ನಿಮ್ಮ ಶ್ರಮ ಕೆಲಸದಲ್ಲಿ ಇಂದು ಫಲ ನೀಡುತ್ತದೆ. ಇಂದು ನೀವು ಎಲ್ಲಾ ಕೆಲಸಗಳನ್ನು ಹೊರತುಪಡಿಸಿ, ಬಾಲ್ಯದಲ್ಲಿ ನೀವು ಮಾಡಲು ಇಷ್ಟಪಟ್ಟ ಕೆಲಸಗಳನ್ನು ಮಾಡಲು ಇಷ್ಟಪಡುತ್ತೀರಿ

### ಮಿಥುನ ರಾಶಿ

ಜೀವನದೆಡೆಗೆ ಉದಾರವಾದ ಮನೋಭಾವ ಹೊಂದಿ. ದೂರು ನೀಡುವುದು ಮತ್ತು ನಿಮ್ಮ ಜೀವನಮಟ್ಟದ ಬಗೆಗೆ ಅಸಮಾಧಾನ ಹೊಂದುವುದರಿಂದ ಯಾವುದೇ ಪ್ರಯೋಜನವಿಲ್ಲ. ಇದು ಜೀವನದ ಸುಗಂಧವನ್ನು ಹಾಳುಮಾಡುವ ಹಾಗೂ ಒಂದು ಸಮೃದ್ಧ ಜೀವನವನ್ನು ನಡೆಸುವ ಬಯಕೆಯನ್ನು ಸಾಯಿಸುವ ನೀಚ ಚಿಂತನೆಯಾಗಿದೆ. ನಿಕಟ ಸಂಬಂಧಿಗಳ ಮನೆಗೆ ಹೋಗುವುದರಿಂದ ಇಂದು ನಿಮ್ಮ ಆರ್ಥಿಕ ಪರಿಸ್ಥಿತಿ ಹಾಳಾಗಬಹುದು.

### ಕರ್ಕ ರಾಶಿ

ನಿಮ್ಮ ಶಕ್ತಿಯ ಮಟ್ಟ ಹೆಚ್ಚಿರುತ್ತದೆ. ಹಣಕಾಸಿನಲ್ಲಿ ಸುಧಾರಣೆ ನಿಶ್ಚಿತ. ನೀವು ನಂಬುವ ಯಾರಾದರೂ ನಿಮಗೆ ಸಂಪೂರ್ಣ ನಿಜ ಹೇಳದಿರಬಹುದು – ಇತರರು ಮನವೊಲಿಸುವ ನಿಮ್ಮ ಸಾಮರ್ಥ್ಯ ಬರುವ ಸಮಸ್ಯೆಗಳನ್ನು ಪರಿಹರಿಸಲು ಸಹಾಯ ಮಾಡುತ್ತದೆ. ಪ್ರೀತಿಯ ಇಂದ್ರಜಾಲ ಇಂದು ನಿಮ್ಮನ್ನು ಕಟ್ಟಿಹಾಕಲಿದೆ. ಕೇವಲ ಈ ಆನಂದವನ್ನು ಆಸ್ವಾದಿಸಿ.

### ಸಿಂಹ ರಾಶಿ

ಕುಡಿಯುವ ಅಭ್ಯಾಸವನ್ನು ತೊಡೆದುಹಾಕಲು ಇದೊಂದು ಅತ್ಯಂತ ಪವಿತ್ರವಾದ ದಿನ. ನೀವು ವೈನ್ ಕುಡಿಯುವುದು ಆರೋಗ್ಯದ ಪ್ರಾಣಾಂತಿಕ ಶತ್ರು ಎಂದು ನೀವು ಅರ್ಥ ಮಾಡಿಕೊಳ್ಳಬೇಕು ಮತ್ತು ಇದು ನಿಮ್ಮ ಸಾಮರ್ಥ್ಯವನ್ನು ಕುಂಠಿತಗೊಳಿಸುತ್ತದೆ. ಕೆಲವು ಪ್ರಮುಖ ಯೋಜನೆಗಳನ್ನು ಕಾರ್ಯಗತಗೊಳಿಸಲಾಗುತ್ತದೆ ಹಾಗೂ ಅವು ನಿಮಗೆ ಹೊಸ ಆರ್ಥಿಕ ಲಾಭ ತರುತ್ತವೆ. ನಿಮ್ಮ ಕುಟುಂಬದ ಸದಸ್ಯರ ಅಗತ್ಯಗಳ ಮೇಲೆ ಗಮನ ಹರಿಸುವುದು ಇಂದು ನಿಮ್ಮ ಆದ್ಯತೆಯಾಗಿರಬೇಕು.

### ಕನ್ಯಾ ರಾಶಿ

ಬೆಂಬಲ ನೀಡುವ ಸ್ನೇಹಿತರು ನಿಮ್ಮನ್ನು ಸಂತೋಷವಾಗಿರಿಸುತ್ತಾರೆ. ಇಂದು ನಿಮ್ಮ ತಂದೆ ತಾಯಿಯರಲ್ಲಿ ಯಾರಾದರೂ ಒಬ್ಬರು ಹಣವನ್ನು ಸಂಗ್ರಹಿಸುವ ಬಗ್ಗೆ ಉಪನ್ಯಾಸಗಳನ್ನು ನೀಡಬಹುದು, ನೀವು ಅವರ ಮಾತುಗಳನ್ನು ಬಹಳ ಗಮನವಾಗಿ ಕೇಳಬೇಕಾದ ಅಗತ್ಯವಿದೆ. ಇಲ್ಲದಿದ್ದರೆ ಮುಂಬರುವ ಸಮಯಲ್ಲಿ ನೀವೇ ತೊಂದರೆಗೊಳಗಾಗಬಹುದು. ಕುಟುಂಬದ ಸದಸ್ಯರೊಂದಿಗೆ ಕೆಲವು ವಿಶ್ರಾಂತಿಯ ಕ್ಷಣಗಳನ್ನು ಕಳೆಯಿರಿ.

### ತುಲಾ ರಾಶಿ

ಇಂದು, ನಿಮ್ಮ ಆರೋಗ್ಯವು ಆರೋಗ್ಯಕರವಾಗಿರುತ್ತದೆ ಎಂದು ನಿರೀಕ್ಷಿಸಲಾಗಿದೆ. ರಿಯಲ್ ಎಸ್ಟೇಟ್ ಮತ್ತು ಆರ್ಥಿಕ ವ್ಯವಹಾರಗಳಿಗೆ ಒಳ್ಳೆಯ ದಿನ. ಸಂಬಂಧಿಕರು ಮತ್ತು ಸ್ನೇಹಿತರಿಂದ ಅನಿರೀಕ್ಷಿತ ಉಡುಗೊರೆಗಳು. ನೀವು ಇಂದು ಪ್ರೀತಿಯ ಸಮೃದ್ಧ ಚಾಕೋಲೇಟ್‌ನ ರುಚಿ ಸವಿಯುತ್ತೀರಿ. ಇಂದು ನಿಮಗೆಲ್ಲರಿಗೂ ತುಂಬ ಸಕ್ರಿಯವಾದ ಮತ್ತು ಹೆಚ್ಚು ಸಾಮಾಜಿಕವಾದ ಜನರು ನಿಮ್ಮಿಂದ ಸಲಹೆ ಪಡೆಯಬಯಸುತ್ತಾರೆ ಮತ್ತು ನೀವು ಏನೇ ಹೇಳಿದರೂ ಅದನ್ನು ಒಪ್ಪುತ್ತಾರೆ.

### ವೃಶ್ಚಿಕ ರಾಶಿ

ಆರೋಗ್ಯ ಸಂಬಂಧಿತ ಸಮಸ್ಯೆಗಳು ಅಸ್ವಸ್ಥತೆಯನ್ನು ತರಬಹುದು. ನಿಮ್ಮ ಅವಾಸ್ತವಿಕ ಯೋಜನೆ ಹಣದ ಕೊರತೆಗೆ ಕಾರಣವಾಗುತ್ತದೆ. ಕುಟುಂಬದಲ್ಲಿ ತೊಂದರೆಯುಂಟಾಗಬಹುದು. ಕುಟುಂಬದ ಜವಾಬ್ದಾರಿಗಳ ಬಗ್ಗೆ ನಿಮ್ಮ ಉದಾಸೀನತೆ ಅವರಿಗೆ ಸಿಟ್ಟು ತರಬಹುದು. ನಿಮ್ಮ ಉತ್ಸಾಹ ನಿಮ್ಮ ಪ್ರೀತಿಯನ್ನು ಸಂಕಟಕ್ಕೆ ಸಿಲುಕಿಸಹುದಾದ್ದರಿಂದ ಅದನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ. ನಿಮ್ಮ ಸಂಗಾತಿಯು ಇಂದು ಇಡೀ ದಿನ ನಿಮ್ಮ ಬಗ್ಗೆ ಚಿಂತಿಸುತ್ತೀರಿ.

### ಧನು ರಾಶಿ

ಒತ್ತಡದ ದಿನದ ಹೊರತಾಗಿಯೂ ಆರೋಗ್ಯ ಪರಿಪೂರ್ಣವಾಗಿರುತ್ತದೆ. ನೀವು ತ್ವರಿತ ಹಣ ಪಡೆಯುವ ಬಯಕೆ ಹೊಂದಿರುತ್ತೀರಿ. ಬೇಟಿ ನೀಡುವ ಸಂಬಂಧಿಗಳು ನೀವು ಅಂದುಕೊಂಡಿದ್ದಕ್ಕಿಂತ ಚೆನ್ನಾಗಿರಬಹುದು. ಇಂದು ನೀವು ನಿಮ್ಮ ಸ್ನೇಹಿತನ ಅನುಪಸ್ಥಿತಿಯಲ್ಲಿ ಅವರ ಸುಗಂಧವನ್ನು ಅನುಭವಿಸುತ್ತೀರಿ. ಹೊಸ ಪ್ರಸ್ತಾಪಗಳ ಅಕರ್ಷಕವಾಗಿದ್ದರೂ ಯಾವುದೇ ಆತುರದ ನಿರ್ಧಾರಗಳನ್ನು ತೆಗೆದುಕೊಳ್ಳುವುದು ಬುದ್ಧಿವಂತಿಕೆಯ ಲಕ್ಷಣವಲ್ಲ.

### ಮಕರ ರಾಶಿ

ನೀವು ಯೋಗ ಧ್ಯಾನದೊಂದಿಗೆ ದಿನವನ್ನು ಪ್ರಾರಂಭಿಸಬಹುದು. ಇದನ್ನು ಮಾಡುವುದರಿಂದ ನಿಮಗೆ ಪ್ರಯೋಜನಕಾರಿಯಾಗುತ್ತದೆ ಮತ್ತು ದಿನವಿಡೀ ನಿಮ್ಮಲ್ಲಿ ಶಕ್ತಿ ಉಳಿದಿರುತ್ತದೆ. ಹಣಕಾಸಿನಲ್ಲಿ ಸುಧಾರಣೆ ನೀವು ಪ್ರಮುಖ ಖರೀದಿಗಳನ್ನು ಮಾಡುವುದನ್ನು ಅನುಕೂಲಕರವಾಗಿಸುತ್ತದೆ. ನೀವು ಬಯಸುವ ಲ್ಲಾ ಗಮನವನ್ನೂ ನೀವು ಪಡೆಯುವ ಒಳ್ಳೆಯ ದಿನ ನಿಮ್ಮ ಮನಸ್ಸಿನಲ್ಲಿ ಅನೇಕ ವಿಷಯಗಳಿರುತ್ತವೆ ಹಾಗೂ ನೀವು ಯಾವುದನ್ನು ಅನುಸರಿಸಬೇಕೆನ್ನುವ ಸಮಸ್ಯೆ ಹೊಂದಿರುತ್ತೀರಿ.

### ಕುಂಭ ರಾಶಿ

ನೀವು ಮಾನಸಿಕವಾಗಿ ಅತ್ಯಂತ ದುರ್ಬಲರಾಗಿರುತ್ತೀರಿ – ಆದ್ದರಿಂದ ನೀವು ನೋವಿಗೀಡಾಗಬಹುದಾದ ಸಂದರ್ಭಗಳಿಂದ ದೂರ ಉಳಿಯಿರಿ. ಹಣದ ಕೊರತೆ ಇಂದು ನಿಮ್ಮ ಮನೆಯಲ್ಲಿ ಅಪಶ್ರುತಿಗೆ ಕಾರಣವಾಗಬಹುದು. ಅಂತಹ ಪರಿಸ್ಥಿತಿಯಲ್ಲಿ ನೀವು ನಿಮ್ಮ ಮನೆಯವರೊಂದಿಗೆ ಯೋಚಿಸಿ ಅರ್ಥಮಾಡಿಕೊಂಡು ಮಾತನಾಡಿ ಮತ್ತು ಅವರಿಂದ ಸಲಹೆಯನ್ನು ತೆಗೆದುಕೊಳ್ಳಿ.

### ಮೀನ ರಾಶಿ

ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸಗಳನ್ನು ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ. ಇಂದಿನವರೆಗೂ ಹಣವನ್ನು ಯೋಚಿಸದೆ ಖರ್ಚು ಮಾಡುತ್ತಿದ್ದ ಜನರು, ಅವರಿಗೆ ಇಂದು ಹಣದ ತುಂಬಾ ಅಗತ್ಯವಿರಬಹುದು ಮತ್ತು ಜೀವನದಲ್ಲಿ ಹಣದ ಏನು ಮೌಲ್ಯವಿದೆ ಎಂದು ನಿಮಗೆ ಅರ್ಥವಾಗಬಹುದು. ಭಾವನಾತ್ಮಕ ಭರವಸೆಗಳನ್ನು ಬಯಸುವವರು ಹಿರಿಯರು ಅವರ ನೆರವಿಗೆ ಬರುವುದನ್ನು ನೋಡಬಹುದು.

# ಗೊಂದಿಚಟ್ನಳ್ಳಿ ಸುಬ್ರಹ್ಮಣ್ಯನ ಸನ್ನಿಧಿಯಲ್ಲಿ ದೀಪೋತ್ಸವ ಸಂಭ್ರಮ

ಹಿಂದೂಗಳ ನಂಬಿಕೆಯ ಪ್ರಕಾರ ದೀಪಗಳು ಶುದ್ಧತೆಯ ಪ್ರತಿರೂಪಕ. ಇದೇ ಕಾರಣಕ್ಕೆ ಯಾವುದೇ ಶುಭ ಸಮಾರಂಭದಲ್ಲಿ ದೀಪ ಹಚ್ಚುವುದು ವಾಡಿಕೆ. ಈ ದೀಪಗಳು ನಮ್ಮ ಆರೋಗ್ಯ ಮತ್ತು ಪರಿಸರದ ಮೇಲೆ ಪರಿಣಾಮ ಬೀರುತ್ತವೆ. ದೀಪದ ಬೆಳಕು ಶಕ್ತಿಯ ಮೂಲವಾಗಿ ಮತ್ತು ಕ್ರಿಮಿನಾಶಕವಾಗಿಯೂ ಕಾರ್ಯನಿರ್ವಹಿಸುತ್ತದೆ.

ಈ ಹಿನ್ನೆಲೆಯಲ್ಲಿ ನವೆಂಬರ್ 9ರ ನಿನ್ನೆ ಭಾನುವಾರ ಸಂಜೆ ಶಿವಮೊಗ್ಗ ತಾಲೂಕಿನ ಗೊಂದಿಚಟ್ನಹಳ್ಳಿಯ ಶ್ರೀ ಸುಬ್ರಹ್ಮಣ್ಯ ಸ್ವಾಮಿ ದೇವಸ್ಥಾನದಲ್ಲಿ ಕಾರ್ತಿಕ ದೀಪೋತ್ಸವವನ್ನು ಸಡಗರ-ಸಂಭ್ರಮದಿಂದ ಆಚರಿಸಲಾಯಿತು.

ಸಜ್ಜನರ ಸಮ್ಮಿಲನ ಆತ್ಮೀಯರ ಆತ್ಮಸಂಗಮದೊಂದಿಗೆ ಬೆಳಿಗ್ಗೆಯಿಂದ ಆರಂಭವಾದ ಶ್ರೀ ಸುಬ್ರಹ್ಮಣ್ಯನ ಆರಾಧನೆ, ವಿಷ್ಣು ಸಹಸ್ರನಾಮ ಪಠಣ, ಭಕ್ತಿಗೀತೆಗಳ ಗಾಯನ, ನೈವೇದ್ಯ ಮತ್ತು ಪ್ರಸಾದ ತಯಾರಿಕೆ ಮಧ್ಯಾಹ್ನ ಬಗೆ,ಬಗೆಯ ಭಕ್ಷ್ಯ ಭೋಜನ, ಸಂಗೀತದ ರಸದೌತಣ,



ಪ್ರೇರಣಾದಾಯಕ ಮಾತುಕತೆ, ಸಂಜೆ ಸೂರ್ಯಾಸ್ತದ ಬಳಿಕ ದೀಪೋತ್ಸವ ನಡೆದು ಆಧ್ಯಾತ್ಮಿಕ, ಸಾಂಸ್ಕೃತಿಕ ಮತ್ತು ಪ್ರಕೃತಿಯ ಆರಾಧನೆ ಮೂಲಕ ಯಶಸ್ವಿಯಾಗಿ ಸಂಪನ್ನಗೊಂಡಿತು.

ದೀಪೋತ್ಸವದ ಸಂದರ್ಭದಲ್ಲಿ ಶ್ರೀ ಸುಬ್ರಹ್ಮಣ್ಯ ಸ್ವಾಮಿ ದೇವಸ್ಥಾನ ಸಮಿತಿ ಅಧ್ಯಕ್ಷ ಎಂ. ಪ್ರಕಾಶ್ ಗಿಲ್ಲಿ ಇವರನ್ನು ಅಭಿನಂದಿಸಲಾಯಿತು. ಈ ಸಂದರ್ಭದಲ್ಲಿ ಗುಂಡಪ್ಪ ಶೆಡ್, ಮಲ್ಲೇಶ್ವರ ನಗರ ಹಾಗೂ ರಾಮ್‌ರಾವ್ ಬಡಾವಣೆ ನಿವಾಸಿಗಳ ಸಂಘದ ಅಧ್ಯಕ್ಷ ಜೋಡಿಯಾಕ್ ಪ್ರಕಾಶ್ ಮಾತನಾಡಿ ಕಳೆದ ಮೂರು ತಿಂಗಳ ಹಿಂದೆ ಉದ್ಘಾಟನೆಗೊಂಡಿರುವ ಶ್ರೀ ಸುಬ್ರಹ್ಮಣ್ಯ ಸ್ವಾಮಿಯ ಸುಂದರ ದೇವಾಲಯ ನಿರ್ಮಾಣದಲ್ಲಿ ಗಿಲ್ಲಿ ಪ್ರಕಾಶ್ ಅಂತಹ ಸಹೃದಯಿಯ ಪಾತ್ರ ಪ್ರಮುಖವಾಗಿದೆ. ಇಂತಹ ದಾನಿಗಳು ಪ್ರತಿ ಗಲ್ಲಿ- ಗಲ್ಲಿಗಳಲ್ಲಿ ಇರಬೇಕು. ಆಗ ಆಧ್ಯಾತ್ಮಿಕ, ಸುಸ್ಥಿರ, ಸುಂದರ ಸಮಾಜ ನಿರ್ಮಾಣವಾಗುತ್ತದೆ ಎಂದರು.

ಶ್ರೀಧರ್ ಎನ್.ಎಂ. ಮಾತನಾಡಿ ದೀಪಗಳು ಎಲ್ಲಾ ಕಲ್ಮಶಗಳನ್ನು ತೊಡೆದುಹಾಕಲು ಅನುವು ಮಾಡಿಕೊಡುತ್ತದೆ. ಬೆಳಕು ಶಕ್ತಿಯ ಶ್ರೇಷ್ಠ ರೂಪವನ್ನು ಒದಗಿಸುತ್ತದೆ. ಆದ್ದರಿಂದ ಯಾವುದೇ ಪೂಜೆಯ ಕೊನೆಯಲ್ಲಿ ಆರತಿಯನ್ನು ಅರ್ಪಿಸುವಾಗ ದೀಪಗಳನ್ನು ಬಳಸಲಾಗುತ್ತದೆ ಎಂದು ತಿಳಿಸಿದರು.

ದೀಪಗಳು ದೈವಿಕ ಸೆಳವನ್ನು ಸಂಕೇತಿಸುತ್ತದೆ. ಇದರ ಮೂಲಕ ಭಕ್ತರು ದೇವರ ವಿಗ್ರಹದ ಮೇಲೆ ಸ್ಪಷ್ಟವಾದ ನೋಟವನ್ನು ಹೊಂದಲು ಸಹಾಯ ಮಾಡುತ್ತದೆ. ನಾವು ಸಾಮಾನ್ಯವಾಗಿ ನಮ್ಮ ಕೈಗಳನ್ನು ಜ್ವಾಲೆಯ ಸುತ್ತ ಚಲಿಸುವ ಮೂಲಕ ಆರತಿಯನ್ನು ತೆಗೆದುಕೊಳ್ಳುತ್ತೇವೆ. ಈ ಮೂಲಕ ದೈವಿಕ ಶಕ್ತಿಯನ್ನು ನಮ್ಮೊಳಗೆ ಪಡೆಯುತ್ತೇವೆ ಎಂದು ನಂಬುತ್ತೇವೆ ಎಂದು ಹೇಳಿದರು.

ನಾಗೇಂದ್ರ ಶಿರೂರುಕರ್, ಓಂ ಪ್ರಕಾಶ್, ಎಂ. ಶ್ರೀಕಾಂತ್, ಕುಮಾರಣ್ಣ ಗಾಡಿಕೊಪ್ಪ, ಶಾಂತ ಕುಮಾರ್, ಸಾರಥಿ ಶಿವಾನಂದ್, ವೀರಣ್ಣ ಬಿರಾದಾರ್, ನಾಗರಾಜ್, ಲೀಲಾಬಾಯಿ ಎಂ.ಎನ್., ದೀಪಾ ಶ್ರೀಧರ್, ರೇಣುಕಾ, ಶ್ರೀಕಾಂತ್ ಹೊಳ್ಳ, ಎಂ. ಕೆ. ಬಾಲಚಂದ್ರ, ಅಶ್ವಿನಿ, ಶೈಲಜಾ ಹೊಳ್ಳ, ಪದ್ಮಿನಿ ಪ್ರಕಾಶ್, ಮಾಲತಿ, ವಚನ ಜಗದೀಶ್ ಮತ್ತಿತರರು ಭಾಗವಹಿಸಿದ್ದರು.



ಪದ್ಮಿನಿ ಪ್ರಕಾಶ್
ಗುಂಡಪ್ಪ ಶೆಡ್
ಶಿವಮೊಗ್ಗ.

# ನವಭಾರತ ನಿರ್ಮಾಣದಲ್ಲಿ ಪಟೇಲರ ಪಾತ್ರ ಸದಾಕಾಲ ಸ್ಮರಣೀಯ

**ಗದಗ:** ಭಾರತದ ಸ್ವಾತಂತ್ರ್ಯ ಹೋರಾಟದಲ್ಲಿ ಸಕ್ರಿಯವಾಗಿ ಪಾಲ್ಗೊಂಡು, ಸ್ವತಂತ್ರ ಭಾರತದ ಮೊದಲ ಉಪ ಪ್ರಧಾನಮಂತ್ರಿ ಮತ್ತು ಗೃಹ ಸಚಿವರಾಗಿ ಸುಮಾರು 565ಕ್ಕೂ ಹೆಚ್ಚು ರಾಜಸಂಸ್ಥಾನಗಳನ್ನು ಭಾರತದ ಒಕ್ಕೂಟಕ್ಕೆ ಸೇರಿಸುವಲ್ಲಿ ನಿರ್ವಹಿಸಿದ ತಂತ್ರ ಮತ್ತು ಕೌಶಲ್ಯಗಳನ್ನು ಭಾರತೀಯರು ಯಾವುದೇ ಕಾಲಕ್ಕೂ ಮರೆಯಲು ಸಾಧ್ಯವಿಲ್ಲವೆಂದು ಪ್ರೊ. ಸುಧಾ ಕೌಜಗೇರಿ ಹೇಳಿದರು. ಅವರು ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ

ದರ್ಜೆ ಕಾಲೇಜಿನ ಎನ್.ಎಸ್.ಎಸ್. ಘಟಕ ಆಯೋಜಿಸಿದ್ದ 'ಸರ್ದಾರ್ ವಲ್ಲಭಭಾಯಿ ಪಟೇಲರ ಜನ್ಮದಿನ ಮತ್ತು ರಾಷ್ಟ್ರೀಯ ಐಕ್ಯತಾ ದಿನ' ಅಂಗವಾಗಿ ಏರ್ಪಡಿಸಿದ್ದ ವಿವಿಧ ಸ್ಪರ್ಧೆಗಳ ಬಹುಮಾನ ವಿತರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡುತ್ತ, ವಿದ್ಯಾರ್ಥಿಗಳು ನವರಾಷ್ಟ್ರದ ನಿರ್ಮಾಣದಲ್ಲಿ ಪಟೇಲರ ಪಾತ್ರವನ್ನು ಅರಿಯಲು ಅವರನ್ನು ಓದಿಕೊಳ್ಳಬೇಕೆಂದು ಹೇಳಿದರು.

ಇತಿಹಾಸ ಪ್ರಾಧ್ಯಾಪಕ ಮತ್ತು ಎನ್.ಎಸ್.ಎಸ್. ಘಟಕದ ಕಾರ್ಯಕ್ರಮ ಅಧಿಕಾರಿ ಪ್ರೊ. ಅಪ್ಪಣ್ಣ ಹಂಜೆ ಭಾರತದ ಸ್ವಾತಂತ್ರ್ಯ, ರಾಜಕೀಯ ಏಕೀಕರಣ ಮತ್ತು ನವಭಾರತದ ಸರ್ವತೋಮುಖ ಅಭಿವೃದ್ಧಿಗೆ ತಮ್ಮನ್ನು ಸಂಪೂರ್ಣ ಅರ್ಪಿಸಿಕೊಂಡ



ಪಟೇಲರ ಬದುಕು, ಸಾಧನೆ, ಕೊಡುಗೆಗಳು ಸದಾಕಾಲ ಸ್ಮರಣೀಯವಾಗಿದ್ದು, ವಿದ್ಯಾರ್ಥಿಗಳು ಅವರ ಜೀವನ ಮೌಲ್ಯಗಳು, ಆದರ್ಶಗಳನ್ನು ಓದಿಕೊಂಡು ಸರಳ ಬದುಕು, ದೃಢನಿರ್ಧಾರ, ರಾಷ್ಟ್ರಸೇವೆಯನ್ನು ಮೈಗೂಡಿಸಿಕೊಳ್ಳಬೇಕೆಂದು ಹೇಳಿದರು. ಸಾಂಸ್ಕೃತಿಕ ವಿಭಾಗದ ಸಂಯೋಜಕ ರಮೇಶ ಹುಲಕುಂದ, ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥ ಹುಸೇನಭಾಷ, ಸುಭಾಸ ಹರಿಹರ ಅವರು ಪಟೇಲರ ಬದುಕು, ಹೋರಾಟ, ಚಳುವಳಿ, ರಾಷ್ಟ್ರೀಯ ಏಕತೆ ಕುರಿತು ಮಾತನಾಡಿದರು.

ಕಾರ್ಯಕ್ರಮದ ಅಂಗವಾಗಿ ವಿದ್ಯಾರ್ಥಿಗಳಿಗೆ ಐರನ್ ರೆಸೊಲ್ವ್, ಐರನ್ ನೇಷನ್ ವಿಷಯಗಳ ಕುರಿತು ಪ್ರಬಂಧ ಸ್ಪರ್ಧೆ, 'ವೈವಿಧ್ಯತೆಯಲ್ಲಿ ಏಕತೆ ಭಾರತದ ದೊಡ್ಡ ಶಕ್ತಿ ಮತ್ತು ಅದರ ದೊಡ್ಡ ಪರಿಹಾರ' ವಿಯದ ಕುರಿತು ಚರ್ಚಾಸ್ಪರ್ಧೆ, 'ಭಾರತೀಯ ಸಂವಿಧಾನ ಮತ್ತು ಪ್ರಜಾಪ್ರಭುತ್ವವನ್ನು ರೂಪಿಸುವಲ್ಲಿ ಪಟೇಲರ ಪಾತ್ರ' ಹಾಗೂ 'ಸರ್ದಾರ್ ಪಟೇಲರು ಮತ್ತು ಸೇವಾ ಮನೋಭಾವ' ವಿಷಯಗಳ ಕುರಿತು ಉಪನ್ಯಾಸಗಳು,

ಪೋಸ್ಟರ್, ಬ್ಯಾನರ್, ಪಟಗಳ ತಯಾರಿಕೆ ಸ್ಪರ್ಧೆಗಳನ್ನು ಏರ್ಪಡಿಸಿ, ವಿಜೇತರಿಗೆ ಪ್ರಶಸ್ತಿಪತ್ರ ಮತ್ತು ಬಹುಮಾನಗಳನ್ನು ವಿತರಿಸಲಾಯಿತು. ಕಾರ್ಯಕ್ರಮದ ಅಂತ್ಯದಲ್ಲಿ ಪ್ರೊ. ಲಕ್ಷ್ಮಣ ಮುಳಗುಂದ ರಾಷ್ಟ್ರೀಯ ಐಕ್ಯತಾ ದಿನದ ಪ್ರತಿಜ್ಞಾವಿಧಿ ಬೋಧಿಸಿದರು. ಎನ್.ಎಸ್.ಎಸ್. ಸ್ವಯಂ ಸೇವಕರು ಕಾರ್ಯಕ್ರಮ ನಡೆಸಿಕೊಟ್ಟರು.

## ನ. 14 ರಂದು ಕಲಾಕುಂಚದಿಂದ "ಮಕ್ಕಳ ದಿನಾಚರಣೆ" ಸಮಾರಂಭ ಉದ್ಘಾಟನೆ

**ದಾವಣಗೆರೆ:** ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ನಗರದ ಸಿದ್ದವೀರಪ್ಪ ಬಡಾವಣೆಯ ಶಾಖೆ ಮತ್ತು ಎಂ.ಸಿ.ಸಿ. 'ಎ' ಬ್ಲಾಕ್ ಶಾಖೆಯ ಸಂಯುಕ್ತಾಶ್ರಯದಲ್ಲಿ "ಮಕ್ಕಳ ದಿನಾಚರಣೆ" ಹಾಗೂ ಕಾರ್ತಿಕೋತ್ಸವ ಸಮಾರಂಭವನ್ನು ನವೆಂಬರ್ 14 ರಂದು ಶುಕ್ರವಾರ ಸಂಜೆ 4 ಗಂಟೆಗೆ ನಗರದ ಕಸ್ತೂರ್ಬಾ ಬಡಾವಣೆಯ ಕುವೆಂಪು ರಸ್ತೆಯಲ್ಲಿರುವ ಕಲಾಕುಂಚ ಕಛೇರಿ ಸಭಾಂಗಣದಲ್ಲಿ ಉದ್ಘಾಟನಾ ಸಮಾರಂಭ ನಡೆಯಲಿದೆ ಎಂದು ಕಲಾಕುಂಚ ಮಹಿಳಾ ವಿಭಾಗದ ಅಧ್ಯಕ್ಷರಾದ ಶ್ರೀಮತಿ ಜ್ಯೋತಿ ಗಣೇಶ್ ಶೆಣೈ ತಿಳಿಸಿದ್ದಾರೆ.

ಸಮಾರಂಭದ ಉದ್ಘಾಟನೆಯನ್ನು ಬಹುಮುಖ ಪ್ರತಿಭೆ, ಯಕ್ಷಗಾನ ಕಲಾವಿದೆ ನಗರದ ಸಂತಪೌಲರ ಬಾಲಕೀಯ ಪ್ರೌಢಶಾಲೆಯಲ್ಲಿ 9ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಕುಮಾರಿ ಅಪೇಕ್ಷ ಕೆ.ಯು. ನೆರವೇರಿಸಲಿದ್ದಾಳೆ. ಸಮಾರಂಭದ ಅಧ್ಯಕ್ಷತೆಯನ್ನು ನಗರದ ವಿದ್ಯಾಸಾಗರ ಪ್ರೌಢಶಾಲೆಯಲ್ಲಿ 8ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಕುಮಾರಿ ನಿರಾಲಿ ಲೋಹಿತಾಶ್ವ ವಹಿಸಿಕೊಳ್ಳಲಿದ್ದಾಳೆ. ಮುಖ್ಯ ಅತಿಥಿಗಳಾಗಿ ಅತ್ತಿಗೆರೆ ಗ್ರಾಮದ ಶ್ರೀ ಕೇಸರಿ ಪಬ್ಲಿಕ್ ಪ್ರಾಥಮಿಕ ಶಾಲೆಯ 5ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಕುಮಾರಿ ವೈಷ್ಣವಿ ಪ್ರಶಾಂತ್, ದಾವಣಗೆರೆಯ ಸೇಂಟ್ ಜಾನ್ಸ್ ಪ್ರಾಥಮಿಕ ಶಾಲೆಯಲ್ಲಿ 7ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಕುಮಾರಿ ಜಿ.ಎಂ. ಚಂದನ್ ನಗರದ ಅನುಭವ ಮಂಟಪದ ಪ್ರೌಢಶಾಲೆಯಲ್ಲಿ 8ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಕುಮಾರ ಸಮರ್ಥ ಜಿ.ಈ. ಶಾಮನೂರಿನ ಶ್ರೀಮತಿ ಶ್ರೀದೇವಿ ತಿಮ್ಮಾರೆಡ್ಡಿ ಪ್ರಾಥಮಿಕ ಶಾಲೆಯಲ್ಲಿ 7ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಕುಮಾರಿ ಮಾನ್ಯ ಸಂದೀಪ್ ಶೆಣೈ ಆಗಮಿಸಲಿದ್ದಾರೆ.

ಕಲಾಕುಂಚ ಸಿದ್ದವೀರಪ್ಪ ಬಡಾವಣೆಯ ಶಾಖೆಯ ಅಧ್ಯಕ್ಷರಾದ ಶ್ರೀಮತಿ ಲಲಿತಾ ಕಲ್ಲೇಶ್, ಎಂ.ಸಿ.ಸಿ.ಶಾಖೆಯ ಅಧ್ಯಕ್ಷರಾದ ಶ್ರೀಮತಿ ಪ್ರಭಾ ರವೀಂದ್ರ ವೇದಿಕೆಯಲ್ಲಿ ಗೌರವ ಉಪಸ್ಥಿತರಿರುತ್ತಾರೆ.

# ಮಾನಸಿಕ ಸಮತೋಲನಕ್ಕೆ ಚೆಸ್ ಸಹಕಾರಿ : ದಿನೇಶ್ ಕೆ ಶೆಟ್ಟಿ



**ದಾವಣಗೆರೆ :** ಇಂದು ವಿದ್ಯಾನಗರದಲ್ಲಿರುವ ಲಯನ್ಸ್ ಕ್ಲಬ್ ನಲ್ಲಿ ನ್ಯೂ ದಾವಣಗೆರೆ ಚೆಸ್ ಅಸೋಸಿಯೇಷನ್ ವತಿಯಿಂದ ಓಪನ್ ರಾಪಿಡ್ ಚೆಸ್ ಪಂದ್ಯಾವಳಿ ಎನ್ನುಪಡಿಸಲಾಗಿತ್ತು

ಈ ಪಂದ್ಯಾವಳಿಯ ಉದ್ಘಾಟನೆ ಮಾಡಿ ಮಾತನಾಡಿದ ದಾವಣಗೆರೆ ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ದಿನೇಶ್ ಕೆ ಶೆಟ್ಟಿಯವರು ಮಕ್ಕಳ ಮಾನಸಿಕ ಸಮತೋಲನಕ್ಕೆ, ದೃಢ ನಿರ್ಧಾರ ಹಾಗೂ ಬುದ್ಧಿಶಕ್ತಿ ಬೆಳವಣಿಗೆಗೆ ಚೆಸ್ ಸಹಕಾರಿಯಾಗಲಿದೆ ಇಂಥ ಇಂತಹ ಕ್ರೀಡೆಗಳು ಹೆಚ್ಚು ಹೆಚ್ಚು ನಡೆದರೆ ಮಕ್ಕಳ ಏಳಿಗೆಗೆ ತುಂಬಾ ಸಹಕಾರಿಯಾಗಲಿದೆ ಈಗಿನ ಕಾಲದಲ್ಲಿ ಪೋಷಕರು ತುಂಬಾ ಸಹಕಾರ ನೀಡುತ್ತಿದ್ದಾರೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ನ್ಯೂ ಜಿಲ್ಲಾ ಚೆಸ್ ಅಸೋಸಿಯೇಷನ್ ಅಧ್ಯಕ್ಷರಾಗದ ಎಂ ಹೆಗಡೆ ಹಿರಿಯರಾದ ಹೆಗಡೆ ಡಯಾಗ್ನೋಸ್ಟಿಕ್ ಸೆಂಟರ್ ನ ಮಾಲಿಕರಾದ ಡಾಕ್ಟರ್ ಎಸ್ ಆರ್ ಹೆಗಡೆ ಲಯನ್ಸ್ ಅಧ್ಯಕ್ಷರಾದ ಜೆ ಬಿ ರಾಜ್ ಕಾರ್ಯದರ್ಶಿಗಳಾದ ಸತೀಶ್ ಚಂದ್ರ ಶ್ರೀಪಾದ ಹೆಗಡೆ ಸುರೇಶ್ ಜೈನ್ ನಿರ್ಮಲಾ ಸುಭಾಷ್ ಟಿ ಯುವರಾಜ್ ಇನ್ನು ಮುಂತಾದವರು ಭಾಗವಹಿಸಿದ್ದರು

ಈ ಪಂದ್ಯಾವಳಿಯಲ್ಲಿ ರಾಜ್ಯದ ನಾನಾ ಜಿಲ್ಲೆಗಳಿಂದ160ಕ್ಕೂ ಹೆಚ್ಚು ಮಕ್ಕಳು ಭಾಗವಹಿಸಿದ್ದಾರೆ

# ಚಾಲುಕ್ಯನಗರದಲ್ಲಿ ಸಂಭ್ರಮದ ಕನ್ನಡ ರಾಜ್ಯೋತ್ಸವ



**ಶಿವಮೊಗ್ಗ :** ಚಾಲುಕ ಕನ್ನಡ ಯುವಕ ಸಂಘದ ವತಿಯಿಂದ ನ.09ರಂದು ಸಂಭ್ರಮದ ಕನ್ನಡ ರಾಜ್ಯೋತ್ಸವವನ್ನು ಆಚರಿಸಲಾಯಿತು.

ಧ್ವಜರೋಹಣವನ್ನು ಶ್ರೀ ಸಿದ್ದೇಶ್, ಸನ್‌ರೈಸ್ -ಸಿಲಿಟಿ ಸರ್ವಿಸ್ ಇವರು ಧ್ವಜಾರೋಹಣ ನೇರವೆರಿಸಿದರು.

ಈ ಸಂದರ್ಭದಲ್ಲಿ ಚಾಲುಕ್ಯಕನ್ನಡ ಯುವಕ ಸಂಘದ ಅಧ್ಯಕ್ಷರು, ಸದಸ್ಯರು, ಪದಾಕಾರಿಗಳು ಹಾಗೂ ಚಾಲುಕ್ಯನಗರದ ನಿವಾಸಿಗಳು ಪಾಲ್ಗೊಂಡಿದ್ದರು.

# ವೀರವನಿತೆ ಒನಕೆ ಓಬವ್ವ ಜಯಂತಿ-2025

**ಗದಗ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಇಂದು ಬೆಳಗ್ಗೆ 11-00 ಗಂಟೆಗೆ ಜಿಲ್ಲಾಡಳಿತ ಭವನದ ಅಡಿಟೋರಿಯಂ ಸಭಾಂಗಣದಲ್ಲಿ ವೀರವನಿತೆ ಒನಕೆ ಓಬವ್ವ ಜಯಂತಿ ಕಾರ್ಯಕ್ರಮ ಜರುಗಲಿದೆ.ವಿಧಾನ ಪರಿಷತ ಸಭಾಪತಿಗಳಾದ ಬಸವರಾಜ ಹೊರಟ್ಟಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾದ ಶಿವರಾಜ ಎಸ್.ತಂಗಡಗಿ ಅವರುಗಳು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು. ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಸಚವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ.ಪಾಟೀಲ ಅವರು ಕಾರ್ಯಕ್ರಮದ ಉದ್ಘಾಟನೆ ಮತ್ತು ಅಧ್ಯಕ್ಷತೆ ವಹಿಸುವರು.

ಲೋಕಸಭಾ ಸದಸ್ಯರುಗಳಾದ ಬಸವರಾಜ ಬೊಮ್ಮಾಯಿ, ಪಿ.ಸಿ.ಗದ್ದಿಗೌಡರ, ಸರ್ಕಾರಿ ಮುಖ್ಯ ಸಚೇತಕರಾದ ಸಲೀಂ ಡಾ.ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕ್ಬರಸಾಬ ಬಾಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಬಿ.ಅಸೂಟಿ ಅವರುಗಳು ಮುಖ್ಯ ಅತಿಥಿಗಳಾಗಿ ಆಗಮಿಸುವರು.

# ನಾಗರಾಜ್ ಹೆಚ್.ಎಸ್. ಹಾಗೂ ಬಿ.ವಿ. ರಾಜಶೇಖರ ಇವರಿಗೂ ಸನ್ಮಾನ



**ದಾವಣಗೆರೆ:** ದಾವಣಗೆರೆ ಜಿಲ್ಲಾ ಸಾರ್ವಜನಿಕ ಹಿತರಕ್ಷಣಾ ಒಕ್ಕೂಟದಿಂದ ನಗರದ ಪ್ರವಾಸಿ ಮಂದಿರದಲ್ಲಿ ಗುರುಹಿರಿಯರ ಸಭೆಯಲ್ಲಿ ಗೌರವಾನ್ವಿತ ರಾಜಪಾಲರಿಂದ ರಾಜ್ಯ ಪ್ರಶಸ್ತಿ ಪಡೆದ ದಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಕರ್ನಾಟಕ, ನೇತಾಜಿ ಮತ್ತು ಚೇತನ ಓಪನ್ ಸ್ಕೌಟ್ಸ್ ಗ್ರೂಪ್‌ನ ವಿದ್ಯಾರ್ಥಿ ಸಿ.ಪಿ.ಆರ್.

ಜೀವ ಉಳಿಸಿದ ನಾಗರಾಜ್ ಹೆಚ್.ಎಸ್‌ರವರಿಗೂ ಮತ್ತು ಸಮಾಜ ಸೇವಕರು, ಕನ್ನಡಪರ ಹೋರಾಟಗಾರರು, ಒಕ್ಕೂಟದ ಅಧ್ಯಕ್ಷರು, ಜಿಲ್ಲಾ ಮಟ್ಟದ ಕರ್ನಾಟಕ ರಾಜ್ಯೋತ್ಸವ ಸನ್ಮಾನಕ್ಕೆ ಭಾಜನರಾದ ಬಿ.ವಿ.ರಾಜಶೇಖರ ಇವರಿಗೂ ಇನ್ನು ಹೆಚ್ಚು ಹೆಚ್ಚು ಸೇವೆ ಸಲ್ಲಿಸಲೆಂದು ಹಾರೈಸಿ ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಗೌರವಾಧ್ಯಕ್ಷರಾದ ಹೆಚ್. ಜಯಪ್ಪ, ಹಿರಿಯರು ರೈತ ಪರ ಹೋರಾಟಗಾರರಾದ

ಎನ್.ಜಿ ಪುಟ್ಟಸ್ವಾಮಿ, ಎಂ.ಎನ್ ಪ್ರಭುಗೌಡ್ರು, ಬೂಸ್ನೂರು ಗುರುಬಸಪ್ಪ, ಜಿಲ್ಲಾ ಸಾರ್ವಜನಿಕ ಹಿತರಕ್ಷಣಾ ಒಕ್ಕೂಟದ ಕಾರ್ಯದರ್ಶಿ ಕಾಯಿಪೇಟೆ ಹಾಲೇಶ್, ವಿ. ಶಿವಮೂರ್ತಿ ಸ್ವಾಮಿ, ಹೆಚ್.ಸಿ.ಗುಡ್ಡಪ್ಪ, ಜಸ್ಟಿನ್ ಜಯಕುಮಾರ್, ಪಿ ಮಂಜುನಾಥ್, ಎಸ್.ಎಂ. ಚರಂತಿ ಮಠ್ ಕೋಗುಂಡಿ, ಸಿಕಂದರ್ ಬೆಲ್ಲದ,

ಅನಿಲ್ ವಿ ಪಾಲಂಕರ್, ಎಸ್.ಜಿ.ಸಂಗಪ್ಪ, ರಾಮು ಎಚ್, ಸುರೇಶ್ ಬೂತೆ, ಗದಿಗೆಪ್ಪ ಎನ್‌ಎಸ್, ಮಲ್ಲಿಕಾರ್ಜುನ ಕಟ್ಟಿಮನಿ, ಅಕ್ಕಿ ರಾಮಚಂದ್ರ, ಗಂಗಾಧರ ಕೆ.ಎಸ್, ವೀರಭದ್ರಿ, ಬೇಕರಿ ಶ್ರೀನಿವಾಸ್, ಸ್ಕೌಟ್ ಶಿಕ್ಷಕರಾದ ವಿಜಯ್ ಮತ್ತು ಇತರರು ಉಪಸ್ಥಿತರಿದ್ದರು.

# ಅವಿರೋಧ ಆಯ್ಕೆ



**ಹಾವೇರಿ:** ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಪದಾಕಾರಿ ಚುನಾವಣೆಯಲ್ಲಿ ರಾಜ್ಯ ಕಾರ್ಯದರ್ಶಿ ಸ್ಥಾನಕ್ಕೆ ಸ್ಪರ್ಧಿಸಿದ್ದ ನಿಂಗಪ್ಪ ಚಾವಡಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಸಂಘದ ಮುಖ್ಯ ಚುನಾವಣಾಕಾರಿ ಎನ್. ರವಿಕುಮಾರ (ಟೆಲೆಕ್ಸ್) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಿಸಿಎ ಪದವಿಯಲ್ಲಿ ರಶ್ಮಿಗೆ 4ನೇ ರ್‍ಯಾಂಕ್

**ದಾವಣಗೆರೆ:** ಬಾಪೂಜಿ ವಿದ್ಯಾಸಂಸ್ಥೆಯ ಶ್ರೀಮತಿ ಪಾರ್ವತಮ್ಮ ಶಾಮನೂರು ಶಿವಶಂಕರಪ್ಪ ಸ್ಕೂಲ್ ಆಫ್ ಹೈಟೆಕ್ ಎಜುಕೇಶನ್ ಬಿ.ಐ.ಇ.ಟಿ ಮಹಾವಿದ್ಯಾಲಯದ 2022-25ರ ಬ್ಯಾಚ್ ನ ವಿದ್ಯಾರ್ಥಿನಿಯಾದ ರಶ್ಮಿ ಅಶೋಕ್ ಬೆಳಗಾವಿ ಇವರು ದಾವಣಗೆರೆ ವಿಶ್ವವಿದ್ಯಾನಿಲಯದಿಂದ ಬಿಸಿಎ ವಿಭಾಗದಲ್ಲಿ 4ನೇ ಬ್ಯಾಂಕ್ ಪಡೆದಿದ್ದಾರೆ.ಇವರಿಗೆ ಬಾಪೂಜಿ ವಿದ್ಯಾಸಂಸ್ಥೆಯ ಗೌರವಕಾರ್ಯದರ್ಶಿಗಳು, ಆಡಳಿತ ಮಂಡಳಿ, ಮತ್ತು ಬಿ.ಐ.ಇ.ಟಿ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ ಹೆಚ್.ಬಿ. ಅರವಿಂದ್ ಮತ್ತು ನಿರ್ದೇಶಕರಾದ ಪ್ರೊ.ವೈ.ವೃಷಬೇಂದ್ರಪ್ಪ ಹಾಗೂ ಪಿ.ಎಸ್.ಎಸ್.ಎಸ್.ಹೆಚ್.ಇ. ಕಾಲೇಜಿನ ಪ್ರಾಂಶುಪಾಲರಾದ ಡಾ ಎಂ. ಪ್ರಸಾದ್, ವಿಭಾಗದ ಮುಖ್ಯಸ್ಥರಾದ ಬಿ. ಮೊಹಮದ್ ಸಾದಿಕ್ಬಮತ್ತು ಸಿಬ್ಬಂದಿವರ್ಗ, ನೌಕರವರ್ಗದವರು ಅಭಿನಂದಿದ್ದಾರೆ.

# ಶ್ರೀ ವೀರಾಂಜನೇಯ ಮಹಾಸ್ವಾಮಿ ಸಾರ್ವಜನಿಕ ಧ್ಯಾನ ಮಂದಿರದಲ್ಲಿ ಕಾರ್ತೀಕೋತ್ಸವ

**ದಾವಣಗೆರೆ :** ಕಾರ್ತಿಕ ಮಾಸದ ಪ್ರಯುಕ್ತ ಶ್ರೀ ಶಿವಕುಮಾರಸ್ವಾಮಿ ಬಡಾವಣೆಯ ಶ್ರೀ ವೀರಾಂಜನೇಯ ಮಹಾಸ್ವಾಮಿ ಧ್ಯಾನ ಮಂದಿರದಲ್ಲಿ ಪ್ರತಿವರ್ಷದ ಪದ್ಧತಿಯಂತೆ ಈ ವರ್ಷವೂ ಕೂಡಾ ದೀಪೋತ್ಸವ ಕಾರ್ಯಕ್ರಮ ಪರಮಪೂಜ್ಯ ಹನುಮಾವತಾರಿ ಶ್ರೀ ಶ್ರೀ ಶ್ರೀ ಬಸವರಾಜ ಗುರೂಜಿಯವರ ಸಾನಿಧ್ಯದಲ್ಲಿ ದಾವಣಗೆರೆಯ ಸಮಸ್ತ ಭಕ್ತರೊಡಗೂಡಿ ಕಾರ್ಯಕ್ರಮವನ್ನು ಕಾರ್ತೀಕ ಮಾಸ ದಿನಾಂಕ: 08–11–2025 ರ ಶುಭ ಶನಿವಾರ ದಿನದಂದು ಸಂಜೆ ಆಚರಿಸಿದೆವು. ಮಹಿಳೆಯರಿಂದ ರಂಗವಲ್ಲಿ ತಳಿರು ತೋರಣಗಳಿಂದ ಅಲಂಕರಿಸಿ 1008 ದೀಪಗಳನ್ನು ಬೆಳಗಿಸಿ ಪೂಜ್ಯರಿಂದ ಮತ್ತು ಸರ್ವ ಭಕ್ತಾದಿಗಳಿಂದ ಶ್ರೀ ವೀರಾಂಜನೇಯ ಸ್ವಾಮಿಗೆ ಮತ್ತು ಶ್ರೀ ವೀರಭದ್ರೇಶ್ವರ ಸ್ವಾಮಿಗೆ ವಿಶೇಷವಾಗಿ ಹೂವು–ಹಣ್ಣು, ತುಳಸಿ ಮಾಲೆ, ಬಿಲ್ವ ಪತ್ರೆಗಳಿಂದ ಅಲಂಕರಿಸಿ, "ಶ್ರೀಕ್ಷೇತ್ರ ಬಿದ್ದಹನುಮಪ್ಪನಮಟ್ಟಿ ಶ್ರೀ ವೀರಾಂಜನೇಯ ಮಹಾಸ್ವಾಮಿ ಶ್ರೀಕ್ಷೇತ್ರ ಕಂಚಿಕೆರೆಯಲ್ಲಿ ಭವ್ಯವಾದ ದೇಗುಲ ನಿರ್ಮಾಣ ಮತ್ತು ಮೂಲ ಸೌಕರ್ಯಗಳೊಂದಿಗೆ ಶೀಘ್ರದಲ್ಲಿ ಲೋಕಾರ್ಪಣೆಯಾಗಲಿ" ಎಂಬ ಸಂಕಲ್ಪದೊಂದಿಗೆ ಸರ್ವ ಭಕ್ತಾದಿಗಳ "ಜೈಶ್ರೀರಾಮ್" ಘೋಷಣೆಯೊಂದಿಗೆ ಪೂಜೆ ಮಹಾಮಂಗಳಾರತಿ ನಡೆಯಿತು. ಬಾಪೂಜಿ ವಿದ್ಯಾಸಂಸ್ಥೆಯ ಡೆಂಟಲ್ ಕಾಲೇಜಿನ ಕಾಡ್ಸ್ ಕೆಫೆಯನ್ನು ನಡೆಸುತ್ತಿರುವ ಶ್ರೀಯುತ ವೇದಮೂರ್ತಿ ಶ್ರೀ ಲಿಂಗರಾಜ್ ಹೊಳಿಬಸಯ್ಯ ಇವರನ್ನು ಹಾಗೂ ಶಾಮನೂರಿನ ಶ್ರೀ ಮರುಳಸಿದ್ದೇಶ್ವರ



ಎಲೆಕ್ಟ್ರಿಕಲ್ಸ್ ಮಾಲೀಕರಾದ ಶ್ರೀ ಪ್ರಕಾಶ್ ಹೊಸಮನಿ ಇವರುಗಳನ್ನು ಪರಮಪೂಜ್ಯರು ಶಾಲು ಹೊದಿಸಿ ಮೈಸೂರು ಪೇಟವನ್ನು ಹಾಕಿ ನೆನಪಿನ ಕಾಣಿಕೆ ಕೊಟ್ಟು ಸನ್ಮಾನಿಸಿದರು. ಶ್ರೀ ವೀರಾಂಜನೇಯ ಸ್ವಾಮಿಯು ಆಯುಷ್ಯ, ಆರೋಗ್ಯ. ಐಶ್ವರ್ಯ ಕೊಟ್ಟು ಕಾಪಾಡಲಿ ತಾವುಗಳು ತನು–ಮನ–ಧನದಿಂದ ಸ್ವಾಮಿ ಕಾರ್ಯವನ್ನು ಮಾಡುತ್ತಾ ಸ್ವಾಮಿಯ ಕೃಪೆಗೆ ಪಾತ್ರರಾಗಿರಿ, "ನಿಮ್ಮ ಅಪಾರವಾದ ನಂಬಿಕೆ ಭಕ್ತಿ ನಿಮ್ಮನ್ನು ಗೆಲ್ಲಿಸುತ್ತದೆ" ಎಂದು ಆಶೀರ್ವದಿಸಿ ಹಾರೈಸಿದರು. ಶ್ರೀಯುತ ವೇದಮೂರ್ತಿ ಶ್ರೀ ಲಿಂಗರಾಜ್ ಹೊಳಿಬಸಯ್ಯ ಇವರು ಮಾತನಾಡುತ್ತಾ ಪರಮಪೂಜ್ಯರ ದೂರದೃಷ್ಟಿ ಕಾಯಕ ಪ್ರಜ್ಞೆ ಸ್ವಾಮಿಯ ಸೇವಾ ಕೈಂಕರ್ಯವನ್ನು ನೋಡಿ ನನಗೆ ಬಹಳ ಸಂತೋಷವಾಗಿದೆ ಸದಾ ನನ್ನ ಮೇಲೆ ನನ್ನ ಕುಟುಂಬದ ಮೇಲೆ ಶ್ರೀ ವೀರಾಂಜನೇಯ ಸ್ವಾಮಿ ಆಶೀರ್ವಾದ ಶ್ರೀರಕ್ಷೆ ಸದಾ ಇರಲಿ ಎಂದು ತಮ್ಮ ಅನುಭವದ ಮಾತುಗಳನ್ನಾಡಿದರು. ಈ ಸಂದರ್ಭದಲ್ಲಿ ಪರಮ ಪೂಜ್ಯರೊಂದಿಗೆ ಶ್ರೀ ಲಿಂಗರಾಜ್ ಹೊಳಿಬಸಯ್ಯ, ಕಾಡ್ಸ್ ಕೆಫೆ ಬಾಪೂಜಿ ಡೆಂಟಲ್ ಕಾಲೇಜ್, ದಾವಣಗೆರೆ ಶ್ರೀ ಪ್ರಕಾಶ್ ಹೊಸಮನಿ ಮರುಳಸಿದ್ದೇಶ್ವರ ಎಲೆಕ್ಟ್ರಿಕಲ್ಸ್, ಶಾಮನೂರು, ಶ್ರೀಮತಿ ಕವಿತ ಎಂ. ನಾಗರಾಜ್ ಬಾಪೂಜಿ ಬ್ಯಾಂಕ್ ಉದ್ಯೋಗಿ, ಶ್ರೀ ಸಂಗಪ್ಪ ತೋಟದ, ಶ್ರೀ ಮಹೇಶಪ್ಪ ಗಂಗನಕಟ್ಟೆ, ಶ್ರೀಮತಿ ದುಗ್ಗಮ್ಮ, ಶ್ರೀಮತಿ ಬಿ. ಗೀತಾ ಎಂ. ಉದಯಕುಮಾರ್, ಶ್ರೀಮತಿ ವೀಣಾ ಸಂತೋಷ್‌ಕುಮಾರ್, ಶ್ರೀ ಮೃತ್ಯುಂಜಯ ಬ್ಯಾಂಕ್ ಮ್ಯಾನೇಜರ್, ಶ್ರೀ ಧರಣೇಂದ್ರ ಬಾಪೂಜಿ ಸಂಸ್ಥೆ ಅಡುಗೆ ಕಾಂಟ್ರಾಕ್ಟರ್, ಶ್ರೀ ಉಮೇಶ್ ಪ್ಲಂಬರ್, ಶ್ರೀ ಜ್ಯೋತಿ ದೊಡ್ಡಬಸಪ್ಪ ದಂಪತಿಗಳು, ಶ್ರೀ ಪ್ರಕಾಶ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ ಎಣ್ಣೆಕಾಳು ಯೋಜನೆಯಡಿ ರೈತರಿಗೆ ತರಬೇತಿ



**ಹಾವೇರಿ:** ಪ್ರಸಕ್ತ 2025–26 ನೇ ಸಾಲಿನ ರಾಷ್ಟ್ರೀಯ ಖಾದ್ಯತೈಲ ಅಭಿಯಾನ–ಎಣ್ಣೆಕಾಳು ಯೋಜನೆಯಡಿ ಭಾರತ ಸರ್ಕಾರ ಕೃಷಿ ಮತ್ತು ರೈತರ ಕಲ್ಯಾಣ, ಜಿಲ್ಲಾಡಳಿತ, ಕೃಷಿ ಇಲಾಖೆ, ಮೌಲ್ಯ ಸರಪಳಿ ಪಾಲುದಾರರು ಹಾಗೂ ಹನುಮನಮಟ್ಟಿ ಕೃಷಿ ವಿಜ್ಞಾನ ಕೇಂದ್ರ ಸಹಯೋಗದಲ್ಲಿ ಹಾವೇರಿ ಪ್ರಾಂತೀಯ ಸಹಕಾರಿ ಎಣ್ಣೆ ಬೀಜ ಬೆಳೆಗಾರರ ಒಕ್ಕೂಟದಲ್ಲಿ ಇತ್ತೀಚೆಗೆ ಹಾವೇರಿ ಹೋಬಳಿಯ ವಿವಿಧ ಗ್ರಾಮಗಳ ರೈತರಿಗೆ ತರಬೇತಿ ಮತ್ತು ಕ್ಷೇತ್ರಭೇಟಿ ಕಾರ್ಯಕ್ರಮ ಜರುಗಿತು.

ಸಹಾಯಕ ಕೃಷಿ ನಿರ್ದೇಶಕ ವೀರಭದ್ರಪ್ಪ.ಬಿ.ಹೆಚ್ ಅವರು ಮಾತನಾಡಿ, ರೈತರಿಗೆ ಎಣ್ಣೆ ಕಾಳು ಬೆಳೆಗಳಲ್ಲಿ ತಾಂತ್ರಿಕತೆಗಳ ನಾವಿನ್ಯತೆಗಳನ್ನು ಅಳವಡಿಸಿಕೊಳ್ಳಲು, ಎಣ್ಣೆಕಾಳು ಬೆಳೆಗಳ ಕ್ಷೇತ್ರ ವಿಸ್ತರಣೆ ಹಾಗೂ ಗುಣಮಟ್ಟ ಬೀಜಗಳ ಲಭ್ಯತೆ ಮತ್ತು ಮಾರುಕಟ್ಟೆ ಸಂಪರ್ಕ ಕಲ್ಪಿಸುವ ಕುರಿತು ಮಾಹಿತಿ ನೀಡಿದರು.ಹನುಮನಮಟ್ಟಿ ಕೃಷಿ ವಿಜ್ಞಾನ ಕೇಂದ್ರದ ಡಾ.ರಶ್ಮಿ ಅವರು, ಸೋಯಾಬಿನ್ ಬೆಳೆಯಲ್ಲಿ ಬೇಸಾಯ ಕ್ರಮಗಳ ಮತ್ತು ರೋಗ ಕೀಟಗಳ ಬಗ್ಗೆ ತರಬೇತಿ ನೀಡಿದರು.

ಉಪ ಕೃಷಿ ನಿರ್ದೇಶಕರಾದ ಶಿವಕುಮಾರ ಮಲ್ಲಾಡದ ಹಾಗೂ ಕರಿಯಲ್ಲಪ್ಪ.ಡಿ.ಕೆ ಅವರು ರೈತರಿಗೆ ಸೋಯಾಬಿನ್ ಬೀಜವನ್ನು ವಿತರಿಸಿದರು.

ತರಬೇತಿ ಕಾರ್ಯಕ್ರಮದಲ್ಲಿ ಕೆ.ಓ.ಎಫ್ ಅಧಿಕಾರಿ ಸಂಗಮೇಶ ಹಂಪಿ, ಕೃಷಿಕ ಸಮಾಜದ ಅಧ್ಯಕ್ಷ ವೀರಣ್ಣ ಕಳ್ಳಿಹಾಳ, ರೈತ ಸಂಘದ ಮುಖಂಡ ಶಿವಯೋಗಿ ಹೊಸಗೌಡ್ರ, ಪ್ರಗತಿಪರ ರೈತರು, ರೈತ ಮಹಿಳೆಯರು ಉಪಸ್ಥಿತರಿದ್ದರು.

ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಬಸನಗೌಡ ಪಾಟೀಲ ಕಾರ್ಯಕ್ರಮ ನಿರೂಪಿಸಿದರು ಹಾಗೂ ಮೇಘನ.ಎನ್. ವಂದಿಸಿದರು.

# ಡಿ.13 ರಂದು ರಾಷ್ಟ್ರೀಯ ಲೋಕ್ ಅದಾಲತ್

**ಬಳ್ಳಾರಿ:** ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಇವರ ನಿರ್ದೇಶನದಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ವತಿಯಿಂದ ಡಿಸೆಂಬರ್ 13 ರಂದು ನಗರದ ತಾಳೂರು ರಸ್ತೆಯ ಹೊಸ ಜಿಲ್ಲಾ ನ್ಯಾಯಾಲಯ ಸಂಕೀರ್ಣದಲ್ಲಿ ರಾಷ್ಟ್ರೀಯ ಲೋಕ್ ಅದಾಲತ್ ನಡೆಸಲಾಗುವುದು.

ಸಾರ್ವಜನಿಕರು ತಮ್ಮ ವ್ಯಾಜ್ಯಪೂರ್ವ, ರಾಜಿಯಾಗಬಹುದಾದ ಅಪರಾಧಿಕ ಪ್ರಕರಣಗಳು, ಚೆಕ್ ಪ್ರಕರಣಗಳು, ಬ್ಯಾಂಕ್ ಪ್ರಕರಣಗಳು, ಮೋಟಾರು ವಾಹನ ಅಪಘಾತ ಪರಿಹಾರ ನ್ಯಾಯಾಧೀಕರಣದ ಪ್ರಕರಣಗಳು, ವೈವಾಹಿಕ ಹಾಗೂ ಕೌಟುಂಬಿಕ ಪ್ರಕರಣಗಳು, ಸಿವಿಲ್ ಪ್ರಕರಣಗಳು ಹಾಗೂ ಇತರೆ ರಾಜಿಯಾಗಬಹುದಾದ ಅಪರಾಧಿಕ ಪ್ರಕರಣಗಳು, ಚೆಕ್ ಪ್ರಕರಣಗಳು, ಬ್ಯಾಂಕ್ ಪ್ರಕರಣಗಳು, ಮೋಟಾರು ವಾಹನ ಅಪಘಾತ ಪರಿಹಾರ ನ್ಯಾಯಾಧೀಕರಣದ ಪ್ರಕರಣಗಳು, ವೈವಾಹಿಕ ಹಾಗೂ ಕೌಟುಂಬಿಕ ಪ್ರಕರಣಗಳು, ಸಿವಿಲ್ ಪ್ರಕರಣಗಳು ಹಾಗೂ ಇತರೆ ರಾಜಿಯಾಗಬಹುದಾದ ' ಪ್ರಕರಣಗಳನ್ನು ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯ ಒಟ್ಟು 31 ನ್ಯಾಯಾಲಯಗಳಲ್ಲಿ ರಾಷ್ಟ್ರೀಯ ಲೋಕ್ ಅದಾಲತ್ ಮೂಲಕ ಶೀಘ್ರವೇ ಇತ್ಯರ್ಥಗೊಳಿಸಿ ಪರಿಹಾರ ಪಡೆದುಕೊಳ್ಳಲು ಸುವರ್ಣ ಅವಕಾಶವಾಗಿದೆ.

*ಸೂಚನೆ:*

ಪ್ರತಿದಿನ ಎಲ್ಲಾ ನ್ಯಾಯಾಲಯಗಳಲ್ಲಿ ಮೆಗಾ–ಲೋಕ್ ಅದಾಲತ್ ಗೆ ಸಂಬಂಧಿಸಿದಂತೆ ಪೂರ್ವಭಾವಿ ಬೈಠಕ್ ಗಳು ನಡೆಯುತ್ತಲಿರುತ್ತವೆ.

ಹೆಚ್ಚಿನ ಮಾಹಿತಗಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಥವಾ ದೂ.08392–278077 ಹಾಗೂ ಎನ್‌ಎಎಲ್‌ಎಸ್‌ಎ ಸಹಾಯವಾಣಿ ಸಂಖ್ಯೆ 15100 ಗೆ ಕರೆ ಮಾಡಿ ಮಾಹಿತಿ ಪಡೆಯಬಹುದು.

ಸಾರ್ವಜನಿಕರು ಹಾಗೂ ಕಕ್ಷಿದಾರರು ಇದರ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್.ಎನ್ ಹೊಸಮನೆ ಅವರು ತಿಳಿಸಿದ್ದಾರೆ.

# ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಕಾನೂನಿನ ಅರಿವು ಅಗತ್ಯ: ಮಹಾವೀರ.ಮ.ಕೆರೆಣ್ಣನವರ್

**ದಾವಣಗೆರೆ :** ಕಾನೂನು ಸೇವಾ ಪ್ರಾಧಿಕಾರದ ಕಾಯ್ದೆಯಡಿ ವಿಚಾರಣಾಧೀನ ಕೈದಿಗಳಿಗೆ ಉಚಿತ ಮತ್ತು ಗುಣಮಟ್ಟದ ಕಾನೂನು ಸೇವೆಗಳನ್ನು ಕಡ್ಡಾಯವಾಗಿ ಒದಗಿಸಲಾಗುವುದು ಎಂದು ಹಿರಿಯ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ್ ಎಂ. ಕರೆಣ್ಣನವರ್ ಹೇಳಿದರು.

ಸೋಮವಾರ(ನ.10) ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ವತಿಯಿಂದ ರಾಷ್ಟ್ರೀಯ ಕಾನೂನು ಸೇವೆಗಳ ದಿನಾಚರಣೆ ಅಂಗವಾಗಿ ಜಿಲ್ಲಾ ಕಾರಾಗೃಹದಲ್ಲಿ ಆಯೋಜಿಸಲಾಗಿದ್ದ ಕಾನೂನು ಅರಿವು, ನೆರವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರಗಳಿಂದ ಈ ಸೇವೆಗಳನ್ನು ಒದಗಿಸಲಾಗಿದೆ. ಉಚಿತ ಕಾನೂನು ನೆರವು ಎಲ್ಲಾ ವಿಚಾರಣಾಧೀನ ಕೈದಿಗಳು, ಅವರು ಅರ್ಹತಾ ಮಾನದಂಡಗಳನ್ನು ಪೂರೈಸಿದಲ್ಲಿ ಅಥವಾ ಮಹಿಳೆಯರು, ಮಕ್ಕಳು ಇತ್ಯಾದಿ ವಿಶೇಷ ವರ್ಗಕ್ಕೆ ಸೇರಿದ್ದರೆ, ಉಚಿತ ಕಾನೂನು ನೆರವು ಪಡೆಯಲು ಅರ್ಹರಾಗಿರುತ್ತಾರೆ. ಜೈಲು ಕಾನೂನು ನೆರವು ಕೇಂದ್ರಗಳು ಕರ್ನಾಟಕದ ಪ್ರಮುಖ ಜೈಲುಗಳಲ್ಲಿ ಇಂತಹ ಕ್ಲಿನಿಕ್‌ಗಳನ್ನು ಸ್ಥಾಪಿಸಲಾಗಿದೆ.

ಇಲ್ಲಿ ಕಾನೂನು ಸಲಹೆಗಾರರು ಮತ್ತು ಪ್ಯಾರಾ ಲೀಗಲ್ ವಾಲಂಟಿಯರ್ಸ್ ನಿಯಮಿತವಾಗಿ ಭೇಟಿ ನೀಡುತ್ತಾರೆ. ಕೈದಿಗಳ ಕಷ್ಟಗಳನ್ನು ಆಲಿಸಿ, ಅವರ ಪ್ರಕರಣಗಳಿಗೆ ಸಂಬಂಧಿಸಿದಂತೆ ಅರ್ಜಿಗಳಾದ ಜಾಮೀನು, ಪೆರೋಲ್, ಮೇಲ್ಮನವಿ ತಯಾರಿಸಲು ಸಹಾಯ ಮಾಡುತ್ತಾರೆ. ಕ್ರಿಮಿನಲ್ ಪ್ರಕರಣಗಳಿಗೆ ಸಂಬಂಧಿಸಿದಂತೆ, ಸರ್ಕಾರಿ



ರಕ್ಷಣಾ ವಕೀಲರಂತೆ, ಪೂರ್ಣ ಸಮಯ ಮೀಸಲಾದ ವಕೀಲರ ತಂಡವನ್ನು ರಚಿಸಲಾಗಿದೆ.

ಕೈದಿಗಳಿಗೆ ಬಂಧನದ ಆರಂಭಿಕ ಹಂತದಿಂದ ಮೇಲ್ಮನವಿ ಹಂತದವರೆಗೆ ಕಾನೂನು ನೆರವು ಮತ್ತು ಪ್ರಾತಿನಿಧ್ಯವನ್ನು ಒದಗಿಸಲಾಗುವುದು. ವಿಚಾರಣಾ ನ್ಯಾಯಾಲಯದಿಂದ ಪ್ರಕರಣ ಇತ್ಯರ್ಥಗೊಂಡಲ್ಲಿ ಅಪೀಲು ಕೂಡ ಸಲ್ಲಿಸಲು ಈ ವಕೀಲರು ಸಕ್ಷಮವಾಗಿರುತ್ತಾರೆ. ದಾವಣಗೆರೆಯಲ್ಲಿ ಈಗಾಗಲೇ ಎಂಟು ಜನ ಪೂರ್ಣ ಪ್ರಮಾಣದ ವಕೀಲರುಗಳನ್ನು ನೇಮಿಸಿಕೊಳ್ಳಲಾಗಿದೆ. ರಿಮಾಂಡ್ ಮತ್ತು ಜಾಮೀನು ವಕೀಲರು, ವಿಚಾರಣಾಧೀನ ಕೈದಿಗಳಿಗೆ ನ್ಯಾಯಾಂಗ ಬಂಧನ ವಿಧಿಸುವ ಹಂತದಲ್ಲಿ ಮತ್ತು ಜಾಮೀನು ಪಡೆಯಲು ಸಹಾಯ ಮಾಡಲು ನ್ಯಾಯಾಲಯಗಳಲ್ಲಿ ವಿಶೇಷ ವಕೀಲರನ್ನು ನೇಮಿಸಲಾಗಿದೆ.

ಜಿಲ್ಲಾ ನ್ಯಾಯಾಲಯದ ಆವರಣದಲ್ಲಿ ಡಿಎಎಎ ಕಚೇರಿ ಇದೆ. ಕೈದಿಗಳ ಕುಟುಂಬದವರು ಅಥವಾ ಆಸಕ್ತರು ಅಲ್ಲಿಗೆ ಅರ್ಜಿ ಸಲ್ಲಿಸುವ ಮೂಲಕ ಕಾನೂನು ನೆರವನ್ನು ಪಡಯಬಹುದು.

ಕರ್ನಾಟಕ ಕಾರಾಗೃಹ ನಿಯಮಾವಳಿಗಳು ವಿಚಾರಣಾಧೀನ ಕೈದಿಗಳನ್ನು ಶಿಕ್ಷೆಗೆ ಗುರಿಯಾದ ಕೈದಿಗಳಿಂದ ಪ್ರತ್ಯೇಕವಾಗಿ ಇಡುವುದು ಮತ್ತು ಅವರಿಗೆ ಸೂಕ್ತ ವಸತಿ, ಆಹಾರ ಹಾಗೂ ವೈದ್ಯಕೀಯ ಸೌಲಭ್ಯಗಳನ್ನು ಒದಗಿಸುವುದನ್ನು ಕಡ್ಡಾಯವಾಗಿರುತ್ತದೆ. ವಕೀಲರನ್ನು ಭೇಟಿ ಮಾಡುವ ಸೌಲಭ್ಯವು ಇದರಲ್ಲಿ ಒಂದು ಪ್ರಮುಖ ಹಕ್ಕು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಎ.ಡಿ.ಆರ್ ಕಟ್ಟಡ, ಹಳೇ ನ್ಯಾಯಾಲಯಗಳ ಸಂಕೀರ್ಣ, ದಾವಣಗೆರೆ–577002. ದೂರವಾಣಿ ಸಂಖ್ಯೆ: 08192–296364, ಇ–ಮೇಲ್: dlsadavangere4@gmail.com ªÉ¨ï ¸ÉÊmï https://https://districts.ecourts.gov.in/davangere ಸಂಪರ್ಕಿಸಬಹುದು ಎಂದರು. ಕಾರಾಗೃಹದ ಅಧೀಕ್ಷಕರಾದ ಆನಂದ ಭಜಂತ್ರಿ, ವಕೀಲರಾದ ಸೋಹನ್ ಕಟಗಿಹಳ್ಳಿ ಮಠ, ಸುಭಾಷ್.ಹೆಚ್, ಕೆಂಚಪ್ಪ ಪೊಲೀಸ್ ಅಧಿಕಾರಿ ಸೋಮಶೇಖರ್ ಉಪಸ್ಥಿತರಿದ್ದರು.

# ವೀರವನಿತೆ ಒನಕೆ ಓಬವ್ವ ಜಯಂತಿ

**ದಾವಣಗೆರೆ:** ಜಿಲ್ಲಾಡಳಿತ ವತಿಯಿಂದ ನವಂಬರ್ 11 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಡಳಿತ ಭವನದ ತುಂಗಾಭದ್ರಾ ಸಭಾಂಗಣದಲ್ಲಿ ವೀರವನಿತೆ ಒನಕೆ ಓಬವ್ವ ಜಯಂತಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ರವಿಚಂದ್ರ ತಿಳಿಸಿದ್ದಾರೆ.

# ನವೆಂಬರ್ 12 ರಂದು ಲೋಕಾಯುಕ್ತ ಅಧೀಕ್ಷಕರಿಂದ ಅಹವಾಲು ಸ್ವೀಕಾರ

**ದಾವಣಗೆರೆ:** ಜಿಲ್ಲೆಯ ಚನ್ನಗಿರಿ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಇದೇ ನವೆಂಬರ್ 12 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1.30ರ ವರೆಗೆ ಲೋಕಾಯುಕ್ತ ಅಧೀಕ್ಷಕರಾದ ಎಂ.ಎಸ್. ಕೌಲಾಪೂರೆ ಅವರ ಅಧ್ಯಕ್ಷತೆಯಲ್ಲಿ ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕರು ಒದಗಿಸಬೇಕಾದ ಸರ್ಕಾರಿ ಸವಲತ್ತುಗಳು, ಸರ್ಕಾರದ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸಲು ತಾರತಮ್ಯ ನೀತಿ ಅನುಸರಿಸುವುದು. ಕಳಪೆ ಕಾಮಗಾರಿ, ಹಣ ದರುಪಯೋಗ ಕುರಿತ ಹಾಗೂ ಸರ್ಕಾರದ ಕಾರ್ಯಗಳು ಮಾಡಿಕೊಡಲು ವಿಳಂಬ, ನಿಗಧಿತ ಶುಲ್ಕಕ್ಕಿಂತ ಹೆಚ್ಚಿನ ಹಣ ಅಥವಾ ಲಂಚ ಕೇಳುತ್ತಿದ್ದಲ್ಲಿ ಈ ಸಂಬಂಧ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಲಿದ್ದಾರೆ ಎಂದು ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಎಂ.ಎಸ್.ಕೌಲಾಪೂರೆ ತಿಳಿಸಿದ್ದಾರೆ.

# ಸಮಾಜ ಕಲ್ಯಾಣ ಇಲಾಖೆ: ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಆಹ್ವಾನ

**ಬಳ್ಳಾರಿ:** ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಮತ್ತು ಪ್ರೋತ್ಸಾಹಧನ ಕಾರ್ಯಕ್ರಮಗಳಡಿ ಪ್ರಸಕ್ತ ಶೈಕ್ಷಣಿಕ ಸಾಲಿಗೆ ಪರಿಶಿಷ್ಟ ಜಾತಿಯ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರ ವಿದ್ಯಾರ್ಥಿ ವೇತನ ಹಾಗೂ ಪ್ರೋತ್ಸಾಹಧನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ವಿದ್ಯಾರ್ಥಿಗಳು ಸಮಾಜ ಕಲ್ಯಾಣ ಇಲಾಖೆಯ ಅಧಿಕೃತ ವೆಬ್‌ಸೈಟ್ www.sw.kar.nic.in ಅಥವಾ https://ssp.postmatric.karnataka.gov.in/homepage.aspx ಲಿಂಕ್ ನಲ್ಲಿ ಅರ್ಜಿ ಸಲ್ಲಿಸಬಹುದು.

*ಸೂಚನೆಗಳು*:

ಎಸ್‌ಎಸ್‌ಎಲ್‌ಸಿ, ಪಿಯುಸಿ, ಪದವಿ, ಸ್ನಾತಕೋತ್ತರ ಪದವಿಗಳಲ್ಲಿ ವ್ಯಾಸಂಗ ಮಾಡಿ ಪ್ರಥಮ ಬಾರಿಗೆ, ಪ್ರಥಮ ಪ್ರಯತ್ನದಲ್ಲಿ ಪಾಸಾದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ಪ್ರೋತ್ಸಾಹ ಧನಕ್ಕಾಗಿ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.

ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನಕ್ಕೆ ಹಿಂದಿನ ಸಾಲಿನಲ್ಲಿ ಅರ್ಜಿ ಸಲ್ಲಿಸಿ ವಿದ್ಯಾಥಿವೇತನ ಪಡೆದ ವಿದ್ಯಾರ್ಥಿಗಳು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನಕ್ಕೆ ಹಿಂದಿನ ಸಾಲಿನಲ್ಲಿ ಅರ್ಜಿ ಸಲ್ಲಿಸದೇ ಇರುವ ವಿದ್ಯಾರ್ಥಿಗಳು ಪ್ರಸಕ್ತ ಸಾಲಿಗೆ ಅರ್ಜಿ ಸಲ್ಲಿಸಬಹುದು.

ಕಳೆದ ಸಾಲಿನಲ್ಲಿ ವಿವಿಧ ಕಾರಣಗಳಿಂದ ವಿದ್ಯಾರ್ಥಿ ವೇತನ ಮಂಜೂರಾಗದ ಹಾಗೂ ರಿಜೆಕ್ಟ್ ಆಗಿರುವ ವಿದ್ಯಾರ್ಥಿಗಳು ಮಾತ್ರ ಪ್ರಸಕ್ತ ಸಾಲಿನಲ್ಲಿ ಮತ್ತೊಮ್ಮೆ ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ.

ವಿದ್ಯಾರ್ಥಿಗಳು ತಮ್ಮ ಬ್ಯಾಂಕ್ ಖಾತೆಗಳಿಗೆ ಎನ್‌ಪಿಸಿಐ ಆಧಾರ್ ಸೀಡಿಂಗ್ ಮಾಡಿಸಿರಬೇಕು. ತೊಂದರೆಯಿದ್ದಲ್ಲಿ ಅಂಚೆ ಕಚೇರಿಯಲ್ಲಿ ಖಾತೆಯನ್ನು ತೆರೆಯಬೇಕು.

ಮೆಟ್ರಿಕ್ ನಂತರದ ವಿದ್ಯಾರ್ಥಿಗಳು ಪ್ರತಿ ಶೈಕ್ಷಣಿಕ ಸಾಲಿಗೆ ಆನ್‌ಲೈನ್ ಅರ್ಜಿ ಸಲ್ಲಿಸಬಹುದು.ಪ್ರಸಕ್ತ ಸಾಲಿನಿಂದ ಪ್ರತಿ ಶಾಲಾ ಮುಖ್ಯೋಪಾಧ್ಯಾಯರು, ಹಾಗೂ ಕಾಲೇಜು ಪ್ರಾಂಶುಪಾಲರು ಗಳಿಗೆ ಸಬಲೀಕರಣ ಅಧಿಕಾರಿ ಅಥವಾ ಸಂಸ್ಥೆಯ ನೋಡಲ್ ಅಧಿಕಾರಿಯನ್ನು ನಿಯೋಜಿಸಿದ್ದು, ತಾಲ್ಲೂಕು ಲಾಗಿನ್‌ನಲ್ಲಿ ಸೇರ್ಪಡೆ ಮಾಡಿಕೊಳ್ಳಲು ಕ್ರಮವಹಿಸಬೇಕು. ಕಾಲೇಜು ಪ್ರಾಂಶುಪಾಲರು ಗಳಿಗೆ ಸಬಲೀಕರಣ ಅಧಿಕಾರಿ ಅಥವಾ ಸಂಸ್ಥೆಯ ನೋಡಲ್ ಅಧಿಕಾರಿಯನ್ನು ನಿಯೋಜಿಸಿದ್ದು, ತಾಲ್ಲೂಕು ಲಾಗಿನ್‌ನಲ್ಲಿ ಸೇರ್ಪಡೆ ಮಾಡಿಕೊಳ್ಳಲು ಕ್ರಮವಹಿಸಬೇಕು. ನಂತರ ಸೇರ್ಪಡೆಯಾದ ಅಧಿಕಾರಿಗಳ ಇ–ಕೆವೈಸಿ ವಿವರಗಳನ್ನು ಅಪ್ಡೇಟ್ ಮಾಡಿ ಅನುಮೋದಿಸುತ್ತಾರೆ.

ವಿದ್ಯಾರ್ಥಿಗಳು ಕಡ್ಡಾಯವಾಗಿ ಮೊದಲು ಬಯೋಮೆಟ್ರಿಕ್ ಇ–ಧೃಢಿಕರಣ/ಎನ್‌ಎಸ್‌ಪಿ ಒಟಿಆರ್ ನೊಂದಣಿಯನ್ನು ಮಾಡಿಸಿದ ನಂತರ ಎಸ್‌ಎಸ್‌ಪಿ ಯಲ್ಲಿ ವಿದ್ಯಾರ್ಥಿವೇತನ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ನಗರದ ಮೊದಲನೇ ರೈಲ್ವೇ ಗೇಟ್ ಹತ್ತಿರದ ಡಾ.ಬಿ.ಆರ್.ಅಂಬೇಡ್ಕರ್ ಭವನದ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರ(ಗ್ರೇಡ್–1) ಕಚೇರಿ ಅಥವಾ ದೂ.08392–244738, ಮೊ.9480843073 ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಾಣಿ–ಪಕ್ಷಿಗಳಿಗೆ ಆಹಾರ ಒದಗಿಸುವ ಹಣ್ಣಿನ ಗಿಡ ನಾಟಿ ಅತ್ಯಂತ ಪುಣ್ಯದ ಕೆಲಸ: ಸಂಪತ್

**ಚಿಕ್ಕಮಗಳೂರು:** ನಶಿಸುತ್ತಿರುವ ಪ್ರಕೃತಿಯ ನಾಶದಿಂದಾಗಿ ತಿನ್ನಲು ಆಹಾರ, ಕುಡಿಯಲು ನೀರಿಲ್ಲದ ಕಾರಣ ಕಾಡಿನಲ್ಲಿರುವ ಪ್ರಾಣಿ, ಪಕ್ಷಿಗಳು ನಾಡಿನತ್ತ ಮುಖ ಮಾಡುತ್ತಿದ್ದು, ಇದರಿಂದಾಗಿ ಪ್ರಾಣಿಗಳು ಮತ್ತು ಮಾನವನ ನಡುವೆ ಸಂಘರ್ಷ ಏರ್ಪಟ್ಟಿದೆ. ಇಂತಹ ಸಂದರ್ಭದಲ್ಲಿ ಕಾಡು ಮತ್ತು ಪ್ರಕೃತಿಯ ರಕ್ಷಣೆಯ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ಜಿಲ್ಲಾ ಪ್ರಾದೇಶಿಕ ಮತ್ತು ಸಾಮಾಜಿಕ ಅರಣ್ಯಾಧಿಕಾರಿ ಸಂಪತ್ ಅಭಿಪ್ರಾಯಿಸಿದ್ದಾರೆ.

ಚಿಕ್ಕಮಗಳೂರು ತಾಲ್ಲೂಕಿನ ಆವತಿ ಗ್ರಾಮದ ಐದೂರು ದೇವೀರಮ್ಮ ದೇವಸ್ಥಾನದ ಆವರಣದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ನಿನ್ನೆ ಹಮ್ಮಿಕೊಂಡಿದ್ದ ಹಣ್ಣಿನ ಗಿಡ ನಾಟಿ ಮಾಡುವ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡುತ್ತಿದ್ದರು.

ಮಾನವ ತನ್ನ ಸ್ವಾರ್ಥಕ್ಕಾಗಿ ಕಾಡಿನಲ್ಲಿರುವ ಮರ, ಗಿಡಗಳನ್ನು ಕಡಿದು ಭೂಮಿಯನ್ನು ಸಮತಟ್ಟು ಮಾಡಿ ವಾಣಿಜ್ಯ ಉಪಯೋಗಕ್ಕಾಗಿ ಕಟ್ಟಡಗಳನ್ನು ನಿರ್ಮಿಸಲಾಗುತ್ತಿದೆ. ಇದರಿಂದಾಗಿ ಪ್ರಕೃತಿಯಲ್ಲಿ ಅಸಮತೋಲನದ ಜೊತೆಗೆ ಕಾಡು ಪ್ರಾಣಿಗಳು ಆಹಾರ ಹರಸಿ ನಾಡಿನತ್ತ ಮುಖ ಮಾಡುತ್ತಿವೆ. ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮೂಲಕ ಧರ್ಮಸ್ಥಳದ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆಯವರ ದೂರದೃಷ್ಟಿಯ ಫಲವಾಗಿ ರಾಜ್ಯದ್ಯಂತ ಗ್ರಾಮೀಣಾಭಿವೃದ್ಧಿ ಯೋಜನೆ ಅನುಷ್ಠಾನಗೊಳ್ಳುತ್ತಿದ್ದು, ಇದರ ಭಾಗವಾಗಿ ಪ್ರಾಣಿ, ಪಕ್ಷಿಗಳಿಗೆ ಆಹಾರವನ್ನು ಒದಗಿಸುವ ಹಣ್ಣಿನ ಗಿಡಗಳನ್ನು ನಾಟಿ ಮಾಡುವ ಮೂಲಕ



ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಪುಣ್ಯದ ಕೆಲಸ ಮಾಡುತ್ತಿದೆ ಎಂದು ತಿಳಿಸಿದರು.

ಹೆಗ್ಗಡೆಯವರ ದೂರದೃಷ್ಠಿಯ ಫಲವಾಗಿ ದೇವಾಲಯಗಳ ಆವರಣ, ಸರ್ಕಾರಿ ಭೂಮಿ, ಶಾಲಾ ಆವರಣ ಮತ್ತು ಸ್ಮಶಾನ ಜಾಗಗಳಲ್ಲಿ ಗ್ರಾಮಸ್ಥರು ಮತ್ತು ಅರಣ್ಯ ಇಲಾಖೆ ಸಹಕಾರದೊಂದಿಗೆ ಹಣ್ಣಿನ ಗಿಡಗಳನ್ನು ನಾಟಿ ಮಾಡುವ ಕೆಲಸ ಮಾಡಲಾಗುತ್ತಿದೆ. ಈ ಕಾರ್ಯಕ್ಕೆ ನಾವೆಲ್ಲರೂ ಕೈ ಜೋಡಿಸಬೇಕಾಗಿದೆ ಎಂದರು.

ಆವತಿ ಗ್ರಾಮದ ಮುಖಂಡ ಪ್ರದೀಪ್ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಐದೂರು ಗ್ರಾಮದಲ್ಲಿರುವ ದೇವೀರಮ್ಮ ದೇವಸ್ಥಾನ, ಭಂಡಾರ ಮನೆ ಮತ್ತು ಮಲ್ಲೇಶ್ವರಸ್ವಾಮಿ ದೇವಸ್ಥಾನ ಆವರಣದಲ್ಲಿ ಹಣ್ಣಿನ ಗಿಡಗಳನ್ನು ನಾಟಿ ಮಾಡಲಾಗಿದ್ದು, ಇದು ಪ್ರಾಣಿ, ಪಕ್ಷಿ ಸಂಕುಲಕ್ಕೆ ಆಸರೆಯಾಗಿದೆ. ಇಲ್ಲಿ ನಾಟಿ ಮಾಡಿರುವ ಹಣ್ಣಿನ ಗಿಡಗಳನ್ನು ಸಂರಕ್ಷಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ತಿಳಿಸಿದರು.

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಚಿಕ್ಕಮಗಳೂರು ತಾಲ್ಲೂಕು ಯೋಜನಾಧಿಕಾರಿ ರೂಪ ಜೆ.ಜೈನ್ ಮಾತನಾಡಿ ಪ್ರತಿವರ್ಷ ಜೂನ್ 5ರಂದು ಆರಂಭಗೊಳ್ಳುವ ವಿಶ್ವ ಪರಿಸರ ದಿನದ ಅಂಗವಾಗಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಶಾಲೆ, ಕಾಲೇಜು, ಗ್ರಾಮಗಳ ಸಮುದಾಯ ಭವನ, ಭಜನಾ ಮಂದಿರಗಳ ಆವರಣಗಳಲ್ಲಿ ಹಣ್ಣಿನ ಗಿಡಗಳನ್ನು ನಾಟಿ ಮಾಡಲಾಗುತ್ತಿದ್ದು, ಈ ವರ್ಷ ಇಂತಹ ಹತ್ತು ಕಾರ್ಯಕ್ರಮಗಳನ್ನು ರೂಪಿಸುವ ಮೂಲಕ 950 ಹಣ್ಣಿನ ಗಿಡಗಳನ್ನು ನಾಟಿ ಮಾಡಲಾಗಿದೆ. ಚಿಕ್ಕಮಗಳೂರು ತಾಲ್ಲೂಕಿನ ಮಲ್ಲೇನಹಳ್ಳಿಯ ಕೆಂಚರಾಯಸ್ವಾಮಿ ದೇವಾಲಯದ ಆವರಣದಲ್ಲಿ 200 ಗಿಡಗಳನ್ನು ನೆಡಲಾಗಿದ್ದು, ಐದೂರು ಗ್ರಾಮದ ದೇವೀರಮ್ಮ ದೇವಾಲಯದ ಆವರಣದಲ್ಲಿ 250ಕ್ಕೂ ಹೆಚ್ಚು ಹಣ್ಣಿನ ಗಿಡಗಳನ್ನು ನಾಟಿ ಮಾಡಲಾಗಿದೆ ಎಂದು ತಿಳಿಸಿದರು.ಸಹಾಯಕ ಪೋಲೀಸ್ ಉಪ ನಿರೀಕ್ಷಕ ಪಿ.ಹೆಚ್. ಪ್ರಕಾಶ್, ಅರಣ್ಯಾಧಿಕಾರಿ ಮಂಜುನಾಥ್, ಸಹಾಯಕ ಠಾಣಾಧಿಕಾರಿ ಬಿ.ಆರ್. ರಾಮಣ್ಣ, ಗ್ರಾಮದ ಹಿರಿಯ ಮುಖಂಡರಾದ ಐದೂರು ಗ್ರಾಮ ಪಂಚಾಯಿತಿ ಸದಸ್ಯ ಟಿ.ಎಲ್. ಅರುಣ್, ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆಯ ಧರ್ಮರಾಜ್, ಶಿಕ್ಷಕರಾದ ಟಿ.ಕೆ. ಉಮೇಶ್, ಟಿ.ಡಿ. ಮಲ್ಲೇಶ್‌ಗೌಡ, ಕೆ. ರಾಜೇಗೌಡ, ಕೃಷ್ಣಯ್ಯ, ಮಂಜಯ್ಯ ಮತ್ತು ಶೌರ್ಯ ವಿಪತ್ತು ಘಟಕದ ಮಾಸ್ಟರ್ ಶಶಿಕುಮಾರ್, ಟೈಗರ್ಸ್ ಕ್ಲಬ್‌ನ ಸದಸ್ಯರು, ಶ್ರೀ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಪ್ರಗತಿಬಂಧು, ಸ್ವಸಹಾಯಕ ಸಂಘದ ಸದಸ್ಯರು ಹಾಗೂ ಗ್ರಾಮದ ಮುಖ್ಯಸ್ಥರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಶ್ರೀ ಕ್ಷೇತ್ರ ಧರ್ಮಸ್ದಳ ಗ್ರಾಮಾಭಿವೃದ್ಧಿ ಯೋಜನೆಯ ಕೃಷಿ ಅಧಿಕಾರಿ ಉಮೇಶ್ ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿ, ಎಲ್ಲರನ್ನೂ ಸ್ವಾಗತಿಸಿದರು. ಸೇವಾ ಪ್ರತಿನಿಧಿ ಮಂಜುನಾಥ್ ಕಾರ್ಯಕ್ರಮ ನಿರೂಪಿಸಿದರು. ವಲಯ ಮೇಲ್ವಿಚಾರಕ ರವಿ ಉಪಸ್ಥಿತರಿದ್ದರು

# ಇನ್‌ಕ್ಯೂಬೇಶನ್ ಕಾರ್ಯಾಗಾರ

**ಹಾಸನ** : ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿಲ್ಲಿ ನಡೆದ ಖಂಒಕ ಯೋಜನೆಯಡಿಯಲ್ಲಿ ಉದ್ದಿಮೆಗಳನ್ನು ಪ್ರಾರಂಭಿಸಲು ಹೆಚ್ಚಿನ ತಿಳುವಳಿಕೆ ನೀಡಲು ಅರಿವು ಮೂಡಿಸಲು ಆಯೋಜಿಸಿದ್ದ ಒಂದು ದಿನದ Incubation Centre ತೆರೆಯಲಿದ್ದು, ಕಾರ್ಯಾಗಾರದ ಸದುಪಯೋಗ ಪಡಿಸಿಕೊಳ್ಳಬೇಕೆಂದು ಟೆಕ್ನಾಕ್ ಸಿಇಓ ಮತ್ತು ಮುಖ್ಯ ಸಲಹೆಗಾರರಾದ ಸಿದ್ದರಾಜುರವರು ತಿಳಿಸಿದ್ದಾರೆ.

ಹಾಸನ ಜಿಲ್ಲಾ ಕೈಗಾರಿಕೆಗಳ ಸಂಘದ ಉಪಾಧ್ಯಕ್ಷರಾದ ಪ್ರಕಾಶ್ ಯಾಜಿ ರವರು ಮಾತನಾಡಿ ದೇಶದಲ್ಲಿ 4 ಕೋಟಿಗಿಂತ ಹೆಚ್ಚಿನ ಎಂ.ಎಸ್.ಎಂ.ಇ ಉದ್ಯಮಗಳಿದ್ದು, ಸುಮಾರು 28 ಕೋಟಿ ಜನರಿಗೆ ಉದ್ಯೋಗವನ್ನು ನೀಡಿದ್ದು, ದೇಶದ ಆರ್ಥಿಕ ಉನ್ನತಿಗೆ ಮತ್ತು ಜಿ.ಡಿ.ಪಿ ಅಭಿವೃದ್ಧಿಗೆ ಸಹಕಾರಿಯಾಗಿದೆ ಎಂದರು.

ಎಫ್.ಕೆ.ಸಿ.ಸಿ.ಐ ನಿರ್ದೇಶಕರಾದ ಕಿರಣ್ ಹೆಚ್.ಎ ರವರು ಮಾತನಾಡಿ ಹಾಸನದಲ್ಲಿ ಇರುವ ಟಯೋಟ ಖಟಟಿಥಿಣಭಚಿಣುಂಟಿ ಟಚಿಥ ಮತ್ತು ಒಡಿಚಿಂಜ ಪ್ರಾಜೆಕ್ಟ್ ಬಗ್ಗೆ ಅಧ್ಯಯನ ಮಾಡಲು ಜಿಲ್ಲೆಯಲ್ಲಿ ಹೊಸ ಕೈಗಾರಿಕೆಗಳು ಬರುವ ಬಗ್ಗೆ ಪ್ರಯತ್ನಿಸಬೇಕೆಂದು ತಿಳಿಸಿದರು.

ಕೆ.ಎಸ್.ಎಫ್.ಸಿ ಸಹಾಯಕ ಪ್ರಧಾನ ವ್ಯವಸ್ಥಾಪಕರಾದ ರವೀಂದ್ರನಾಥ್ ರವರು ಮಾತನಾಡಿ ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ವತಿಯಿಂದ ಹೊಸದಾಗಿ ಪ್ರಾರಂಭಿಸುವ ಎಂ.ಎಸ್.ಎಂ.ಇ ಗಳಿಗೆ ಕಡಿಮೆ ಬಡ್ಡಿ ದರದಲ್ಲಿ ಸಾಲ ಸೌಲಭ್ಯ ಒದಗಿಸುವ ಬಗ್ಗೆ ಹಾಗೂ ಹೆಚ್ಚಿನ ಪ್ರಯೋಜನ ಪಡೆದುಕೊಳ್ಳಬೇಕು ಎಂದರು.

ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರಾದ ಉಮೇಶ್ ವಿ ರವರು ಖಂಒಕ ಯೋಜನೆಯಡಿಯಲ್ಲಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ Incubation Centre ತೆರೆಯುವುದರಿಮದ Startup ಯೋಜನೆಗಳು Eco System ಮತ್ತು ಹೊಸ ಬಗೆಯ ಉದ್ದಿಮೆಗಳ ಉತ್ತೇಜನಕ್ಕಾಗಿ ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರದ ಯೋಜನೆಗಳನ್ನು ವಿವರಿಸಿದರು.

ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲರಾದ ಗಿರೀಶ್ ಡಿ.ಪಿ ರವರು ಮಾತನಾಡಿ ಇಂಜಿನಿಯರಿಂಗ್ ವಿದ್ಯಾರ್ಥಿಗಳು ತಮ್ಮ ಕಾರ್ಯಕ್ಷಮತೆಯನ್ನು ಹೆಚ್ಚಿಸಿಕೊಳ್ಳುತ್ತ ಇಂದಿನ ವೇಗಗತಿಯಲ್ಲಿ ನಡೆಯುತ್ತಿರುವ ಕ್ರಾಂತಿಕಾರಕ ಬದಲಾವಣೆಯಾಗುತ್ತಿರುವ ಜಗತ್ತಿನಲ್ಲಿ ತಾವು ಸಮನಾಗಿ ಹೆಜ್ಜೆ ಹಾಕಬೇಕೆಂದು ತಿಳಿಸಿದರು.

ಈ ಕಾರ್ಯಗಾರದಲ್ಲಿ ಜಿಲ್ಲಾ ಕೈಗಾರಿಕಾ ಸಂಘದ ಅಧ್ಯಕ್ಷರಾದ ಶಿವರಾಮ್, ಕೈಗಾರಿಕಾ ಮತ್ತು ವಾಣಿಜ್ಯೋದ್ಯಮ ಸಂಸ್ಥೆ ಅಧ್ಯಕ್ಷರಾದ ಧನ್ ಪಾಲ್, ಲಘು ಉದ್ಯೋಗ ಭಾರತಿ ನಿರ್ದೇಶಕರಾದ ಮದನ್ ಕುಮಾರ್, ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನ ಪ್ರಾಧ್ಯಾಪಕರು ಮತ್ತು ಮುಖ್ಯಸ್ಥರಾದ ಡಾ॥ ಟಿ.ಜಿ ಬಸವರಾಜು, ಜಿಲ್ಲಾ ಕೈಗಾರಿಕಾ ಕೇಂದ್ರದ ಸಹಾಯಕ ನಿರ್ದೇಶಕರಾದ ಮೋಹನ್ ಕುಮಾರ್ ಬಿ ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಮಕ್ಕಳ ದಿನಾಚರಣೆ ವಿವಿಧ ಸ್ಪರ್ಧೆಗಳ ಆಯೋಜನೆ

**ಹಾಸನ** : ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಉಪ ನಿರ್ದೇಶಕರ ಕಚೇರಿ, ಹಾಸನ ಇಲ್ಲಿ ಜಿಲ್ಲಾ ಬಾಲಭವನ ಯೋಜನೆಯಡಿ 9 ರಿಂದ 16 ವರ್ಷದೊಳಗಿನ ಮಕ್ಕಳಿಗೆ ನ.12 ರಂದು ಬೆ.10 ಗಂಟೆಗೆ ಹಾಸನಾಂಬ ಕಲಾಕ್ಷೇತ್ರದಲ್ಲಿ 2025–26ನೇ ಸಾಲಿನ ಮಕ್ಕಳ ದಿನಾಚರಣೆ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು, ಈ ಸಂಬಂಧ ಸೃಜನಾತ್ಮಕ ಕಲೆ (ಚಿತ್ರಕಲೆ, ಕರಕುಶಲ, ಜೇಡಿಮಣ್ಣಿನ ಕಲೆ), ಸೃಜನಾತ್ಮಕ ಬರವಣಿಗೆ (ಕಥೆ, ಕವನ, ಪ್ರಬಂಧ ಬರೆಯುವುದು), ಸೃಜನಾತ್ಮಕ ಪ್ರದರ್ಶನ ಕಲೆ (ಶಾಸ್ತ್ರೀಯ ನೃತ್ಯ, ಜಾನಪದ ನೃತ್ಯ, ಕರ್ನಾಟಕ ಶಾಸ್ತ್ರೀಯ ಸಂಗೀತ, ಹಿಂದೂಸ್ತಾನಿ ಸಂಗೀತ, ಸುಗಮ ಸಂಗೀತ, ಯಕ್ಷಗಾನ, ಯಕ್ಷಿಣಿ ಪ್ರದರ್ಶನ, ಏಕಪಾತ್ರಾಭಿನಯ, ಯೋಗನೃತ್ಯ, ಮ್ಯಾಜಿಕ್ ಇತ್ಯಾದಿ) ವಿಜ್ಞಾನದಲ್ಲಿ ನೂತನ ಆವಿಷ್ಕಾರ (ವಿಜ್ಞಾನಕ್ಕೆ ಸಂಬಂಧಪಟ್ಟಂತೆ ಒಂದು ವಿಷಯದ ಬಗ್ಗೆ ಮಾದರಿ ಪ್ರದರ್ಶನ ಮತ್ತು ವಿವರಣೆ) ಆಸಕ್ತಿಯುಳ್ಳ ಮಕ್ಕಳು ಒಂದು ಮಗು ಒಂದೇ ಸ್ಪರ್ಧೆಯಲ್ಲಿ ಭಾಗವಹಿಸಲು ಮಾತ್ರ ಅವಕಾಶವಿರುತ್ತದೆ.

ಉಪ ನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೆ.ಆರ್ ಪುರಂ. 9ನೇ ಕ್ರಾಸ್, ಹಾಸನ ಇಲ್ಲಿ ನ.10 ರಂದು ಸಂಜೆ 5.30 ರೊಳಗಾಗಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳುವುದು ಹಾಗೂ ಜಿಲ್ಲಾ ಮಟ್ಟದಲ್ಲಿ ಉಪ ನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೆ.ಆರ್ ಪುರಂ. 9ನೇ ಕ್ರಾಸ್, ಹಾಸನ ಇಲ್ಲಿ ನ.10 ರಂದು ಸಂಜೆ 5.30 ರೊಳಗಾಗಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳುವುದು ಹಾಗೂ ಜಿಲ್ಲಾ ಮಟ್ಟದಲ್ಲಿ ವಿಜೇತರಾದ ಮಕ್ಕಳನ್ನು ಬೆಂಗಳೂರಿನಲ್ಲಿ ನಡೆಯುವ ರಾಜ್ಯ ಮಟ್ಟದ ಸ್ಪರ್ಧೆಗೆ ನಿಗಧಿಪಡಿಸಿದ ದಿನಾಂಕದಂದು ಕರೆದುಕೊಂಡು ಹೋಗಲು ಅವಕಾಶವಿರುತ್ತದೆ. ಹೆಚ್ಚಿನ ವಿವರಗಳಿಗೆ ಕಚೇರಿ ದೂರವಾಣಿ ಸಂಖ್ಯೆ 08172–267218, ಬಾಲಭವನ ಕಾರ್ಯಕ್ರಮ ಸಂಯೋಜಕರು 8197132944 ಹಾಗೂ ಕಚೇರಿ ಸಹಾಯಕರು 8495839556 ರನ್ನು ಸಂಪರ್ಕಿಸಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.

ಸೂಚನೆ: ನಿಗದಿತ ದಿನಾಂಕದೊಳಗೆ ನೋಂದಾಯಿಸಿಕೊಳ್ಳದಿದ್ದಲ್ಲಿ ಸ್ಪರ್ಧೆಗೆ ಭಾಗವಹಿಸಲು ಅವಕಾಶವಿರುವುದಿಲ್ಲ.

# ವಿಕಲಚೇತನ ವಿದ್ಯಾರ್ಥಿಗಳು ಇ–ಸ್ಕಾಲರ್‌ಶಿಪ್‌ಗೆ ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

**ಹಾಸನ:** ಹಾಸನ ಜಿಲ್ಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ವಿಕಲಚೇತನ ವಿದ್ಯಾರ್ಥಿಗಳು ಕೇಂದ್ರ ಸರ್ಕಾರದ ನ್ಯಾಯ ಮತ್ತು ಸಬಲೀಕರಣ ಇಲಾಖೆಯಿಂದ 2025–26 ಸಾಲಿನಲ್ಲಿ ನ್ಯಾಷನಲ್ ಇ–ಸ್ಕಾಲರ್‌ಶಿಪ್ ಪಡೆಯಲು ವಿಕಲಚೇತನ ವಿದ್ಯಾರ್ಥಿಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅವಧಿ ವಿಸ್ತರಿಸಲಾಗಿದೆ.

ಪ್ರಿ–ಮೆಟ್ರಿಕ್ ಮತ್ತು ಪೋಸ್ಟ್‌ಮೆಟ್ರಿಕ್ ನವೆಂಬರ್–15ರೊಳಗಾಗಿ ಆನ್‌ಲೈನ್ ಅರ್ಜಿ ಸಲ್ಲಿಸಬಹುದು. ಮೆಟ್ರಿಕ್ ನಂತರದಲ್ಲಿ ವ್ಯಾಸಂಗದಲ್ಲಿನ ವಿದ್ಯಾರ್ಥಿಗಳಿಗೆ ನವೆಂಬರ್–15ರವರೆಗೆ ಅವಧಿ ವಿಸ್ತರಣೆ ಮಾಡಲಾಗಿದೆ. 2025–26ನೇ ಸಾಲಿನಲ್ಲಿ ನ್ಯಾಷನಲ್ ಇ–ಸ್ಕಾಲರ್‌ಶಿಪ್ ಪೋರ್ಟಲ್‌ನಲ್ಲಿ

ವಿಕಲಚೇತನರ ವಿದ್ಯಾರ್ಥಿ ವೇತನ ಯೋಜನೆಯಡಿ ವಿಕಲಚೇತನ ವಿದ್ಯಾರ್ಥಿಗಳಿಗೆವಿಕಲಚೇತನರ ವಿದ್ಯಾರ್ಥಿ ವೇತನ ಯೋಜನೆಯಡಿ ವಿಕಲಚೇತನ ವಿದ್ಯಾರ್ಥಿಗಳಿಗೆ ತರಗತಿಗನುಗುಣವಾಗಿ ವಿದ್ಯಾರ್ಥಿ ವೇತನ ಮಂಜೂರು ಮಾಡುವ ಸಂಬಂಧ, ಶೇ.40ಕ್ಕಿಂತ ಹೆಚ್ಚು ಅಂಕಗಳಿಸಿ ಉತ್ತೀರ್ಣರಾಗಿರುವ ವಿಕಲಚೇತನ ವಿದ್ಯಾರ್ಥಿ/ನಿಯರುಗಳಿಂದ ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಆಹ್ವಾನಿಸಲಾಗಿದೆ.

ವೆಬ್‌ಸೈಟ್ ವಿಳಾಸ:https://scholarships.gov.in ಹಾಗೂ ಮೂಲಕ ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಇತರೆ ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ:08172–264546/295546 ನ್ನು ಸಂಪರ್ಕಿಸಲು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

# ತನಿಖೆಗೆ ಸಹಕರಿಸಿ, ಜೋಶಿಗೆ ನಿರ್ದೇಶನ

## ಸಾಲುಸಾಲು ಸುಳ್ಳು: ಹೈಕೋರ್ಟ್‌ಗೆ ಕೋರ್ಟ್ ಅಡ್ವಕೇಟ್ ಜನರಲ್ ಹೇಳಿಕೆ

**ಬೆಂಗಳೂರು** : ಕನ್ನಡ ಸಾಹಿತ್ಯ ಪರಿಷತ್ತಿನ ನಿಕಟಪೂರ್ವ ಅಧ್ಯಕ್ಷ ಡಾ. ಮಹೇಶ್ ಜೋಶಿ ಹೇಳುತ್ತಿರು ವುದಲ್ಲೆವೂ ಅಕ್ಷರಶಃ ಸುಳ್ಳು ಅವರ ನಡವಳಿಕೆ ಆಘಾತಕಾರಿಯಾಗಿದೆ. ಒಂದಲ್ಲ, ಎರಡಲ್ಲ ಸಾಲು–ಸಾಲು ಸುಳ್ಳುಗಳನ್ನು ಹೇಳಿ, ಅದನ್ನೇ ಸತ್ಯವೆಂದು ನ್ಯಾಯಾಲಯದ ಮುಂದೆ ಪ್ರತಿಪಾದಿ ಸಿದ್ದಾರೆ ಎಂದು ಅಡ್ವಕೇಟ್ ಜನರಲ್ ಕೆ. ಶಶಿಕಿರಣ್ ಶೆಟ್ಟಿ ಹೈಕೋರ್ಟ್‌ಗೆ ತಿಳಿಸಿದ್ದಾರೆ.



ಕನ್ನಡ ಸಾಹಿತ್ಯ ಪರಿಷತ್‌ನ ಪದಾಧಿ ಕಾರಿಗಳ ಕಾರ್ಯವೈಖರಿ, ಅನುದಾನ ಮತ್ತು ಖರ್ಚು–ವೆಚ್ಚಗಳ ಕುರಿತು ವಿಚಾರಣೆ ನಡೆಸಲು ತನಿಖಾಧಿಕಾರಿ ನೇಮಿಸಿ 2025ರ ಜೂ.26 ಹಾಗೂ 30ರಂದು ಸಹಕಾರ ಸಂಘಗಳ ನೋಂದಣಾಧಿಕಾರಿ ಹೊರಡಿಸಿದ್ದ ಆದೇಶಕ್ಕೆ ತಡೆ ಕೋರಿ ಮಹೇಶ್ ಜೋಶಿ ಸಲ್ಲಿಸಿರುವ ಅರ್ಜಿಯ ಕುರಿತು ನ್ಯಾಯಮೂರ್ತಿ ಸೂರಜ್ ಗೋವಿಂದ ರಾಜ್ ಅವರಿದ್ದ ಏಕಸದಸ್ಯಪೀಠ ಗುರುವಾರ ವಿಚಾರಣೆ ನಡೆಸಿತು.

ಸರಕಾರದ ಪರ ವಾದ ಮಂಡಿಸಿದ ಅಡ್ವಕೇಟ್ ಜನರಲ್ ಕೆ. ಶಶಿಕಿರಣ್ ಶೆಟ್ಟಿ, "ತನಿಖಾಧಿಕಾರಿ ಮುಂದೆ ಹಾಜರಾಗಲು ನೋಟಿಸ್ ನೀಡಿದಾಗ ಕುಟುಂಬದಲ್ಲಿ ಸಾವು ಸಂಭವಿಸಿದೆ. ಪ್ರಯಾಣ ಮಾಡಬೇಕಾಗಿರು ವುದರಿಂದ 15 ದಿನ ಕಾಲಾವಕಾಶ ಬೇಕೆಂದು ಜೋಶಿ ಕೋರಿದ್ದರು. ಆದರೆ, ಅವರು ಎಲ್ಲೂ ಪ್ರಯಾಣ ಮಾಡಿಲ್ಲ. ವಿಚಾರಣೆ ಯಿಂದ ತಪ್ಪಿಸಿಕೊಳ್ಳಲು ರೈಲ್ವೆ ಟಿಕೆಟ್ ಬುಕ್ ಮಾಡಿ, ನಂತರ ಅದನ್ನು ರದ್ದು ಮಾಡಿಸಿದ್ದಾರೆ. ಟಿಕೆಟ್ ರದ್ದು ಮಾಡಿಸಿದ ವಿವರ ನೀಡದಂತೆ ರೈಲ್ವೆ ಅಧಿಕಾರಿಗಳಿಗೆ ಬೆದರಿಕೆ ಹಾಕಿದ್ದಾರೆ. ವಾರಾಣಸಿಯಿಂದ ಲಖನೌಗೆ ವಿಮಾನ ಪ್ರಯಾಣ ಮಾಡಿದ ಅವಧಿ ಗಮನಿಸಿದರೆ, ಮನುಷ್ಯರಿಂದ ಅದುಸಾಧ್ಯವೇ ಇಲ್ಲ" ಎಂದು ವಿವರಿಸಿದರು. ಅಲ್ಲದೇ, "ಪ್ರಯಾಣ ಮಾಡಬೇಕಾಗಿದೆ

ಎಂದು ಹೇಳಿದ್ದ ದಿನಗಳಲ್ಲಿ ಜೋಶಿ ಕಸಾಪ ಕಚೇರಿಗೆ ಬಂದು, ದೈನಂದಿನ ಜವಾಬ್ದಾರಿ ನಿರ್ವಹಿಸಿದ್ದಾರೆ," ಎಂದು ಅಡ್ವಕೇಟ್ ಜನರಲ್ ಹೇಳಿದರು. ನ್ಯಾಯಪೀಠ, ಅವರು ಕಚೇರಿಗೆ ಬಂದಿದ್ದು ಹೇಗೆ ಗೊತ್ತಾಯಿತು ಎಂದು ಕೇಳಿತು. ಅದಕ್ಕೆ ಎಜಿ, ಸಿಸಿಟಿವಿ ದೃಶ್ಯಾವಳಿಗಳಿಂದ ತಿಳಿದುಬಂದಿದೆ ಎಂದರು. ಕಸಾಪ ಅಧ್ಯಕ್ಷರ ಕಚೇರಿಯಲ್ಲಿ ಸಿಸಿಟಿವಿ ಕ್ಯಾಮೆರಾ ಇರುವ ಬಗ್ಗೆ

ನ್ಯಾಯಪೀಠ ಅಚ್ಚರಿ ವ್ಯಕ್ತಪಡಿಸಿತು.

ಅನವಶ್ಯಕವಾಗಿ ಸಿಸಿಟಿವಿ ಕ್ಯಾಮೆರಾ, ಹಣ ದುರ್ಬಳಕೆಯ ಹಾಕಿದ್ದು, ಮಾತುಗಳೂ ಕೇಳಿಬಂದಿವೆ. ಸಿಸಿಟಿವಿ ದೃಶ್ಯಾವಳಿ ಕೊಡದಂತೆ ಕಸಾಪ ಸಿಬ್ಬಂದಿಗೆ ಬೆದರಿಕೆ ಹಾಕಿದ್ದಾರೆ. ಕಾನೂನು ಮತ್ತು ನ್ಯಾಯಾಲಯವನ್ನು ಅವರು ದುರ್ಬಳಕೆ ಮಾಡಿಕೊಂಡಿದ್ದಾರೆ ದೂರಿದರು.

### ವೈಯುಕ್ತಿಕ ಟಾರ್ಗೆಟ್ ಮಾಡಿಲ್ಲ

ತನಿಖಾಧಿಕಾರಿ ನೇಮಕ ಕ್ರಮವನ್ನು ಸಮರ್ಥಿಸಿಕೊಂಡ ಅಡೊಕೇಟ್ ಜನರಲ್, ಈ ಪ್ರಕರಣದಲ್ಲಿ ಜೋಶಿಯವರನ್ನು ವೈಯುಕ್ತಿಕವಾಗಿ ಟಾರ್ಗೆಟ್ ಮಾಡಲಾಗಿಲ್ಲ. ತನಿಖೆ ನಡೆಯಲಿ, ನ್ಯಾಯಾಲಯವೇ ಕಾಲಮಿತಿ ನಿಗದಿಪಡಿಸಿ ಮೇಲ್ವಿಚಾರಣೆ ನಡೆಸಲಿ. ಅರ್ಜಿದಾರರ ನಡವಳಿಕೆ ಅನುಮಾನಾಸ್ಪದ ಹಾಗೂ ಆಘಾತಕಾರಿಯಾಗಿದೆ ಎಂದರು. ಈ ವೇಳೆ ಜೋಶಿಯವರ ನಡವಳಿಕೆ ಬಗ್ಗೆ ಮೌಖಿಕವಾಗಿ ಅಸಮಾಧಾನ ವ್ಯಕ್ತಪಡಿಸಿದ ನ್ಯಾಯಪೀಠ, "ಇದು ಕಾನೂನು ಮತ್ತು ನ್ಯಾಯಾಲಯದ ದುರ್ಬಳಕೆ ಆಗಿದೆ. ಆದ್ದರಿಂದ 30 ದಿನಗಳಲ್ಲಿ ತನಿಖೆ ಮುಗಿಸಬೇಕು. ಅಲ್ಲಿವರೆಗೆ ಯಾವುದೇ ಸಭೆ ನಡೆಯುವಂತಿಲ್ಲ. ತನಿಖೆಗೆ ಜೋಶಿ ಸಂಪೂರ್ಣವಾಗಿ ಸಹಕರಿಸಬೇಕು. ಈ ವಿಚಾರದಲ್ಲಿ ಯಾವುದೇ ವಿನಾಯಿತಿ ಇಲ್ಲ. ಜೋಶಿ ತನಿಖೆಗೆ ಸಹಕರಿಸದಿದ್ದರೆ ಸರಕಾರಿ ವಕೀಲರು ನ್ಯಾಯಾಲಯಕ್ಕೆ ತಿಳಿಸಬೇಕು" ಎಂದು ಸೂಚಿಸಿ ವಿಚಾರಣೆಯನ್ನು ಡಿ.8ಕ್ಕೆ ಮುಂದೂಡಿತು.

# ಭತ್ತದ ಬೆಳೆಗೆ 'ಸೊಳೆರೋಗ'ದ ಕಾಟ

## ರೈತರಿಗೆ ರೋಗ ನಿಯಂತ್ರಣದ್ದೇ ಚಿಂತೆ; ಇಳುವರಿ ಕಡಿಮೆಯಾಗುವ ಆತಂಕ

**ಮಲೇಬೆನ್ನೂರು:** ಭದ್ರಾ ಅಚ್ಚುಕಟ್ಟು ವ್ಯಾಪ್ತಿಯಲ್ಲಿ ಭತ್ತದ ಬೆಳೆಯು ಕಾಳು ಕಟ್ಟುವ ಹಂತದಲ್ಲಿದ್ದು, ಸೊಳ್ಳೆ ರೋಗಬಾಧೆ (ಕಂದು ಜಿಗಿಹುಳು) ಅಲ್ಲಲ್ಲಿ ಕಾಣಿಸಿಕೊಳ್ಳುತ್ತಿದೆ ಎಂದು ರೈತರು ಆತಂಕ ವ್ಯಕ್ತಪಡಿಸಿದರು.



'ಪ್ರತಿ ಬಾರಿ ಭತ್ತದ ಒಕ್ಕಲು ಆರಂಭಕ್ಕೂ ಮುನ್ನ ಸೊಳ್ಳೆ ರೋಗ ಕಾಣಿಸಿಕೊಳ್ಳುವುದು ವಾಡಿಕೆ. ಪ್ರಸಕ್ತ ಮಳೆಗಾಲದ ಅಂತ್ಯದಲ್ಲಿ ಮಳೆ ಸುರಿದ ಕಾರಣ ಕಡಿಮೆ ಆಗಿತ್ತು. ಈಗ ಮಳೆ ನಿಂತಿದ್ದು, ಬಿಸಿಲು ಹೆಚ್ಚಾಗುತ್ತಿದೆ. ಮಂಜಿನೊಂದಿಗೆ ಮಾಗಿ ಚಳಿ ಕೂಡ ಬೀಳುತ್ತಿದೆ. ಮುಂಚಿತವಾಗಿ ನಾಟಿ ಮಾಡಿದ ಭತ್ತ ಕಾಳು ಕಟ್ಟುವ ಹಂತದಲ್ಲಿದೆ. ದೇವರಬೆಳಕೆರೆ ಅಚ್ಚುಕಟ್ಟಿನಲ್ಲಿ ಭತ್ತ ಒಣಗಿದ್ದು, ಕಟಾವು ಭರದಿಂದ ಆರಂಭವಾಗಿದೆ. ಕೆಲವು ಕಡೆ ಮಾತ್ರ ಸೊಳ್ಳೆರೋಗ ಕಾಣಿ–ಸಿಕೊಳ್ಳುತ್ತಿದೆ' ಎಂದು ರೈತ ಹೊಸಳ್ಳಿ ಕರಿಬಸಪ್ಪ ಮಾಹಿತಿ ನೀಡಿದರು.

ರೋಗ ನಿಯಂತ್ರಣಕ್ಕೆ ಮುಂಜಾಗ್ರತಾ ಕ್ರಮವಾಗಿ ಔಷಧೋಪಚಾರ ಅನಿವಾರ್ಯವಾಗಿದೆ' ಎಂದು ಕುಂಬಳೂರು ಗ್ರಾಮದ ರೈತ ಹನುಮಂತು ಬೇಸರ ವ್ಯಕ್ತಪಡಿಸಿದರು.

'ಸೊಳ್ಳೆರೋಗದಿಂದ ಇಳುವರಿ ಕುಸಿತ ನಿಶ್ಚಿತ. ಗದ್ದೆ ಒಣಗಿಸಿನೀರು ಕೊಡಬೇಕು. ಕಡಿಮೆನಿಟ್ಟೂರು ಗ್ರಾಮದ ಹೊರವಲಯದ ಭತ್ತದ ಗದ್ದೆಯಲ್ಲಿ ಸೊಳೆರೋಗ ನಿಯಂತ್ರಿಸಲು ಕ್ರಿಮಿನಾಶಕ ಸಿಂಪಡಣೆ ಮಾಡುತ್ತಿರುವ ಕೃಷಿ ಕಾರ್ಮಿಕರುನೀರು ಬಳಸಬೇಕು, ಕಡಿಮೆ ಪ್ರಮಾಣದ ಔಷಧೋಪಚಾರ ಮಾಡಬೇಕು'

ಎನ್ನುತ್ತಾರೆ ಅನುಭವಿ ರೈತ ನಂದಿತಾವರೆ ಗ್ರಾಮದ ಪೂಜಾರ ಗದ್ದಿಗೆಪ್ಪ.

'ಬೆಳೆ ಪರಿವರ್ತನೆಯಿಂದ ರೋಗ ನಿಯಂತ್ರಿಸಲು ಸಾಧ್ಯ' ಎನ್ನುತ್ತಾರೆ ಕುಂಬಳೂರಿನ ಶರಣ ಮುದ್ದಣ ಸಾವಯವ ಕೃಷಿಕರ ಬಳಗದ ಸಂಚಾಲಕ ಎನ್. ಆಂಜನೇಯ.

ಬೆಳೆ ಉಳಿಸಿಕೊಳ್ಳಲು ಕೃಷಿಕರು ಹಲವಾರು ಬಗೆಯ ಕ್ರಿಮಿನಾಶಕ ಬಳಸು–ತ್ತಿದ್ದಾರೆ. ಯಾಂತ್ರೀಕೃತ ಸಿಂಪಡಣೆ ದೃಶ್ಯ ಸಾಮಾನ್ಯವಾಗಿದೆ. ಔಷಧಿ ಸಿಂಪಡಣೆ ಮಾಡುವ ಕೃಷಿ ಕಾರ್ಮಿಕರಿಗೂ, ಯಂತ್ರಗಳಿಗೂ ಬೇಡಿಕೆ ಹೆಚ್ಚಾಗಿದೆ.

### ಸೊಳ್ಳೆರೋಗ ಎಂದರೇನು?

ನಾಟಿ ಮಾಡಿದ ಭತ್ತ ಕಾಳು ಕಟ್ಟುವ ಹಂತದಲ್ಲಿ ಹಸಿರು ಇರುವ ಬೆಳೆ ಕಂದು ಬಣ್ಣಕ್ಕೆ ತಿರುಗುವುದು ಇದನ್ನೇ ರೈತರು ಆಡುಭಾಷೆಯಲ್ಲಿ 'ಸೊಳ್ಳೆರೋಗ' ಎಂದು ಕರೆಯುವವರು. ಇದಕ್ಕೆ ಬಿಪಿಎಚ್ (ಭತ್ತಕ್ಕೆ ಕಂದು ಜಿಗಿಹುಳು) ಎಂದು ಕರೆಯುವವರು. ಈ ರೋಗ ಬಂದರೆ ತೆನೆ ಚನ್ನಾಗಿ ಕಂಡರೂ ಕಾಳುಗಟ್ಟುವುದಿಲ್ಲ. ಜೊಳ್ಳೆಜಾಸ್ತಿ ಆಗುವುದು.

**ಸಂಪೂರ್ಣ ರೋಗ ನಿಯಂತ್ರಣ ಕಷ್ಟ. ಬೆಳೆ ಪರಿವರ್ತನೆ, ಆಳ ಉಳುಮೆ, ಸಸಿ ತಯಾರಿ ವೇಳೆ ಬೀಜೋಪಚಾರ, ಕಡಿಮೆ ನೀರು, ಗೊಬ್ಬರ ಬಳಕೆ ಮಾಡುವುದರಿಂದ ರೋಗ ನಿಯಂತ್ರಿಸಬಹುದು.**

**ಹೇಮಂತ್, ಪ್ರಭಾರ ಸಹಾಯಕ ಕೃಷಿ ಅಧಿಕಾರಿ, ಮಲೇಬೆನ್ನೂರು**

# ಸೈನಿಕರ ಮಕ್ಕಳಿಗೆ ಶಿಷ್ಯವೇತನಕ್ಕೆ ಅರ್ಜಿ ಆಹ್ವಾನ


**ಹಾಸನ :** ವೃತ್ತಿಪರ ಪದವಿಗಳಾದ BE, BE (Lateral entry), B Tec, BDS, MBBS, BBA, BCA, B Sc(AG), B Pharma, MBA, MCA, B Ed, LLB ಇತ್ಯಾದಿ ಕೋರ್ಸುಗಳಲ್ಲಿ 2025–26ನೇ ಸಾಲಿಗಾಗಿ ಪ್ರಸಕ್ತ ವರ್ಷ ಪ್ರವೇಶ ಪಡೆದು ವ್ಯಾಸಂಗ ಮಾಡುತ್ತಿರುವ ಮಾಜಿ ಸೈನಿಕರ ಮಕ್ಕಳಿಗೆ ಪ್ರಧಾನ ಮಂತ್ರಿಗಳ ಶಿಷ್ಯವೇತನಕ್ಕಾಗಿ ಅರ್ಜಿಗಳನ್ನು ವೆಬ್ ಸೈಟ್ https://ksb.gov.in/index.htm ರಲ್ಲಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದ್ದು ಅರ್ಹ ಅಭ್ಯರ್ಥಿಗಳು ಅರ್ಜಿಸಲ್ಲಿಸಿ ದಾಖಲಾತಿಗಳ ನೈಜತೆಯನ್ನು ಉಪ ನಿರ್ದೇಶಕರ ಕಾರ್ಯಾಲಯ, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಶಂಕರಿಪುರಂ, ಹಾಸನ ಇವರಲ್ಲಿ ಪರಿಶೀಲನೆಗಾಗಿ ಸಲ್ಲಿಸುವಂತೆ ಸೂಚಿಸಲಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಡಿ.31 ಆಗಿರುತ್ತದೆ ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.

# ವಿದ್ಯುತ್ ನಿಲುಗಡೆ

**ಚಿಕ್ಕಮಗಳೂರು:** ನಗರ ಉಪ ವಿಭಾಗದ ಘಟಕ–3 ವ್ಯಾಪ್ತಿಯಲ್ಲಿ ಬರುವ 66/11 ಕೆ.ವಿ. ವಿದ್ಯುತ್ ವಿತರಣಾ ಕೇಂದ್ರದಿಂದ ಹೊರಹೊಮ್ಮುವ ಎಫ್–14 ಕೆಂಪನಹಳ್ಳಿ, ತ್ರಿವಿಕ್, ಹಿರೆಕೊಳಲೆ, ಪೀಠಾ ಫೀಡರ್ ಮಾರ್ಗಗಳಲ್ಲಿ ಸ್ವಯಂ ಆರ್ಥಿಕ ಯೋಜನೆಯಡಿಯಲ್ಲಿ ಹಾಲೇನಹಳ್ಳಿ ಗ್ರಾಮದಿಂದ ಅಲ್ಲಂಪುರ ರಸ್ತೆಯಲ್ಲಿ ವಿದ್ಯುತ್ ಕಂಬವನ್ನು ಸ್ಥಳಾಂತರಿಸುವ ಕಾಮಗಾರಿಯು ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯ ನಿರ್ವಾಹಕ ಇಂಜಿನಿಯರ್‌ರವರ ಕೋರಿಕೆ ಮೇರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ಈ ಫೀಡರ್‌ಗಳ ಪ್ರದೇಶಗಳಾದ ರತ್ನಗಿರಿ ಬಡಾವಣೆ, ಚಂದ್ರನಗರ. ಕೆಂಪನಹಳ್ಳಿ, ಬಾಳೇಹಳ್ಳಿ, ಕರ್ಕಿಪೇಟೆ, ರಾಮನಹಳ್ಳಿ, ಅಲ್ಲಂಪುರ, ಹಾಲೇನಹಳ್ಳಿ, ತ್ರಿವಿಕ್, ಪೀಠಾ ಫೀಡರ್‌ನ ಮತ್ತು ಹಿರೆಕೊಳಲೆ ಫೀಡರ್‌ನ ಸುತ್ತ ಮುತ್ತಲಿನ ಪ್ರದೇಶಗಳಿಗೆ ನವೆಂಬರ್ 10 ಮತ್ತು 13 ರಂದು ಬೆಳಿಗ್ಗೆ 10 ರಿಂದ ಸಂಜೆ 6 ಗಂಟೆಯವರೆಗೆ ವಿದ್ಯುತ್ ಸರಬರಾಜು ನಿಲುಗಡೆಯಾಗಲಿದೆ.

# ಶಾಲೆ, ಆಸ್ಪತ್ರೆ, ಬಸ್ ನಿಲ್ದಾಣ ಬಳಿಯ ಬೀದಿ ನಾಯಿಗಳ ಸ್ಥಳಾಂತರಕ್ಕೆ ಸುಪ್ರೀಂ ಆದೇಶ

**ನವದೆಹಲಿ:** ಶಿಕ್ಷಣ ಸಂಸ್ಥೆಗಳು, ಬಸ್ , ರೈಲು ನಿಲ್ದಾಣಗಳು ಮತ್ತು ಕ್ರೀಡಾ ಸೌಲಭ್ಯಗಳ ಬಳಿ ಇರುವ ಬೀದಿ ನಾಯಿಗಳನ್ನು ಸಂಪೂರ್ಣವಾಗಿ ತೆಗೆದುಹಾಕುವಂತೆ ಸುಪ್ರೀಂ ಕೋರ್ಟ್ ಮಹತ್ವದ ಆದೇಶ ನೀಡಿದೆ.



ಪ್ರಾಣಿಗಳ ಜನನ ನಿಯಂತ್ರಣ ನಿಯಮಗಳಿಗೆ ಅನುಸಾರವಾಗಿ ಲಸಿಕೆ ಮತ್ತು ಸಂತಾನಹರಣ ಶಸ್ತ್ರಚಿಕಿತ್ಸೆಯ ನಂತರ ಅವುಗಳನ್ನು ಆಶ್ರಯ ತಾಣಗಳಿಗೆ ಸ್ಥಳಾಂತರಿಸುವಂತೆ ನಿರ್ದೇಶ ನೀಡಿದೆ. ಸುಪ್ರೀಂಕೋರ್ಟ್ ನ್ಯಾಯಮೂರ್ತಿಗಳಾದ ವಿಕ್ರಮ್ ನಾಥ್, ಸಂದೀಪ್ ಮೆಹ್ತಾ ಮತ್ತು ಎನ್.ವಿ. ಅಂಜಾರಿಯಾ ಅವರಿದ್ದ ವಿಭಾಗೀಯ ಪೀಠವು,ಪ್ರಾಣಿಗಳನ್ನು ಸೆರೆಹಿಡಿದ ಸ್ಥಳಗಳಿಗೆ ಹಿಂತಿರುಗಿಸಬಾರದು.ಇದಕ್ಕೆ ಅವಕಾಶ ನೀಡುವುದರಿಂದ ಅಂತಹ ಸಂಸ್ಥೆಗಳನ್ನು ಬೀದಿ ನಾಯಿಗಳ ಉಪಟಳದಿಂದ ಮುಕ್ತಗೊಳಿಸುವ ಉದ್ದೇಶವೇ ವಿಫಲವಾಗುತ್ತದೆ ಎಂದು ಆದೇಶಿಸಿತು.

ಕಳೆದ ಜುಲೈ 28 ರಂದು ದಾಖಲಾಗಿದ್ದ ಸ್ವಯಂಪ್ರೇರಿತ ದೂರಿಗೆ ಸಂಭಂಧಿಸಿದಂತೆ ಬೀದಿ ನಾಯಿಗಳ ಹಾವಳಿ ಹೆಚ್ಚುತ್ತಿದ್ದು, ಇದರಲ್ಲಿ ಮಕ್ಕಳ ಕಚ್ಚುವಿಕೆ ಮತ್ತು ರೇಬೀಸ್ ಪ್ರಕರಣಗಳು ಮತ್ತು ಸಾವುಗಳ ಹೆಚ್ಚಳವೂ ಸೇರಿದೆ ಎಂದು ಮಾಧ್ಯಮ ವರದಿಯೊಂದು ತಿಳಿಸಿತ್ತು. ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳು ತಮ್ಮ ವ್ಯಾಪ್ತಿಯಲ್ಲಿರುವ ಸಾರ್ವಜನಿಕ, ಖಾಸಗಿ ಶಿಕ್ಷಣ ಸಂಸ್ಥೆಗಳು, ಕ್ರೀಡಾ ಸಂಕೀರ್ಣಗಳನ್ನು ಗುರುತಿಸುವಂತೆ ಸುಪ್ರೀಂ ಕೋರ್ಟ್ ಸೂಚಿಸಿದೆ, ಆದರೆ ಎಲ್ಲಾ ಶಾಲೆಗಳು, ಕಾಲೇಜುಗಳು, ಆಸ್ಪತ್ರೆಗಳು, ಕ್ರೀಡಾ ಸೌಲಭ್ಯಗಳು ಮತ್ತು ಸರ್ಕಾರಿ ಸಂಸ್ಥೆಗಳಿಗೆ ಬೀದಿ ನಾಯಿಗಳು ಪ್ರವೇಶಿಸುವುದನ್ನು ತಡೆಯಲು ಸರಿಯಾಗಿ ಬೇಲಿ ಹಾಕಲಾಗಿದೆಯೆ ಎಂದು ಖಚಿತಪಡಿಸಿಕೊಳ್ಳಲು ಜಿಲ್ಲಾ ಮ್ಯಾಜಿಸ್ಟ್ರೇಗಳಿಗೆ (ಡಿಎಂ) ಸೂಚಿಸಲಾಗಿದೆ.ಜೊತೆಗೆ ಈ ಆವರಣದಲ್ಲಿ ಬೀದಿ ನಾಯಿಗಳು ಓಡಾಡುತ್ತಿಲ್ಲ ಎಂದು ಖಚಿತಪಡಿಸಿಕೊಳ್ಳಲು ನಿಯಮಿತವಾಗಿ ತಪಾಸಣೆ ನಡೆಸಬೇಕು ಎಂದು ನ್ಯಾಯಾಲಯ ಹೇಳಿದೆ.ಬಸ್ ನಿಲ್ದಾಣಗಳು ಸೇರಿದಂತೆ ಅಂತಹ ಸ್ಥಳಗಳಲ್ಲಿ ಕಂಡುಬರುವ ಯಾವುದೇ ಬೀದಿ ನಾಯಿಗಳನ್ನು ತೆಗೆದುಹಾಕಿ ಆಶ್ರಯ ತಾಣಗಳಿಗೆ ಸ್ಥಳಾಂತರಿಸಬೇಕು; ಅವುಗಳನ್ನು ಸೆರೆಹಿಡಿದ ಅದೇ ಸ್ಥಳಕ್ಕೆ ಹಿಂತಿರುಗಿಸಬಾರದು ಎಂದು ಅದು ಹೇಳಿದೆ. ಕಳೆದ ತಿಂಗಳು, ಇದೇ ಮೂವರು ನ್ಯಾಯಾಧೀಶರ ಪೀಠವು ಪಶ್ಚಿಮ ಬಂಗಾಳ ಮತ್ತು ತೆಲಂಗಾಣ ಹೊರತುಪಡಿಸಿ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳನ್ನು ಬೀದಿ ನಾಯಿಗಳ ಹಾವಳಿಯ ಬಗ್ಗೆ ಕ್ರಮ ಕೈಗೊಳ್ಳದಿದ್ದಕ್ಕಾಗಿ ತೀವ್ರವಾಗಿ ತರಾಟೆಗೆ ತೆಗೆದುಕೊಂಡಿತ್ತು. ಪ್ರಾಣಿಗಳ ಜನನ ನಿಯಂತ್ರಣ (ಎಬಿಸಿ) ನಿಯಮಗಳನ್ನು ಜಾರಿಗೆ ತರಲು ತೆಗೆದುಕೊಂಡ ಕ್ರಮಗಳ ಕುರಿತು ಅನುಸರಣಾ ಅಫಿಡವಿಗಳನ್ನು ಸಲ್ಲಿಸಲು ವಿಫಲವಾದ ಮುಖ್ಯ ಕಾರ್ಯದರ್ಶಿಗಳಿಗೆ ಸಮನ್ಸ್ ಜಾರಿ ಮಾಡಿತುನಿಯಮಗಳನ್ನು ಪಾಲಿಸದಿರುವ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಸುಪ್ರೀಂ ಕೋರ್ಟ್, ಬೀದಿ ನಾಯಿಗಳ ದಾಳಿಯ ಘಟನೆಗಳು "ವಿದೇಶಿ ರಾಷ್ಟಗಳ ಮುಂದೆ ದೇಶವನ್ನು ಕೆಟ್ಟದಾಗಿ ತೋರಿಸುತ್ತಿವೆ" ಎಂದು ಪರೋಕ್ಷವಾಗಿ ಅಸಮಾಧಾನ ಹೊರಹಾಕಿತ್ತು.

# ರಾಜಶೇಖರ್‌ಗೆ ಪತ್ರ ಬರಹಗಾರರ ಸಂಘದಿಂದ ಸನ್ಮಾನ



**ದಾವಣಗೆರೆ:** ಜಿಲ್ಲಾ ಪತ್ರ ಬರಹಗಾರರ ಸಂಘದಿಂದ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ವೃತ್ತಿ ನಿರತ ಪತ್ರ ಬರಹಗಾರರು, ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಬಿ ವಿ ರಾಜಶೇಖರ್ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಸಮಾರಂಭದಲ್ಲಿ ಸಂಘದ ಅಧ್ಯಕ್ಷ ಡಿ.ಕೆ ಸಂಗಮೇಶ್ ಎಲಿಗಾರ್, ಉಪಾಧ್ಯಕ್ಷರಾದ ಡಿ.ಕೆ ಗೋಪಾಲ್ ರಾವ್, ಡಿ.ಆರ್ ಗಿರಿರಾಜ್, ರಾಜ್ಯ ಕಾರ್ಯದರ್ಶಿ ವಿ.ಇ. ಧರ್ಮರಾಜ್ ಏಕಬೋಟೆ, ಜಿಲ್ಲಾ ಕಾರ್ಯದರ್ಶಿ ಬಿ.ವಿ ಶಿವಾನಂದ್, ಈ ಕೃಷ್ಣಮೂರ್ತಿ, ಮಧುಸೂದನ, ಕೆ. ಹನುಮಂತಪ್ಪ, ಖಜಾಂಚಿ ಎಸ್ ರಾಜಶೇಖರ್, ಜಿ ವೈ ಬಸವರಾಜ್, ಸಹ ಕಾರ್ಯದರ್ಶಿ ಎನ್ ಪಿ ಕಲ್ಲೇಶ್, ರಾಜ್ಯ ಸಂಘದ ಕರಿಬಸಪ್ಪ ಬಳ್ಳಿ, ಸಿದ್ದಯ್ಯ, ಬಿ ಶಿವರಾಜ್, ರಾಶಿದ್ ಹುಸೇನ್, ವಾಸಿಂ ಅಕ್ರಂ, ಯೋಗೀಶ್, ರಾಘವೇಂದ್ರ, ಸುಧಾಕರ್, ಶಿವಯೋಗಿ, ಬಾಯಿ ರಂಗಣ್ಣ, ರಮೇಶ್, ಈರಣ್ಣ ಮತ್ತು ಇತರರು ಉಪಸ್ಥಿತರಿದ್ದರು.

# ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭಿಮಾ ಯೋಜನೆ ಅನುಷ್ಠಾನ

**ಚಿಕ್ಕಮಗಳೂರು:** ಸರ್ಕಾರವು 2025–26ರ ಹಿಂಗಾರು ಹಂಗಾಮಿಗೆ ಸರ್ಕಾರದ ಆದೇಶದಂತೆ ಜಿಲ್ಲೆಯಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ (ವಿಮಾ) ಯೋಜನೆಯಡಿ ಆಯ್ದ ಬೆಳೆಗಳನ್ನು ಹೋಬಳಿ ಮಟ್ಟಕ್ಕೆ ಅಳವಡಿಸಿ ಅನುಷ್ಠಾನಗೊಳಿಸಲು ಮಂಜೂರಾತಿ ನೀಡಲಾಗಿದೆ.

ಚಿಕ್ಕಮಗಳೂರು ತಾಲೂಕಿನ ಅಂಬಳೆ ಹೋಬಳಿ ಮತ್ತು ಕಡೂರು ತಾಲ್ಲೂಕಿನ ಕಸಬಾ ಮತ್ತು ಬೀರೂರು ಹೋಬಳಿಗಳಲ್ಲಿ ಟೊಮ್ಯಾಟೊ ಬೆಳೆಯನ್ನು ಅಧಿಸೂಚಿಸಲಾಗಿದ್ದು, ಈ ಯೋಜನೆಯಡಿ ಬೆಳೆಗಳ ಬಿತ್ತನೆಯಿಂದ ಕಟಾವು ಹಂತದವರೆಗೆ ಸಂಭವಿಸುವ ಬೆಳೆ ನಷ್ಟಗಳಿಗೆ ಪರಿಹಾರ ಒದಗಿಸಲು ಅವಕಾಶ ಕಲ್ಪಿಸಲಾಗಿದೆ.

ಬೆಳೆ ಸಾಲ ಪಡೆದ ರೈತರು ಕಡ್ಡಾಯವಾಗಿ ವಿಮಾ ಯೋಜನೆಗೆ ಒಳಪಡುತ್ತಾರೆ. ಒಂದು ವೇಳೆ ಬೆಳೆ ಸಾಲ ಪಡೆದ ರೈತರಿಗೆ ವಿಮಾ ಯೋಜನೆಯಡಿ ಒಳಪಡಲು ಇಚ್ಚೆ ಇಲ್ಲದಿದ್ದಲ್ಲಿ, ಈ ಬೆಳೆಯ ವಿಮಾ ನೋಂದಣಿ ಕೊನೆಯ ದಿನಾಂಕಕ್ಕಿಂತ 7 ದಿನಗಳ ಮುಂಚಿತವಾಗಿ ರೈತರು ಸಂಬಂಧಿಸಿದ ಬ್ಯಾಂಕ್ ವ್ಯವಸ್ಥಾಪಕರಿಗೆ ವಿಮಾ ಯೋಜನೆಯಿಂದ ಕೈಬಿಡುವಂತೆ ಮನವಿ ಸಲ್ಲಿಸಬೇಕು.

ಬೆಳೆ ಸಾಲ ಪಡೆಯದ ರೈತರು ಅರ್ಜಿಯೊಂದಿಗೆ ಪ್ರಸಕ್ತ ಸಾಲಿನ ಪಹಣಿ, ಖಾತೆ ಪುಸ್ತಕ, ಕಂದಾಯ ರಶೀದಿ, ಆಧಾರ್ ಜೋಡಣೆಯಾಗಿರುವ ಬ್ಯಾಂಕ್ ಪಾಸ್ ಪುಸ್ತಕ,

ಆಧಾರ್ ಕಾರ್ಡ್ ಮತ್ತು ಎಫ್‌ಐಡಿ ಸಂಖ್ಯೆಯೊಂದಿಗೆ ಬ್ಯಾಂಕ್, ಡಿಜಿಟಲ್ ಸೇವಾ ಕೇಂದ್ರ, ಸಾಮಾನ್ಯ ಸೇವಾ ಕೇಂದ್ರ ಅಥವಾ ಗ್ರಾಮ ಒನ್ ಕೇಂದ್ರಗಳಲ್ಲಿ ವಿಮಾ ಯೋಜನೆಗೆ ಡಿಸೆಂಬರ್ 1 ರೊಳಗೆ ನೋಂದಣಿ ಮಾಡಿಕೊಳ್ಳಬಹುದು.

2025ನೇ ಸಾಲಿನ ಹಿಂಗಾರು ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭಿಮಾ (ವಿಮಾ) ಯೋಜನೆಯಡಿ ಬೆಳೆವಾರು ವಿಮಾ ಮೊತ್ತ ಹಾಗೂ ವಿಮಾ ಕಂತಿನ ವಿವರ ಇಂತಿವೆ; ಟೊಮ್ಯಾಟೋ ಅಧಿಸೂಚಿತ ಬೆಳೆಯಾಗಿದ್ದು, ಪ್ರತೀ ಹೆಕ್ಟೇರ್‌ಗೆ ವಿಮಾ ಮೊತ್ತ ರೂ.1,41,500 ಆಗಿದೆ.2025ನೇ ಸಾಲಿನ ಹಿಂಗಾರು ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭಿಮಾ (ವಿಮಾ) ಯೋಜನೆಯಡಿ ಬೆಳೆವಾರು ವಿಮಾ ಮೊತ್ತ ಹಾಗೂ ವಿಮಾ ಕಂತಿನ ವಿವರ ಇಂತಿವೆ; ಟೊಮ್ಯಾಟೋ ಅಧಿಸೂಚಿತ ಬೆಳೆಯಾಗಿದ್ದು, ಪ್ರತೀ ಹೆಕ್ಟೇರ್‌ಗೆ ವಿಮಾ ಮೊತ್ತ ರೂ.1,41,500 ಆಗಿದೆ.

# ರಶ್ಮಿಕಾ ಮಂದಣ್ಣ, ವಿಜಯ್ ದೇವರಕೊಂಡ ಮದುವೆ ಫಿಕ್ಸ್



ಹಲವು ವರ್ಷಗಳಿಂದ ಡೇಟಿಂಗ್ ನಲ್ಲಿದ್ದ ನ್ಯಾಷನಲ್ ಕ್ರಶ್ ರಶ್ಮಿಕಾ ಮಂದಣ್ಣ– ವಿಜಯ್ ದೇವರಕೊಂಡಗೆ ಕಡೆಗೂ ಕಂಕಣ ಕೂಡಿ ಬಂದಿದ್ದು, ಮದುವೆ ಫಿಕ್ಸ್ ಆಗಿದೆ. ಫೆಬ್ರವರಿ 26, 2026 ರಂದು ರಾಜಸ್ಥಾನದ ಉದಯಪುರದಲ್ಲಿ ವಿವಾಹವಾಗಲಿದ್ದಾರೆ.

ಸಾಮಾಜಿಕ ಮಾಧ್ಯಮದಲ್ಲಿ 'thecinegossips' ಎಂಬ ಖಾತೆಯಿಂದ ವೈರಲ್ ಆಗಿರುವ ಪೋಸ್ಟ್ ನಲ್ಲಿ ಉದಯಪುರದ ಸುಂದರ ಅರಮನೆಯಲ್ಲಿ ವಿವಾಹ ನಡೆಯಲಿದೆ ಎಂದು ಹೇಳಿಕೊಂಡಿದೆ. ಆದರೆ, ಈ ಸುದ್ದಿಯನ್ನು ರಶ್ಮಿಕಾ ಮಂದಣ್ಣ ಆಗಲಿ ಅಥವಾ ವಿಜಯ್ ದೇವರಕೊಂಡ ಆಗಲಿ ಅಧಿಕೃತವಾಗಿ ದೃಢಪಡಿಸಿಲ್ಲ ಅಥವಾ ನಿರಾಕರಿಸಿಲ್ಲ.

ಕಳೆದ ತಿಂಗಳು ಈ ಜೋಡಿಯ ನಿಶ್ಚಿತಾರ್ಥ ನಡೆದಿರುವ ಬಗ್ಗೆ ವರದಿಯಾಗಿತ್ತು. ಆದರೆ, ಈ ಬಗ್ಗೆ ಯಾರೂ ಅಧಿಕೃತವಾಗಿ ಹೇಳಿಕೊಂಡಿರಲಿಲ್ಲ.ಹೈದರಾಬಾದ್‌ನಲ್ಲಿ ನಡೆದ ಖಾಸಗಿ ಸಮಾರಂಭದಲ್ಲಿ ರಶ್ಮಿಕಾ ಮಂದಣ್ಣ ಮತ್ತು ವಿಜಯ್ ದೇವರಕೊಂಡ ನಿಶ್ಚಿತಾರ್ಥ ಮಾಡಿಕೊಂಡಿದ್ದು, ಸಮಾರಂಭದಲ್ಲಿ ಕುಟುಂಬ ಸದಸ್ಯರು ಮತ್ತು ಬೆರಳೆಣಿಕೆಯಷ್ಟು ಆಪ್ತ ಸ್ನೇಹಿತರು ಮಾತ್ರ ಭಾಗವಹಿಸಿದ್ದರು ಎಂದು ಹೇಳಲಾಗಿತ್ತು.ಇತ್ತೀಚೆಗೆ ಬಿಡುಗಡೆಯಾದ 'Thamma' ಚಿತ್ರದ ಪ್ರಚಾರ ಕಾರ್ಯಕ್ರಮದಲ್ಲಿ, ರಶ್ಮಿಕಾ ಅವರ ನಿಶ್ಚಿತಾರ್ಥದ ಸುತ್ತಲಿನ ವದಂತಿಗಳ ಬಗ್ಗೆ ಪ್ರಶ್ನಿಸಲಾಗಿತ್ತು. ಅವರು, ನಗುನಗುತ್ತಾ, ಎಲ್ಲರಿಗೂ ಅದರ ಬಗ್ಗೆ ತಿಳಿದಿದೆ ಎಂದು ಹೇಳಿದ್ದರು. ಜಗಪತಿ ಬಾಬು ಅವರ ಟಾಕ್ ಶೋ ಜಯಮ್ಮು ನಿಶ್ಚಯಮ್ಮೂರ್ ನಲ್ಲಿ ರಶ್ಮಿಕಾ ತಮ್ಮ ನಿಶ್ಚಿತಾರ್ಥದ ಉಂಗುರವನ್ನು ತೋರಿಸಿದ್ದರು. ಜಗಪತಿ ಬಾಬು ರಶ್ಮಿಕಾ ಅವರನ್ನು ಬೆರಳುಗಳಲ್ಲಿರುವ ಎರಡು ಉಂಗುರಗಳ ಬಗ್ಗೆ ಕೇಳಿದಾಗ ಆ ಎರಡೂ ಉಂಗುರಗಳು ಅತ್ಯಂತ ಮುಖ್ಯವೆಂದು ರಶ್ಮಿಕಾ ಹೇಳಿದ್ದರು.

# ಚಂದನ್ ಕುಮಾರ್ ನಟಿಸಿ, ನಿರ್ದೇಶಿಸಿರುವ 'ಫ್ಲರ್ಟ್' ಬಿಡುಗಡೆ



ಕಿರುತೆರೆ ಮತ್ತು ಬೆಳ್ಳಿ ತೆರೆಯಲ್ಲಿ ಹೆಸರುವಾಸಿಯಾದ ನಟ ಚಂದನ್ ಕುಮಾರ್, ಇದೀಗ 'ಫ್ಲರ್ಟ್' ಚಿತ್ರದ ಮೂಲಕ ನಿರ್ದೇಶನಕ್ಕೆ ಪದಾರ್ಪಣೆ ಮಾಡಲು ಸಿದ್ಧರಾಗಿದ್ದಾರೆ. ಈ ಚಿತ್ರವು ಮೂಲತಃ ನವೆಂಬರ್ 7 ರಂದು ಬಿಡುಗಡೆಯಾಗಬೇಕಿತ್ತು. ಆದರೆ, ಕರ್ನಾಟಕದಾದ್ಯಂತ ಚಿತ್ರವನ್ನು ಅದ್ದೂರಿಯಾಗಿ ಬಿಡುಗಡೆ ಮಾಡಲು ಚಿತ್ರತಂಡ ಇದೀಗ ಅದನ್ನು ನವೆಂಬರ್ 28ಕ್ಕೆ ಮುಂದೂಡಿದೆ.

ಚಂದನ್ ಅವರ ಆಪ್ತ ಸ್ನೇಹಿತ ಡಾರ್ಲಿಂಗ್ ಕೃಷ್ಣ ನಟನೆಯ ಬ್ರ್ಯಾಟ್ ಚಿತ್ರ ಇದೀಗ ಉತ್ತಮ ಪ್ರದರ್ಶನ ಕಾಣುತ್ತಿರುವುದರಿಂದ, ಚಿತ್ರಮಂದಿರಗಳೊಂದಿಗಿನ ಸ್ಪರ್ಧೆಯನ್ನು ತಪ್ಪಿಸಲು ಚಿತ್ರತಂಡ ಚಿತ್ರದ ಬಿಡುಗಡೆಯನ್ನು ಮುಂದೂಡಲು ನಿರ್ಧರಿಸಿತು. ಪೋಸ್ಟ್ ಪ್ರೊಡಕ್ಷನ್ ಕೆಲಸಗಳು ಇನ್ನೂ ನಡೆಯುತ್ತಿರುವುದರಿಂದ ಚಿತ್ರತಂಡ ಚಿತ್ರದ ಬಿಡುಗಡೆಯನ್ನು ಮುಂದೂಡಲು ಬಯಸಿದೆ.

ಎವರೆಸ್ಟ್ ಪಿಕ್ಚರ್ಸ್ ನಿರ್ಮಿಸಿದ ಫ್ಲರ್ಟ್ ಚಿತ್ರಕ್ಕೆ 'ಎ ಪ್ಯೂರ್ ಲವ್ ಸ್ಟೋರಿ' ಎಂಬ ಟ್ಯಾಗ್‌ಲೈನ್ ಇದೆ. ಚಂದನ್ ಈ ಚಿತ್ರವನ್ನು ನಿರ್ದೇಶಿಸುವುದಲ್ಲದೆ, ಪ್ರಮುಖ ಪಾತ್ರದಲ್ಲಿಯೂ ನಟಿಸಿದ್ದಾರೆ. ಚಂದನ್ ಅವರಿಗೆ ನಿಮಿಕಾ ರತ್ನಾಕರ್ ಮತ್ತು ಅಕ್ಷತಾ ಬೋಪಣ್ಣ ಜೋಡಿಯಾಗಿ ನಟಿಸಿದ್ದಾರೆ.

ಚಿತ್ರವು ಈಗಾಗಲೇ ತೀವ್ರ ಕುತೂಹಲ ಕೆರಳಿಸಿದ್ದು, ಇದಕ್ಕೆ ಕಿಚ್ಚ ಸುದೀಪ್ ಹಾಡಿರುವ 'ನೀ ನನ್ನ ಜೀವ' ಎಂಬ ಗೀತೆಯೂ ಒಂದು ಕಾರಣ. ಈ ಹಾಡು ವೈರಲ್ ಆಗಿದ್ದು, ಆನ್‌ಲೈನ್‌ನಲ್ಲಿ ಟ್ರೆಂಡಿಂಗ್‌ನಲ್ಲಿದೆ.

'ಫ್ಲರ್ಟ್' ಒಂದು ರೊಮ್ಯಾಂಟಿಕ್ ಕಾಮಿಡಿ ಚಿತ್ರವಾದರೂ, ಅದು ಕೇವಲ ಹಾಸ್ಯಕ್ಕಿಂತ ಹೆಚ್ಚಿನದನ್ನು ನೀಡುವ ಗುರಿಯನ್ನು ಹೊಂದಿದೆ. 'ಫ್ಲರ್ಟಿಂಗ್' ಎಂದರೆ ಕೇವಲ ಕೀಟಲೆ ಮಾಡುವುದು ಮಾತ್ರವಲ್ಲ; ಅದು ಆಳವಾದ ಸಂಪರ್ಕ ಮತ್ತು ವಾತ್ಸಲ್ಯವನ್ನು ಸಹ ಅರ್ಥೈಸಬಲ್ಲದು. ಪ್ರತಿಯೊಬ್ಬರ 'ಡವ್'ನಲ್ಲಿಯೂ ಸ್ವಲ್ಪ ಪ್ರೀತಿ ಇರುತ್ತದೆ ಎಂದು ಚಂದನ್ ಹೇಳುತ್ತಾರೆ.

ಚಿತ್ರದಲ್ಲಿ ಅವಿನಾಶ್, ಶ್ರುತಿ, ಸಾಧು ಕೋಕಿಲ, ಗಿರೀಶ್ ಶಿವಣ್ಣ ಮತ್ತು ವಿನಯ್ ಗೌಡ ನಟಿಸಿದ್ದಾರೆ.

ನಕುಲ್ ಅಭ್ಯಂಕರ್ ಜನಪ್ರಿಯ ಸ್ನೇಹ ಗೀತೆಯನ್ನು ಸಂಯೋಜಿಸಿದ್ದಾರೆ. ಜಸ್ಸಿ ಗಿಫ್ಟ್ ಹಿನ್ನೆಲೆ ಸಂಗೀತದ ಜೊತೆಗೆ ಇತರ ಮೂರು ಹಾಡುಗಳಿಗೆ ಸಂಗೀತ ನೀಡಿದ್ದಾರೆ. ಹೆಚ್.ಸಿ. ವೇಣು ಚಿತ್ರದ ಛಾಯಾಗ್ರಹಣ ಮಾಡಿದ್ದಾರೆ.

# ಟಗರು ಪಲ್ಯ' ಖ್ಯಾತಿಯ ನಾಗಭೂಷಣ್ ಹೊಸ ಚಿತ್ರ ಘೋಷಣೆ;



ಇಕ್ಕಟ್, ಬಡವ ರಾಸ್ಕಲ್, ಕೌಸಲ್ಯಾ ಸುಪ್ರಜಾ ರಾಮ, ಟಗರು ಪಲ್ಯ, ವಿದ್ಯಾಪತಿ ಮುಂತಾದ ಚಿತ್ರಗಳಿಗೆ ಹೆಸರುವಾಸಿಯಾದ ನಟ ನಾಗಭೂಷಣ, ಇದೀಗ ನಾಯಕನಾಗಿ ತಮ್ಮ ಮುಂದಿನ ಯೋಜನೆಗೆ ಸಜ್ಜಾಗುತ್ತಿದ್ದಾರೆ. ಈ ವಾರ ಅಧಿಕೃತವಾಗಿ ಸೆಟ್ಟೇರಲಿರುವ ಹೆಸರಿಡದ ಈ ಚಿತ್ರವು ಜೈಶ್ ಅವರ ನಿರ್ದೇಶನದ ಚೊಚ್ಚಲ ಚಿತ್ರವಾಗಿದೆ.

ಚಿತ್ರತಂಡ ಕಥೆಯನ್ನು ಮುಚ್ಚಿಟ್ಟಿದ್ದಾರೆ. ಆದರೆ ವರದಿಗಳ ಪ್ರಕಾರ, ಈ ಕಥೆಯು ಪ್ರಿಯದರ್ಶಿ ಪುಲಿಕೊಂಡ ನಟಿಸಿದ 2025ರ ತೆಲುಗು ಹಿಟ್ ಸಿನಿಮಾ 'ಕೋರ್ಟ್'ನಿಂದ ಸ್ಫೂರ್ತಿ ಪಡೆದಿದೆ ಎನ್ನಲಾಗಿದೆ.

ದುನಿಯಾ ವಿಜಯ್ ನಟನೆಯ ಸಲಗ ಚಿತ್ರದಲ್ಲಿ ಕಾನೂನು ಸನ್ನಿವೇಶದಲ್ಲಿ ಕಾಣಿಸಿಕೊಂಡಿದ್ದ ಈ ನಟ ಈಗ ನ್ಯಾಯಾಲಯದ ಚಿತ್ರದಲ್ಲಿ ನಾಯಕನಾಗಿ ನಟಿಸಲಿದ್ದಾರೆ. ಈ ಚಿತ್ರವನ್ನು ಚಿಕ್ಕಬಳ್ಳಾಪುರದ ಮೋಹನ್ ಬಾಬು ನಿರ್ಮಿಸಿದ್ದಾರೆ. ಈ ವಾರ ನಡೆಯಲಿರುವ ಮುಹೂರ್ತ ಸಮಾರಂಭದಲ್ಲಿ ಚಿತ್ರದ ಪಾತ್ರವರ್ಗ ಮತ್ತು ತಾಂತ್ರಿಕ ಸಿಬ್ಬಂದಿಯ ಬಗ್ಗೆ ವಿವರಗಳನ್ನು ಅಧಿಕೃತವಾಗಿ ಬಹಿರಂಗಪಡಿಸಲಾಗುವುದು.

# ಯಜಮಾನ' ಚಿತ್ರಕ್ಕೆ ಹೈಟೆಕ್ ಸ್ಪರ್ಶ: 25 ವರ್ಷಗಳ ನಂತರ ರಿ-ರಿಲೀಸ್ ಗೆ ಸಜ್ಜು

ಕರ್ನಾಟಕ ರತ್ನ ಡಾ. ವಿಷ್ಣುವರ್ಧನ್ ಹಾಗೂ ಪ್ರೇಮಾ ಅಭಿನಯದ ಸೂಪರ್ ಹಿಟ್ ಚಿತ್ರ 'ಯಜಮಾನ' 25 ವರ್ಷಗಳ ನಂತರ ಆಧುನಿಕ ತಂತ್ರಜ್ಞಾನದೊಂದಿಗೆ ಮರು ಬಿಡುಗಡೆಗೆ ಸಜ್ಜಾಗಿದೆ.

ಮೆಹರುನ್ನಿಸಾ ರೆಹಮಾನ್ ನಿರ್ಮಾಣದ ಹಾಗೂ ಆರ್.ಶೇಷಾದ್ರಿ ರಾಧಾ ಭಾರತಿ ನಿರ್ದೇಶನದ ಯಜಮಾನ ಚಿತ್ರವನ್ನು ವಿಷ್ಣುವರ್ಧನ್ ಅಭಿಮಾನಿಯಾಗಿರುವ ಎಸ್.ಡಿ. ಮುನಿಸ್ವಾಮಿ, ರಾಜ್ಯಾದ್ಯಂತ ಅದ್ದೂರಿಯಾಗಿ ಮರು ಬಿಡುಗಡೆ ಮಾಡುತ್ತಿದ್ದಾರೆ.



ಚಿತ್ರವನ್ನು ಡಿಐ ಬಳಸಿ 4ಇ ಡಿಜಿಟಲ್ ಪ್ರೊಜೆಕ್ಷನ್‌ಗೆ ತಯಾರು ಮಾಡಲಾಗಿದೆ. ಮೋನೊ ಟ್ರ್ಯಾಕ್ ನಲ್ಲಿದ್ದ ಈ ಚಿತ್ರದ ಕಲಾವಿದರ ಧ್ವನಿಗಳನ್ನು ಸಹ 5.1 ಹಾಗೂ 7.1 ಡಿಜಿಟಲ್ ಸೌಂಡ್‌ಗೆ ವರ್ಗಾಯಿಸಲಾಗಿದೆ.

ಚಿತ್ರದ ರಜತೋತ್ಸವವನ್ನು ಸಂಭ್ರಮಿಸಲು ಕಲಾವಿದರ ಸಂಘದಲ್ಲಿ ಇತ್ತೀಚಿಗೆ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಚಿತ್ರದ ನಿರ್ಮಾಪಕರು ಹಾಗೂ ಕಲಾವಿದರು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು.

ನಿರ್ಮಾಪಕ ರೆಹಮಾನ್, 2000 ಇಸವಿಯಲ್ಲಿ ತೆರೆ ಕಂಡಿದ್ದ ಯಜಮಾನ ಚಿತ್ರ 130ಕ್ಕೂ ಹೆಚ್ಚು ಕಡೆ ಶತದಿನೋತ್ಸವ, 40ಕ್ಕೂ ಹೆಚ್ಚು ಚಿತ್ರಮಂದಿರಗಳಲ್ಲಿ ಇಪ್ಪತ್ತೈದು ವಾರ ಹಾಗೂ 4 ಕಡೆಗಳಲ್ಲಿ 1 ವರ್ಷ ಯಶಸ್ವಿ ಪ್ರದರ್ಶನ ಕಂಡಿದೆ. 25 ವರ್ಷಗಳ ಹಿಂದೆಯೇ ರೂ. 35 ಕೋಟಿ ಕಲೆಕ್ಷನ್ ಮಾಡಿ ದಾಖಲೆ ಬರೆದಿತ್ತು ಎಂದು ಹೇಳಿದರು.

ನುರಿತ ತಂತ್ರಜ್ಞರನ್ನು ಕರೆಸಿ ಅವರಿಂದ ಈಗಿನ ಆಧುನಿಕ ರೀತಿಯಲ್ಲಿ ಸೌಂಡ್ ಎಫೆಕ್ಟ್ ಅಳವಡಿಸಲಾಗಿದೆ. ಇದಕ್ಕೆಲ್ಲಾ ಬಹಳ ಸಮಯ ಹಾಗೂ ಹಣ ವೆಚ್ಚವಾಗಿದೆ. ಮುನಿಸ್ವಾಮಿ ಅವರು ಯಾವುದೇ ಕೊರತೆ ಬಾರದ ಹಾಗೆ ಎಲ್ಲಾ ಕೆಲಸಗಳನ್ನು ಮಾಡಿದ್ದಾರೆ ಎಂದು ಸಂಗೀತ ನಿರ್ದೇಶಕ ರಾಜೇಶ್ ರಾಮನಾಥ್ ತಿಳಿಸಿದರು.

ವಿಷ್ಣುವರ್ಧನ್ ಅವರ ಮೇಲಿನ ಪ್ರೀತಿಯಿಂದ 'ಯಜಮಾನ' ಚಿತ್ರಕ್ಕೆ ಈಗಿನ ತಂತ್ರಜ್ಞಾನವನ್ನು ಅಳವಡಿಸಿ ಮರು ಬಿಡುಗಡೆ ಮಾಡುತ್ತಿದ್ದೇನೆ. 150 ಕ್ಕೂ ಹೆಚ್ಚು ಕಡೆ ಬಿಡುಗಡೆಯಾಗಲಿದೆ. ಎಲ್ಲರೂ ಚಿತ್ರಮಂದಿರಗಳಲ್ಲೇ ಈ ಚಿತ್ರವನ್ನು ವೀಕ್ಷಿಸಿ ಎಂದು ಮುನಿಸ್ವಾಮಿ ಮನವಿ ಮಾಡಿಕೊಂಡರು.

# ಆಕ್ಷನ್ ಕಿಂಗ್ ಅರ್ಜುನ್ ಸರ್ಜಾ ಅಭಿಯನದ 'ಮಫ್ತಿ ಪೊಲೀಸ್' ರಿಲೀಸ್ ಡೇಟ್ ಫಿಕ್ಸ್!

ಆಕ್ಷನ್ ಕಿಂಗ್ ಅರ್ಜುನ್ ಸರ್ಜಾ, ಐಶ್ವರ್ಯಾ ರಾಜೇಶ್ ಜೊತೆ ನಟಿಸಿರುವ 'ಮಫ್ತಿ ಪೊಲೀಸ್' ಚಿತ್ರದ ಮೂಲಕ ಮತ್ತೆ ಬಿಗ್ ಸ್ಕ್ರೀನ್ ಗೆ ಮರಳಲು ಸಜ್ಜಾಗಿದ್ದಾರೆ. ದಿನೇಶ್ ಲೆಚ್ಚುಮನನ್ ಚೊಚ್ಚಲ ನಿರ್ದೇಶನದ ಮತ್ತು ಜಿ.ಎಸ್. ಆರ್ಟ್ಸ್ ಬ್ಯಾನರ್ ನಲ್ಲಿ ಜಿ. ಅರುಲ್ ಕುಮಾರ್ ನಿರ್ಮಿಸಿರುವ ಈ ಚಿತ್ರವು ನವೆಂಬರ್ 21 ರಂದು ವಿಶ್ವಾದ್ಯಂತ ಭರ್ಜರಿಯಾಗಿ ಬಿಡುಗಡೆಯಾಗಲಿದೆ.


ರಿಲೀಸ್ ಡೇಟ್ ಪೋಸ್ಟರ್ ಬಿಡುಗಡೆಯಾಗಿದ್ದು, ಅದರಲ್ಲಿ ಅರ್ಜುನ್ ಕೋಪದಲ್ಲಿರುವಂತೆ ಕಾಣಿಸುತ್ತದೆ. ಪೋಸ್ಟರ್ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ಜನರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ.

ಈ ಹಿಂದೆಯೇ ಬಿಡುಗಡೆಯಾದ ಟೀಸರ್ ಆಕರ್ಷಕ ದೃಶ್ಯಗಳು ಮತ್ತು ಭಾವನಾತ್ಮಕ ಅಂಶಗಳಿಂದ ಜನರಲ್ಲಿ ಸಿನಿಮಾ ಬಗ್ಗೆ ಭರವಸೆ ನೀಡಿತ್ತು. ಅರ್ಜುನ್ ಅವರ ಕಮ್ ಬ್ಯಾಂಕ್ ಮತ್ತು ಐಶ್ವರ್ಯಾ ರಾಜೇಶ್ ಅವರ ಪರಿಣಾಮಕಾರಿ ಅಭಿನಯ ಪ್ರಮುಖ ಹೈಲೈಟ್‌ಗಳಾಗುವ ನಿರೀಕ್ಷೆಯಿದೆ.



ಈ ಚಿತ್ರದಲ್ಲಿ ಅಭಿರಾಮಿ (ಬಿಗ್ ಬಾಸ್ ಖ್ಯಾತಿ) ರಾಮ್‌ಕುಮಾರ್, ಜಿ.ಕೆ. ರೆಡ್ಡಿ ಮತ್ತಿತರರು ನಟಿಸಿದ್ದಾರೆ. ಶರವಣನ್ ಅಭಿಮನ್ಯು ಛಾಯಾಗ್ರಹಣ ಒದಗಿಸಿದ್ದು, ಆಶಿವಗನ್ ಸಂಗೀತ ಸಂಯೋಜಿಸಿದ್ದಾರೆ. ಚಿತ್ರಕ್ಕೆ ಲಾರೆನ್ಸ್ ಕಿಶೋರ್ ಅವರ ಸಂಕಲನವಿದೆ. 'ಮಫ್ತಿ ಪೊಲೀಸ್' ತಮಿಳು, ತೆಲುಗು, ಮಲಯಾಳಂ ಮತ್ತು ಕನ್ನಡ ಭಾಷೆಗಳಲ್ಲಿ ಏಕಕಾಲದಲ್ಲಿ ಬಿಡುಗಡೆಯಾಗಲಿದೆ.

# ಬಾಲಿವುಡ್ ಹಿರಿಯ ನಟ ಸತೀಶ್ ಶಾ ನಿಧನ



**ಮುಂಬೈ:** ಜಾನೆ ಭಿ ದೋ ಯಾರೋ, ಮೈ ಹೂ ನಾ ಮತ್ತು ಹಿಟ್ ಟಿವಿ ಶೋ ಸಾರಾಭಾಯಿ ವರ್ಸಸ್ ಸಾರಾಭಾಯಿ ಸೇರಿದಂತೆ ಹಲವು ಚಿತ್ರಗಳಲ್ಲಿ ಅಭಿನಯಿಸಿದ್ದ ಬಾಲಿವುಡ್ ಹಿರಿಯ ನಟ ಸತೀಶ್ ಶಾ ಅವರು ಶನಿವಾರ ನಿಧನರಾಗಿದ್ದಾರೆ ಎಂದು ಅವರ ಮ್ಯಾನೇಜರ್ ತಿಳಿಸಿದ್ದಾರೆ. ಅವರಿಗೆ 74 ವರ್ಷ ವಯಸ್ಸಾಗಿತ್ತು.

ಹಿರಿಯ ನಟ ಸತೀಶ್ ಶಾ ಅವರು ಇಂದು ಮಧ್ಯಾಹ್ನ ಬಾಂದ್ರಾ ಪೂರ್ವದಲ್ಲಿರುವ ತಮ್ಮ ನಿವಾಸದಲ್ಲಿ ನಿಧನರಾದರು ಎಂದು 30 ವರ್ಷಗಳಿಗೂ ಹೆಚ್ಚು ಕಾಲ ಅವರ ಆಪ್ತ ಸಹಾಯಕರಾಗಿರುವ ರಮೇಶ್ ಕಡತಲ ಅವರು ತಿಳಿಸಿದ್ದಾರೆ.

"ಸತೀಶ್ ಶಾ ಅವರು ಹೃದಯಾಘಾತದಿಂದ ನಿಧನರಾದಂತೆ ತೋರುತ್ತಿದೆ. ಆದರೆ ಅವರ ಸಾವಿನ ಹಿಂದಿನ ಕಾರಣ ತಿಳಿಯಲು ವೈದ್ಯರಿಂದ ಅಂತಿಮ ವರದಿಗಳಿಗಾಗಿ ನಾವು ಕಾಯುತ್ತಿದ್ದೇವೆ" ಎಂದು ಕಡತಲ ಪಿಟಿಐಗೆ ತಿಳಿಸಿದ್ದಾರೆ.

ತಮ್ಮ ಅದ್ಭುತ ಹಾಸ್ಯ ಪ್ರಜ್ಞೆ ಮತ್ತು ವಿಶಿಷ್ಟ ನಟನಾ ಶೈಲಿಗೆ ಹೆಸರುವಾಸಿಯಾಗಿದ್ದ ಸತೀಶ್ ಶಾ ಅವರು, ಕಳೆದ ಕೆಲ ದಿನಗಳಿಂದ ಮೂತ್ರಪಿಂಡ ಸಮಸ್ಯೆಯಿಂದ ಬಳಲುತ್ತಿದ್ದರು. ಇತ್ತೀಚೆಗೆ ಅಂಗಾಂಗ ಕಸಿ ಶಸ್ತ್ರಚಿಕಿತ್ಸೆಗೆ ಒಳಗಾಗಿದ್ದರು.

# ಕಿಚ್ಚ ಸುದೀಪ್ ಮಾಸ್ ಅವತಾರಕ್ಕೆ ಅಭಿಮಾನಿಗಳು ಫಿದಾ

ಕಳೆದ ವರ್ಷ ಮ್ಯಾಕ್ಸ್ ಮೂಲಕ ಬ್ಲಾಕ್ ಬಸ್ಟರ್ ಚಿತ್ರ ನೀಡಿದ್ದ ಕಿಚ್ಚ ಸುದೀಪ್ ಮತ್ತು ನಿರ್ದೇಶಕ ವಿಜಯ್ ಕಾರ್ತಿಕೇಯನ್ ಮತ್ತೊಮ್ಮೆ ಆಕ್ಷನ್ ಎಂಟರ್ಟೈನರ್ ಮಾರ್ಕ್ ನೊಂದಿಗೆ ಮತ್ತೆ ದೊಡ್ಡ ಪರದೆಯ ಮೇಲೆ ಬಂದಿದ್ದಾರೆ. ಚಿತ್ರತಂಡ ಇಂದು ಚಿತ್ರದ ಕುತೂಹಲಕಾರಿ ಟೀಸರ್ ಅನ್ನು ಬಿಡುಗಡೆ ಮಾಡಿದ್ದಾರೆ. ಮಾಸ್ ಲುಕ್ ನಲ್ಲಿ ಸುದೀಪ್ ಕಾಣಿಸಿಕೊಂಡಿದ್ದು ಗ್ಯಾಂಗ್ ಸ್ಟರ್ ಗಳ ಹುಟ್ಟಡಗಿಸುವ ಕಥೆಯನ್ನು ಚಿತ್ರ ಹೊಂದಿದೆ ಎನ್ನಲಾಗದೆ.

73 ಸೆಕೆಂಡುಗಳ ಟೀಸರ್ ಅಭಿಮಾನಿಗಳು ಮತ್ತೊಂದು ಆಕ್ಷನ್ ಎಂಟರ್ಟೈನರ್ ಗೆ ಸಜ್ಜಾಗುವಂತೆ ಮಾಡಿದೆ. ಮಾರ್ಕ್ ಅನ್ನು ಸುದೀಪ್ ಅಭಿನಯದ ಮ್ಯಾಕ್ಸ್ ಚಿತ್ರವನ್ನು ನಿರ್ದೇಶಿಸಿದ ವಿಜಯ್ ಕಾರ್ತಿಕೇಯ ನಿರ್ದೇಶಿಸಿದ್ದಾರೆ. ಈ ಚಿತ್ರದಲ್ಲಿ ನವೀನ್ ಚಂದ್ರ, ದೀಪಶಿಖಾ, ಯೋಗಿ ಬಾಬು ಮತ್ತು ಗೋಪಾಲಕೃಷ್ಣ ದೇಶಪಾಂಡೆ ಕೂಡ ಇದ್ದಾರೆ.ಸತ್ಯ ಜ್ಯೋತಿ ಫಿಲ್ಮ್ಸ್ ಬ್ಯಾನರ್ ಅಡಿಯಲ್ಲಿ



ಸೆಂಥಿಲ್ ತ್ಯಾಗರಾಜನ್ ನಿರ್ಮಿಸಿರುವ ಮಾರ್ಕ್ ಚಿತ್ರಕ್ಕೆ ಖ್ಯಾತ ಸಂಗೀತ ನಿರ್ದೇಶಕ ಅಜನೀಶ್ ಲೋಕನಾಥ್ ಅವರ ಸಂಗೀತ ನೀಡಿದ್ದಾರೆ. ಈ ಚಿತ್ರವು ಡಿಸೆಂಬರ್ 25ರಂದು ಅದ್ದೂರಿಯಾಗಿ ಬಿಡುಗಡೆಯಾಗಲಿದ್ದು, ಇದು ವರ್ಷದ ಅತ್ಯಂತ ನಿರೀಕ್ಷಿತ ಕ್ರಿಸ್‌ಮಸ್ ಬಿಡುಗಡೆಗಳಲ್ಲಿ ಒಂದಾಗಿದೆ.

# ಬಾಡಿ ಶೇಮಿಂಗ್ ಪ್ರಶ್ನೆ ಕೇಳಿದ ಯೂಟ್ಯೂಬರ್ ನಟಿ ಗೌರಿ ಕಿಶನ್ ಕೆಂಡಾಮಂಡಲ

**ಚೆನ್ನೈ:** ತಮಿಳು ಚಿತ್ರ "ಅದರ್ಸ್" ಪತ್ರಿಕಾಗೋಷ್ಠಿಯಲ್ಲಿ ತಮ್ಮ ದೇಹತೂಕದ ಬಗ್ಗೆ ಅವಹೇಳನಕಾರಿ ಪ್ರಶ್ನೆ ಕೇಳಿದ ಯೂಟ್ಯೂಬರ್‌ನನ್ನು ನಟಿ ಗೌರಿ ಜಿ ಕಿಶನ್ ತರಾಟೆಗೆ ತೆಗೆದುಕೊಂಡ ಪ್ರಸಂಗ ನಡೆದಿದ್ದು ಇದಕ್ಕೆ ಸಂಬಂಧಪಟ್ಟ ವಿಡಿಯೊ ವೈರಲ್ ಆಗಿದೆ. ನಟಿ ನೀಡಿದ ಉತ್ತರ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿದ್ದು, ಹಲವರಿಂದ ಮೆಚ್ಚುಗೆ, ಬೆಂಬಲ ಸಿಕ್ಕಿದೆ.


ತಮಿಳು ಮತ್ತು ಮಲಯಾಳಂ ಚಿತ್ರರಂಗದಲ್ಲಿ ತಮ್ಮ ನಟನೆ, ಕೆಲಸದಿಂದ ಗುರುತಿಸಿಕೊಂಡಿರುವ ನಟಿ ಗೌರಿ ಅವರಿಗೆ ಅನುಚಿತ ಪ್ರಶ್ನೆ ಕೇಳಿದ ಯೂಟ್ಯೂಬರ್‌ನ ವರ್ತನೆಯನ್ನು ಚೆನ್ನೈ ಪ್ರೆಸ್ ಕ್ಲಬ್ ಖಂಡಿಸಿತು.

ವೈರಲ್ ಆಗಿರುವ ವೀಡಿಯೊದಲ್ಲಿ, ಗೌರಿ ಆ ವ್ಯಕ್ತಿಗೆ, "ನನ್ನ ತೂಕದ ಬಗ್ಗೆ ನೀವು ಏಕೆ ತಲೆಕೆಡಿಸಿಕೊಳ್ಳಬೇಕು, ನಿಮಗೆ ಸಂಬಂಧಪಟ್ಟ ವಿಷಯವೇ, ಅದು ಚಿತ್ರಕ್ಕೆ ಹೇಗೆ ಸಂಬಂಧಿಸಿದೆ



ಮತ್ತು ಪ್ರಸ್ತುತವಾಗಿದೆ? ನನ್ನ ತೂಕವು ನನ್ನ ಆಯ್ಕೆ ಮತ್ತು ಅದು ನನ್ನ ಪ್ರತಿಭೆಗೆ ಸಂಬಂಧಿಸಿದೆ, ನಿಮ್ಮ ಪ್ರಶ್ನೆ ದೇಹವನ್ನು ಅವಮಾನಿಸುವುದು ಮಾತ್ರವಲ್ಲ. ಮೂರ್ಖತನದ ಪ್ರಶ್ನೆ ಎಂದು ಧೈರ್ಯದಿಂದ ಉತ್ತರ ನೀಡಿದ್ದಾರೆ.

# ಮೊದಲ ದಿನವೇ 'ಥಾಮಾ' ಭರ್ಜರಿ ಕಲೆಕ್ಷನ್



**ನವದೆಹಲಿ:** ಆಯುಷ್ಮಾನ್ ಖುರಾನಾ ಮತ್ತು ರಶ್ಮಿಕಾ ಮಂದಣ್ಣ ನಟಿಸಿರುವ ಹಾರರ್ ಕಾಮಿಡಿ ಚಿತ್ರ 'ಥಾಮಾ' ದೇಶೀಯ ಬಾಕ್ಸ್ ಆಫೀಸ್‌ನಲ್ಲಿ ಮೊದಲ ದಿನವೇ 25.11 ಕೋಟಿ ರೂ. ಗಳಿಸಿದೆ ಎಂದು ನಿರ್ಮಾಣ ಬ್ಯಾನರ್ ಮ್ಯಾಡಾಕ್ ಫಿಲ್ಮ್ಸ್ ಬುಧವಾರ ಪ್ರಕಟಿಸಿದೆ.

ಥಾಮಾ ಚಿತ್ರವು ಮಂಗಳವಾರ ದೇಶದಾದ್ಯಂತ ಚಿತ್ರಮಂದಿರಗಳಲ್ಲಿ ಬಿಡುಗಡೆಯಾಗಿದೆ. ಮ್ಯಾಡಾಕ್ ಫಿಲ್ಮ್ಸ್ ತನ್ನ ಅಧಿಕೃತ ಸಾಮಾಜಿಕ ಮಾಧ್ಯಮ ಖಾತೆಗಳಲ್ಲಿ ಚಿತ್ರದ ಬಾಕ್ಸ್ ಆಫೀಸ್ ಕಲೆಕ್ಷನ್ ಕುರಿತು ಮಾಹಿತಿ ನೀಡಿದೆ.

'ಬಾಕ್ಸ್ ಆಫೀಸ್ ಥಾಮಾದಿಂದ ತುಂಬಿದೆ! ಈ ರೋಮಾಂಚನ ನಿಜ' ಎಂದು ಸ್ಟುಡಿಯೋ ಬರೆದಿದ್ದು, ಪೋಸ್ಟರ್‌ನಲ್ಲಿ ಚಿತ್ರವು ಮೊದಲ ದಿನ ಗಲ್ಲಾಪೆಟ್ಟಿಗೆಯಲ್ಲಿ 25.11 ಕೋಟಿ ರೂ. ಗಳಿಸಿದೆ ಎಂದು ಹೇಳಲಾಗಿದೆ.ಚಿತ್ರದಲ್ಲಿ ಪತ್ರಕರ್ತ ಅಲೋಕ್ ಗೋಯಲ್ ಪಾತ್ರದಲ್ಲಿ ಆಯುಷ್ಮಾನ್ ಖುರಾನಾ ನಟಿಸಿದ್ದು, ತಡಕಾ ಪಾತ್ರದಲ್ಲಿ ನಟಿ ರಶ್ಮಿಕಾ ಮಂದಣ್ಣ ನಟಿಸಿದ್ದಾರೆ. ಯಕ್ಷಸನ್ ಪಾತ್ರದಲ್ಲಿ ನವಾಜುದ್ದೀನ್ ಸಿದ್ದಿಕಿ, ಅಲೋಕ್‌ನ ಪೋಷಕರ ಪಾತ್ರದಲ್ಲಿ ಪರೇಶ್ ರಾವಲ್ ಮತ್ತು ಗೀತಾ ಅಗರ್ವಾಲ್ ಶರ್ಮಾ ಕೂಡ ನಟಿಸಿದ್ದಾರೆ.

## ಸರಣಿ ರಸ್ತೆ ಅಪಘಾತ : ನಾಲ್ವರು ಸ್ಥಳದಲ್ಲೇ ಸಾವು

**ಕಲಬುರಗಿ:** ಬೈಕ್ ಮತ್ತು ಕಾರಿಗೆ ಟ್ಯಾಂಕರೊಂದು ಡಿಕ್ಕಿಯಾಗಿ ಸಂಭವಿಸಿದ ಭೀಕರ ಸರಣಿ ಅಪಘಾತದಲ್ಲಿ ನಾಲ್ವರು ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ಕಲಬುರಗಿ ತಾಲೂಕಿನ ಔರಾದ್(ಬಿ) ಗ್ರಾಮದ ಬಳಗ್ರಾಮದ ಬಳಿ ಶುಕ್ರವಾರ ರಾತ್ರಿ ನಡೆದಿದೆ.

ಮೃತರನ್ನು ಕಮಲಾಪುರ ತಾಲ್ಲೂಕಿನ ಶಿರಡೋಣ ಗ್ರಾಮದ ನಾಗೇಂದ್ರಪ್ಪ (33), ಶಿವರಾಜ್(32), ಬೀದರ್ ಜಿಲ್ಲೆಯ ಭಾಲ್ಕಿ ತಾಲೂಕಿನ ಚಂದ್ರಕಲಾ(70) ಹಾಗೂ ದತ್ತಾತ್ರೇಯ(48) ಎಂದು ಗುರುತಿಸಲಾಗಿದೆ.

ಅಪಘಾತದಲ್ಲಿ ಉತ್ತಮ (36) ಹಾಗೂ ಸುದೇಶ್ನಾ ಎಂಬುವವರು ಗಾಯಗೊಂಡಿದ್ದಾರೆ.

ಹುಮನಾಬಾದ್ ಕಡೆಗೆ ಹೋಗುತ್ತಿದ್ದ ಬೈಕ್ ಹಾಗೂ ಕಾರಿಗೆ ಹುಮನಾಬಾದ್ ಕಡೆಯಿಂದ ಕಲಬುರಗಿ ಕಡೆಗೆ ಹೋಗುತ್ತಿದ್ದ ಟ್ಯಾಂಕರ್ ಡಿಕ್ಕಿ ಹೊಡೆದಿದ್ದು, ಸ್ಥಳದಲ್ಲೇ ಬೈಕ್‌ನಲ್ಲಿದ್ದ ಇಬ್ಬರು ಸವಾರರು ಮತ್ತು ಕಾರಿನಲ್ಲಿದ್ದ ಮತ್ತಿಬ್ಬರು ಮೃತಪಟ್ಟಿದ್ದಾರೆ ಎಂದು ತಿಳಿದು ಬಂದಿದೆ. ಈ ಬಗ್ಗೆ ಕಲಬುರಗಿ ಸಂಚಾರಿ ಠಾಣೆ-2ರಲ್ಲಿ ಪ್ರಕರಣ ದಾಖಲಾಗಿದೆ.

# ಬಸ್ಸೇ ಕಾಣದ ಊರಿಗೆ ಸರ್ಕಾರಿ ಬಸ್ ಸೌಲಭ್ಯ

## ಸರ್ಕಾರಿ ಬಸ್ ಚಲಾಯಿಸುವ ಮೂಲಕ ಸಂಚಾರಕ್ಕೆ ಚಾಲನೆ : ಶಾಸಕ ಕೆ.ಎಸ್. ಬಸವಂತಪ್ಪ

**ದಾವಣಗೆರೆ:** ಸರ್ಕಾರಿ ಬಸ್ಸೇ ಕಾಣದ ಊರಿಗೆ ಶಾಸಕ ಕೆ.ಎಸ್. ಬಸವಂತಪ್ಪ ಸರ್ಕಾರಿ ಬಸ್ ಸೌಲಭ್ಯ ಕಲ್ಪಿಸಿ ಸಂಚಾರಕ್ಕೆ ಚಾಲನೆ ನೀಡುವ ಮೂಲಕ ವಡೇರಹಳ್ಳಿ, ಕಳವೂರು ಗ್ರಾಮಸ್ಥರ ಕೃತಜ್ಞತೆಗೆ ಪಾತ್ರರಾದರು.

ಮಾಯಕೊಂಡ ಕ್ಷೇತ್ರದ ವ್ಯಾಪ್ತಿಯ ವಡೇರಹಳ್ಳಿ ಮತ್ತು ಕಳವೂರು ಗ್ರಾಮಗಳಿಗೆ ಇತಿಹಾಸದಲ್ಲಿಯೇ ರಾಜ್ಯ ರಸ್ತೆ ಸಾರಿಗೆ ಬಸ್ ಸೌಲಭ್ಯ ಇರಲಿಲ್ಲ. ಕಳೆದ ಹಲವಾರು ವರ್ಷಗಳಿಂದ ಈ ಗ್ರಾಮಗಳ ಗ್ರಾಮಸ್ಥರಿಂದ ಬೇಡಿಕೆ ಇತ್ತು. ಹಿಂದಿನ ಜನ ಪ್ರತಿನಿಧಿಗಳು ಗ್ರಾಮಸ್ಥರ ಕೂಗಿಗೆ ಸ್ಪಂದಿಸಿರಲಿಲ್ಲ. ಆದರೆ ಶಾಸಕ ಕೆ.ಎಸ್. ಬಸವಂತಪ್ಪ, ಈ ಗ್ರಾಮಗಳಿಗೆ ಬಸ್ ಸೌಲಭ್ಯ ಕಲ್ಪಿಸಿ ಇಂದು ಸ್ವತಃ ಬಸ್ ಚಲಾಯಿಸುವ ಮೂಲಕ ಸಂಚಾರಕ್ಕೆ ಚಾಲನೆ ನೀಡಿದರು. ಬಳಿಕ



ಗ್ರಾಮಸ್ಥರೊಂದಿಗೆ ಬಸ್ಸಿನಲ್ಲಿ ಪ್ರಯಾಣ ಬೆಳೆಸಿದರು.

ದಾವಣಗೆರೆ-ಕಳವೂರು-ವಡೇರಹಳ್ಳಿ-ಮಾಯಕೊಂಡ-ಹುಚ್ಚವ್ವನಹಳ್ಳಿ-ಬಸಾಪುರ-ಗಂಜಿಗಟ್ಟೆ ಗ್ರಾಮಗಳ ಮಾರ್ಗದಲ್ಲಿ ಸಂಚರಿಸಿ ಪುನಃ ಇದೇ ಮಾರ್ಗದಲ್ಲಿ ದಾವಣಗೆರೆಗೆ ಬರಲಿದೆ.

ಶಾಲಾ ಮಕ್ಕಳಿಂದ ಶಾಸಕರಿಗೆ ಅದ್ದೂರಿ ಸ್ವಾಗತ: ಕಳೆದ 40 ವರ್ಷಗಳಿಂದ ಗ್ರಾಮಕ್ಕೆ ಸರ್ಕಾರಿ ಬಸ್ ಸೌಲಭ್ಯವಿಲ್ಲದೆ ಪರಿತಪಿಸುತ್ತಿದ್ದ ಗ್ರಾಮಸ್ಥರು, ಮಹಿಳೆಯರು, ಶಾಲಾ ಮತ್ತು ಕಾಲೇಜು ವಿದ್ಯಾರ್ಥಿಗಳು ಬಹಳ ತೊಂದರೆ ಅನುಭವಿಸುತ್ತಿದ್ದರು.

ಇದನ್ನು ಮನಗಂಡು ಶಾಸಕ ಕೆ.ಎಸ್. ಬಸವಂತಪ್ಪ, ಗ್ರಾಮಕ್ಕೆ ಸರ್ಕಾರಿ ಬಸ್ ಸೌಲಭ್ಯ ಕಲ್ಪಿಸಿ ಚಾಲನೆ ನೀಡಲು ಆಗಮಿಸಿದ್ದಾಗ ಹರ್ಷಗೊಂಡ ಶಾಲಾ ಮಕ್ಕಳು, ಗ್ರಾಮಸ್ಥರು ಶಾಸಕರಿಗೆ ಅದ್ದೂರಿ ಸ್ವಾಗತ ನೀಡಿದರು. ಈ ಗ್ರಾಮದಲ್ಲಿ ಅಲ್ಪಸಂಖ್ಯಾತರ ಮೊರಾರ್ಜಿ ವಸತಿ ಶಾಲೆ, ಪರಿಶಿಷ್ಟ ಜಾತಿ ಮೊರಾರ್ಜಿ ವಸತಿ ಶಾಲೆ ಮತ್ತು ಪರಿಶಿಷ್ಟ ಪಂಗಡ ಶಾಲೆ ಇರುವುದರಿಂದ ಅಕ್ಕಪಕ್ಕದ ಗ್ರಾಮಗಳ ಮಕ್ಕಳು ಶಾಲೆಗಳಿಗೆ ಹೋಗಿ ಬರಲು ಸರ್ಕಾರಿ ಬಸ್ ಸೌಲಭ್ಯ ಇಲ್ಲದೆ ದ್ವಿಚಕ್ರ ವಾಹನ, ಆಪೆ ಆಟೋಗಳು ಮೊರೆ ಹೋಗಿದ್ದರು. ಅಲ್ಲದೇ ಕೆಲವು ಮಕ್ಕಳು ಪ್ರತಿನಿತ್ಯ ಹಣವಿಲ್ಲದೆ ನಡೆದುಕೊಂಡು ಹೋಗಿ ಬರುವ ಪರಿಸ್ಥಿತಿ ನಿರ್ಮಾಣವಾಗಿತ್ತು.

ಮಾತ್ರವಲ್ಲ, ಸರ್ಕಾರಿ ನೌಕರರು, ಕೂಲಿ ಕಾರ್ಮಿಕರು, ಮಹಿಳೆಯರು, ವೃದ್ಧರು ನಗರ ಪ್ರದೇಶಗಳಿಗೆ ಹೋಗಿ ಬರಲು ಸಮಸ್ಯೆ ಆಗಿತ್ತು. ಈಗ ಸರ್ಕಾರಿ ಬಸ್ ಸೌಲಭ್ಯ ಕಲ್ಪಿಸಿರುವುದರಿಂದ ಗ್ರಾಮಸ್ಥರಿಗೆ ಅನುಕೂಲವಾಗಿದೆ.

# ಕೃಷಿಕ ಸಮಾಜ ರೈತರ ಸಮಸ್ಯೆ ಬಿಂಬಿಸುವ ಸಂಪರ್ಕ ಕೊಂಡಿ

## ಬಳ್ಳಾರಿ: ಕೃಷಿಕ ಸಮಾಜದ ನೂತನ ಕಟ್ಟಡ ಉದ್ಘಾಟನೆ ನೆರವೇರಿಸಿ ಸಚಿವ ಎನ್.ಚಲುವರಾಯ ಸ್ವಾಮಿ ಅಭಿಮತ

**ಬಳ್ಳಾರಿ :** ರೈತರ ಸಮಸ್ಯೆಗಳನ್ನು ಕೃಷಿ ಇಲಾಖೆಯ ಮೂಲಕ ಸರ್ಕಾರದ ಗಮನ ಸೆಳೆಯುವ ಸಂಪರ್ಕ ಕೊಂಡಿಯಾಗಿ ಕೃಷಿಕ ಸಮಾಜವು ಕೆಲಸ ನಿರ್ವಹಿಸುತ್ತಿದೆ ಎಂದು ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಅವರು ಹೇಳಿದರು.

ಜಿಲ್ಲಾ ಕೃಷಿ ಇಲಾಖೆ ಮತ್ತು ಕೃಷಿಕ ಸಮಾಜ ಇವರ ಸಹಯೋಗದಲ್ಲಿ ನಗರದ ಹಳೇ ತಾಲ್ಲೂಕು ಕಚೇರಿ ಆವರಣದಲ್ಲಿ ಶನಿವಾರ ಏರ್ಪಡಿಸಿದ್ದ ಬಳ್ಳಾರಿ ಘಟಕ ಕೃಷಿಕ ಸಮಾಜದ ನೂತನ ಕಟ್ಟಡದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ಸ್ವತಂತ್ರ ಪೂರ್ವದಲ್ಲೇ ಪ್ರಾರಂಭವಾದ ಕೃಷಿಕ ಸಮಾಜವು ತನ್ನದೇ ಆದ ಇತಿಹಾಸ ಹೊಂದಿದೆ. ರೈತರ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತಿರುವ ಅವರಿಗಾಗಿ ರಾಜ್ಯದ ಎಲ್ಲಾ ಜಿಲ್ಲೆ ಮತ್ತು ತಾಲ್ಲೂಕು ಮಟ್ಟದಲ್ಲಿಯೂ ಕೃಷಿಕ ಸಮಾಜ ಕಟ್ಟಡ ನಿರ್ಮಿಸಲಾಗುತ್ತಿದೆ ಎಂದು ತಿಳಿಸಿದರು.

ಎಲ್ಲಾ ಇಲಾಖೆಗಳಿಗಿಂತಲೂ ಕೃಷಿ ಇಲಾಖೆಯು ವಿಶಿಷ್ಟವಾಗಿದೆ. ಲೆಸ್ಲಿ ಚಾರ್ಲ್ಸ್ ಕೋಲ್ಮನ್ ಎಂಬುವವರು ಸ್ವತಂತ್ರ ಪೂರ್ವದಲ್ಲಿ ರಾಜ್ಯದ ಕೃಷಿ ಇಲಾಖೆಯ ಮೊದಲ ನಿರ್ದೇಶಕರಾಗಿ ಕೆಲಸ ಮಾಡಿದ್ದರು. ಕೃಷಿಕ ಸಮಾಜ ಸ್ಥಾಪಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ರಾಜ್ಯದ 36 ತಾಲ್ಲೂಕುಗಳಲ್ಲಿ ಕೃಷಿಕ ಸಮಾಜದ ಕಟ್ಟಡ ನಿರ್ಮಾಣಕ್ಕೆ ನಿವೇಶನವಿದ್ದು, 32 ತಾಲ್ಲೂಕುಗಳಲ್ಲಿ ಕಟ್ಟಡ ನಿರ್ಮಾಣ ಮಾಡಲಾಗಿದೆ. ತಾಲ್ಲೂಕು ಮಟ್ಟದಲ್ಲಿ ಕಟ್ಟಡ ನಿರ್ಮಾಣಕ್ಕೆ 27 ಲಕ್ಷ ಮತ್ತು ಜಿಲ್ಲಾ ಮಟ್ಟದಲ್ಲಿ 50 ಲಕ್ಷ ರೂ. ನೀಡಲು ನಿರ್ಧರಿಸಲಾಗಿದೆ ಎಂದರು.

ಕೃಷಿಕ ಸಮಾಜವು ರಾಷ್ಟ್ರಮಟ್ಟದಲ್ಲಿ ಎಲ್ಲಾ ರಾಜ್ಯದಲ್ಲಿಯೂ ಒಳಗೊಂಡಿದ್ದು, ನಮ್ಮ ರಾಜ್ಯದಲ್ಲಿ ಸರ್ಕಾರದೊಂದಿಗೆ ಸದಾ ಸಂಪರ್ಕದಲ್ಲಿದ್ದುಕೊಂಡು ಅತ್ಯಂತ ಚುರುಕಾಗಿ, ಉತ್ಸಾಹಿಯಾಗಿ ಕೆಲಸ ನಿರ್ವಹಿಸುತ್ತಿದೆ ಎಂದು ತಿಳಿಸಿದ ಸಚಿವರು, ಮಾಜಿ ಲೋಕಸಭಾ ಸದಸ್ಯರಾದ ಬಸವರಾಜೇಶ್ವರಿ ಅವರು, ಕಟ್ಟಡ ನಿರ್ಮಾಣಕ್ಕಾಗಿ ಸಾಕಷ್ಟು ಶ್ರಮಿಸಿದ್ದಾರೆ. ಹಾಗಾಗಿ ರಾಜ್ಯ ಮಟ್ಟದ ಕೃಷಿಕ ಸಮಾಜಕ್ಕೆ ಅವರ ಹೆಸರಿನ್ನಿಡಲಾಗಿದೆ ಎಂದು ತಿಳಿಸಿದರು.

ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ರಾಜ್ಯದಲ್ಲಿ ರೈತರನ್ನು ತಾರತಮ್ಯ ಮಾಡುತ್ತಿಲ್ಲ; ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಸರ್ಕಾರವು ರೈತರ ಪರ ಕಾಳಜಿ ಹೊಂದಿದೆ. ಕೊಟ್ಟ ಮಾತಿನಂತೆ ಎಲ್ಲಾ ಸಚಿವರು, ಶಾಸಕರ ಸಹಕಾರದಲ್ಲಿ ಶೀಘ್ರದಲ್ಲಿ ಹೊಸಪೇಟೆಯಲ್ಲಿ ಸಕ್ಕರೆ ಕಾರ್ಖಾನೆ ಸ್ಥಾಪಿಸಲಾಗುವುದು. ಇದರಿಂದ ಹೊಸಪೇಟೆ, ಬಳ್ಳಾರಿ, ಕಂಪ್ಲಿ ಮತ್ತು ಹಗರಿ ಬೊಮ್ಮನಹಳ್ಳಿ ಭಾಗದ ರೈತರಿಗೆ ಅನುಕೂಲವಾಗಲಿದೆ.



ರೈತರನ್ನು ಸಮಾನ ದೃಷ್ಟಿಯಿಂದ ಕಾಣುವ ಏಕೈಕ ಸರ್ಕಾರ ನಮ್ಮದಾಗಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಬಳ್ಳಾರಿ ಲೋಕಸಭಾ ಸಂಸದ ಈ.ತುಕಾರಾಂ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿ, ಅಖಂಡ ಬಳ್ಳಾರಿ ಜಿಲ್ಲೆಯ 08 ತಾಲ್ಲೂಕುಗಳಲ್ಲಿ ಸಂಸದರ ಅನುದಾನದಲ್ಲಿ ಪ್ರತಿ ತಾಲ್ಲೂಕಿಗೆ 02 ಲಕ್ಷ ರೂ. ಮೌಲ್ಯದ ಅತ್ಯಾಧುನಿಕ ಕಂಪ್ಯೂಟರ್, ಪ್ರೊಜೆಕ್ಟರ್‌ಗಳನ್ನು ರೈತ ಸಂಪರ್ಕ ಕೇಂದ್ರಗಳಿಗೆ ನೀಡಲಾಗಿದೆ. ಇದರಿಂದ ವೈಜ್ಞಾನಿಕ ಬೆಳೆ ಪದ್ಧತಿ, ಸಾವಯವ ಕೃಷಿ ಪದ್ಧತಿ ಅಳವಡಿಸಿಕೊಳ್ಳುವುದರ ಕುರಿತು ರೈತರಿಗೆ ತರಬೇತಿ ನೀಡಲು ಅನುಕೂಲವಾಗಲಿದೆ. ಮುಂದಿನ ದಿನಗಳಲ್ಲಿ ನಮ್ಮಲ್ಲಿ ಲಭ್ಯವಿರುವ ಅನುದಾನವನ್ನು ಬಳಸಿಕೊಂಡು ರೈತರನ್ನು ಮುನ್ನೆಲೆಗೆ ತರಲು ಹಾಗೂ ನಾಡನ್ನು ಕಟ್ಟುವ ಕೆಲಸ ಮಾಡೋಣ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಇತ್ತೀಚಿಗೆ ಸುರಿದ ಮಳೆಯಿಂದಾಗಿ ಕಂಪ್ಲಿ, ಕುರುಗೋಡು, ಸಿರುಗುಪ್ಪ ಭಾಗಗಳಲ್ಲಿ ಭತ್ತದ ಬೆಳೆಯು ಹಾನಿಯಾಗಿದ್ದು, ಸಮೀಕ್ಷೆ ನಡೆಸಿ ಸೂಕ್ತ ಪರಿಹಾರ ನೀಡುವಂತೆ ಮತ್ತು ಜಿಲ್ಲೆಯಲ್ಲಿ ಜೋಳ ಖರೀದಿ ಕೇಂದ್ರಗಳನ್ನು ಆರಂಭಿಸಬೇಕು ಎಂದು ಸಚಿವರಿಗೆ ಮನವಿ ಮಾಡಿದರು.

ಬಳ್ಳಾರಿ ಜಿಲ್ಲೆಯು 2,81,522 ಎಕರೆ ಕೃಷಿ ಭೂಮಿ ಹೊಂದಿದ್ದು, 1,05,517 ಎಕರೆ ಮಳೆಯಾಧಾರಿತ ಪ್ರದೇಶ, 1,76,005 ಎಕರೆ ನೀರಾವರಿ ಪ್ರದೇಶವಿದ್ದು, ಈ ಬಾರಿಯಂತೆ ಮುಂದಿನ ವರ್ಷದಲ್ಲಿಯೂ ಸಹ ಉತ್ತಮ ಮಳೆ, ಬೆಳೆಯಾಗಿ ನಾಡು, ನಮ್ಮ ಜಿಲ್ಲೆ ಸಮೃದ್ಧಿಯಾಗಬೇಕು ಎಂದು ಆಶಿಸಿದರು.

ಜಂಟಿ ಕೃಷಿ ನಿರ್ದೇಶಕ ಸೋಮಸುಂದರ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಜಿಲ್ಲೆ ಮತ್ತು ತಾಲ್ಲೂಕು ಮಟ್ಟದಲ್ಲಿ ಕಂಡುಬರುವ ಕೃಷಿಗೆ ಸಂಬಂಧಿಸಿದಂತೆ ರೈತರ ಸಮಸ್ಯೆಗಳನ್ನು ರಾಜ್ಯ ಮಟ್ಟದ ಕಾರ್ಯಕಾರಿಣಿ ಸಮಿತಿಯ ಸಭೆಯಲ್ಲಿ ಚರ್ಚಿಸಿ ಸರ್ಕಾರದ ಗಮನ ಸೆಳೆಯುವ ಕಾರ್ಯವು ಕೃಷಿಕ ಸಮಾಜದ್ದಾಗಿದೆ ಎಂದು ಹೇಳಿದರು.

ಜಿಲ್ಲಾ ಕೃಷಿಕ ಸಮಾಜದಲ್ಲಿ 10 ಜನ ನಿರ್ದೇಶಕ ಮಂಡಳಿಯ ಸದಸ್ಯರಿದ್ದು, ಎಲ್ಲರ ಪ್ರಯತ್ನದಿಂದ 1984 ರಲ್ಲಿ ಜಿಲ್ಲಾಧಿಕಾರಿಯವರಿಂದ 10,368 ಚದರ ಅಡಿ ನಿವೇಶನ ಪಡೆದುಕೊಂಡು 2020 ರಲ್ಲಿ ಕಟ್ಟಡ ನಿರ್ಮಾಣಕ್ಕೆ ಸಭೆಯಲ್ಲಿ ತೀರ್ಮಾನಿಸಿ, 2022ರಲ್ಲಿ ಕೃಷಿಕ ಸಮಾಜದ ಕಟ್ಟಡ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಲಾಯಿತು. ಬಳಿಕ 2025 ರಲ್ಲಿ ರೂ.1 ಕೋಟಿ ರೂ. ಅಧಿಕ ವೆಚ್ಚದ ಕಟ್ಟಡ ನಿರ್ಮಾಣಗೊಂಡು ಉದ್ಘಾಟನೆಗೊಂಡಿದೆ ಎಂದು ವಿವರಿಸಿದರು.

ಕಾರ್ಯಕ್ರಮದಲ್ಲಿ ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಬಳ್ಳಾರಿ ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷ ಗಾದೆಪ್ಪ, ಉಪಾಧ್ಯಕ್ಷರಾದ ಎಸ್.ಕೆ ವಿಶಾಲಾಕ್ಷಿ ಕುಮಾರಸ್ವಾಮಿ, ಕೃಷಿಕ ಸಮಾಜದ ರಾಜ್ಯ ಪ್ರತಿನಿಧಿ ಸುರೇಶ್ ನಂದಿ.ಪಿ., ಉಪ ಕೃಷಿ ನಿರ್ದೇಶಕ ಮಂಜುನಾಥ್ ಎಸ್.ಎನ್ ಸೇರಿದಂತೆ ಪಾಲಿಕೆ ಸದಸ್ಯರು, ಕೃಷಿ ಸಮಾಜದ ವಿವಿಧ ತಾಲ್ಲೂಕುಗಳ ಅಧ್ಯಕ್ಷರು ಮತ್ತು ಉಪಾಧ್ಯಕ್ಷರು, ಎಲ್ಲಾ ರೈತ ಮತ್ತು ಸಂಘ-ಸಂಸ್ಥೆಗಳು, ಪ್ರಗತಿಪರ ರೈತರು ಮತ್ತು ರೈತ ಮಹಿಳೆಯರು, ಸಾರ್ವಜನಿಕರು ಹಾಗೂ ಇತರರು ಉಪಸ್ಥಿತರಿದ್ದರು.

## ಇಂದು ಜಿಲ್ಲಾ ಮಟ್ಟದ ಮೇಲಾಟಗಳ ಕ್ರೀಡಾಕೂಟ

**ದಾವಣಗೆರೆ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಉಪನಿರ್ದೇಶಕರ ಕಛೇರಿ (ಆಡಳಿತ) ಶಾಲಾ ಶಿಕ್ಷಣ ಇಲಾಖೆ ಮತ್ತು ಕರ್ನಾಟಕ ರಾಜ್ಯ ದೈಹಿಕ ಶಿಕ್ಷಣ ಶಿಕ್ಷಕರ ಸಂಘ, ದಾವಣಗೆರೆ ಇವರ ಸಂಯುಕ್ತಾಶ್ರಯದಲ್ಲಿ 2025-26ನೇ ಸಾಲಿನ 14 ಮತ್ತು 17 ವಯೋಮಿತಿಯೊಳಗಿನ ಬಾಲಕ ಮತ್ತು ಬಾಲಕಿಯರ ಜಿಲ್ಲಾ ಮಟ್ಟದ ಮೇಲಾಟಗಳ ಕ್ರೀಡಾಕೂಟ ಹಾಗೂ ವಿಶೇಷ ಚೇತನ ಮಕ್ಕಳ ಕ್ರೀಡಾಕೂಟದ ಉದ್ಘಾಟನಾ ಸಮಾರಂಭವು ನ.11 ಮತ್ತು 12ರಂದ ಇಲ್ಲಿನ ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗಲಿದೆ.

ನ.11ರಂದು ಬೆಳಿಗ್ಗೆ 10-30 ಗಂಟೆಗೆ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಸಮಾರಂಭದ ಉದ್ಘಾಟನೆ ನೆರವೇರಿಸಲಿದ್ದು, ಅಧ್ಯಕ್ಷತೆಯನ್ನು ಶಾಸಕ ಡಾ. ಶಾಮನೂರು ಶಿವಶಂಕರಪ್ಪ ವಹಿಸಲಿದ್ದಾರೆ. ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಘನ ಉಪಸ್ಥಿತಿ ಸಮಾರಂಭಕ್ಕಿದೆ. ಮುಖ್ಯ ಅತಿಥಿಗಳಾಗಿ ವಿಪ ಸದಸ್ಯರುಗಳಾದ ಎಸ್.ಎಲ್. ಭೋಜೇಗೌಡ, ಡಿ.ಟಿ. ಶ್ರೀನಿವಾಸ್, ಡಿ.ಎಸ್. ಅರುಣ್, ಡಾ. ಧನಂಜಯ್ ಸರ್ಜಿ, ಚಿದಾನಂದ ಎಂ. ಗೌಡ, ಕೆ.ಎಸ್. ನವೀಬ್, ಕೆ. ಅಬ್ದುಲ್ ಜಬ್ಬಾರ್ ಹಾಗೂ ಜಿಲ್ಲೆಯ ಶಾಸಕರುಗಳಾದ ಡಿ.ಜಿ. ಶಾಂತನಗೌಡ, ಬಸವರಾಜು ವಿ. ಶಿವಗಂಗಾ, ಬಿ. ದೇವೇಂದ್ರಪ್ಪ, ಬಿ.ಪಿ. ಹರೀಶ್, ಕೆ.ಎಸ್. ಬಸವಂತಪ್ಪ, ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಅಸಗೋಡು ಜಯಸಿಂಹ, ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಎನ್. ಜಯದೇವನಾಯ್ಕ್, ದೂಡಾ ಅಧ್ಯಕ್ಷ ದಿನೇಶ್. ಕೆ ಶೆಟ್ಟಿ, ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ಅಧ್ಯಕ್ಷ ಹೆಚ್.ಬಿ. ಮಂಜಪ್ಪ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಶಾಮನೂರು ಟಿ. ಬಸವರಾಜ್ ಭಾಗವಹಿಸಲಿದ್ದಾರೆ. ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ, ಜಿಪಂ ಸಿಇಓ ಗಿತ್ತೆ ಮಾಧವ್ ವಿಠಲ್ ರಾವ್, ಉಮಾ ಪ್ರಶಾಂತ್ ಮತ್ತಿತರರು ಗೌರವ ಉಪಸ್ಥಿತರಿರಲಿದ್ದಾರೆ.

## ರಾಜ್ಯದ ಎಲ್ಲಾ ಶಾಲೆಗಳು ಮತ್ತು ಶೈಕ್ಷಣಿಕ ಸಂಸ್ಥೆಗಳಲ್ಲಿ 'ವಂದೇ ಮಾತರಂ' ಗಾಯನ ಕಡ್ಡಾಯ: ಯೋಗಿ ಘೋಷಣೆ



ಲಕ್ನೋ : ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು ರಾಜ್ಯದ ಎಲ್ಲಾ ಶಾಲೆಗಳು ಮತ್ತು ಶೈಕ್ಷಣಿಕ ಸಂಸ್ಥೆಗಳಲ್ಲಿ 'ವಂದೇ ಮಾತರಂ' ಗಾಯನವನ್ನು ಕಡ್ಡಾಯಗೊಳಿಸುವುದಾಗಿ ಘೋಷಿಸಿದ್ದಾರೆ. ಈ ನಿರ್ಧಾರವು ದೇಶದ ಬಗ್ಗೆ ಗೌರವ ಮತ್ತು ಹೆಮ್ಮೆಯನ್ನು ಮೂಡಿಸುವ ಉದ್ದೇಶವನ್ನು ಹೊಂದಿದೆ ಎಂದಿದ್ದಾರೆ.

ಗೋರ್ಖ್‌ಪುರದಲ್ಲಿ ನಡೆದ 'ಏಕ್ತಾ ಯಾತ್ರೆ' ಮತ್ತು ವಂದೇ ಮಾತರಂ ಸಾಮೂಹಿಕ ಗಾಯನ ಕಾರ್ಯಕ್ರಮದಲ್ಲಿ ಮಾತನಾಡಿದ ಮುಖ್ಯಮಂತ್ರಿ ಆದಿತ್ಯನಾಥ್, ರಾಷ್ಟ್ರಗೀತೆ 'ವಂದೇ ಮಾತರಂ' ಬಗ್ಗೆ ಗೌರವ ಇರಬೇಕು. ಉತ್ತರ ಪ್ರದೇಶದ ಪ್ರತಿ ಶಾಲೆ ಮತ್ತು ಶೈಕ್ಷಣಿಕ ಸಂಸ್ಥೆಯಲ್ಲಿ ಇದರ ಗಾಯನವನ್ನು ಕಡ್ಡಾಯಗೊಳಿಸಲಾಗುವುದು ಎಂದು ಹೇಳಿದರು.

# ಜನರನ್ನು ಕಚೇರಿಗೆ ಅಲೆದಾಡಿಸಿದರೆ ಸಹಿಸಲ್ಲ: ಸಿಎಂ

**ಮೈಸೂರು:** ಜನರನ್ನು ಸರ್ಕಾರಿ ಕಚೇರಿಗಳಿಗೆ ಅಲೆದಾಡಿಸುವುದು ಅಕ್ಷಮ್ಯ. ಜನರನ್ನು ಅಲೆದಾಡಿಸುವುದನ್ನು ನಾನು ಸಹಿಸಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ಚಾಟಿ ಬೀಸಿದರು.

ಮೈಸೂರು ಜಿಲ್ಲಾ ಕೆಡಿಪಿ ಸಭೆಯಲ್ಲಿ ಮಾತನಾಡಿದ ಅವರು, ಸರ್ಕಾರಿ ಅಧಿಕಾರಿ ಮತ್ತು ನೌಕರರು ಜನ ಸೇವೆಯ ಪ್ರಮಾಣ ಮಾಡಿ ಹುದ್ದೆ ಸ್ವೀಕರಿಸಿದ್ದೀರಿ. ಜನರನ್ನು ಅಲೆದಾಡಿಸಬೇಡಿ. ಇದನ್ನು ನಾನು ಸಹಿಸಲ್ಲ ಎಂದು ಗುಡುಗಿದರು.

ಅಧಿಕಾರಿಗಳು ಜಿಲ್ಲಾ ಮಟ್ಟದಲ್ಲೇ ಏಕೆ ಇರಬೇಕು, ಅದೇ ಊರಲ್ಲೇ ಮನೆ ಮಾಡಿ ಜನರ ಸಮಸ್ಯೆ ಕೇಳಿ ಎಂದು ಸೂಚಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಈ ಹಿಂದೆ ನಾನು ಎಲ್ಲಾ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಸಂಬಂಧಿಸಿದ ತಾಲ್ಲೂಕುಗಳಲ್ಲೇ ವಾಸಿಸುವಂತೆ ಸೂಚನೆ ನೀಡಿದ್ದೆ. ಇದನ್ನು ಪಾಲಿಸದ



ಅಧಿಕಾರಿಗಳ ಬಗ್ಗೆ ವರದಿ ನೀಡಿ ಎಂದು ಜಿಲ್ಲಾಧಿಕಾರಿಗಳಿಗೆ ಸೂಚಿಸಿದರು.

ವರ್ಗಾವಣೆಗೆ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ನಮಗೆ ಹತ್ತಿರದ ಕಾರ್ಯಕರ್ತರನ್ನು ಹಿಡಿದುಕೊಂಡು ಬರುತ್ತೀರಿ. ಇದು ಕೆಟ್ಟ ನಡವಳಿಕೆ, ಇದನ್ನು ಸಹಿಸುವುದಿಲ್ಲ ಎಂದು ಗರಂ ಆದ ಅವರು, ಇದರಿಂದ ಕಾರ್ಯಕರ್ತರಿಗೂ ಕೆಟ್ಟ ಹೆಸರು, ಸರ್ಕಾರಕ್ಕೂ ಕೆಟ್ಟ ಹೆಸರು ಎಂದರು. ಇಂದಿನ ಕೆಡಿಪಿ ಸಭೆಗೆ ಹಾಜರಾಗದ ಅಧಿಕಾರಿಗಳು ಹಾಗೂ ನೌಕರರ ವಿರುದ್ಧ ಕ್ರಮ ಕೈಗೊಳ್ಳುವಂತೆಯೂ ಮುಖ್ಯಮಂತ್ರಿಗಳು ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದರು.

ನಾವು 5 ವರ್ಷಕ್ಕೊಮ್ಮೆ ಬರುವವರು. ಅಧಿಕಾರಿಗಳು ಶಾಶ್ವತವಾಗಿ ಇರುವವರು ಎನ್ನುವ ಭಾವನೆ ಬಿಟ್ಟು ಕೆಲಸ ಮಾಡಿ ಎಂದು ಅವರು ಅಧಿಕಾರಿಗಳಿಗೆ ತಾಕೀತು ಮಾಡಿದರು.

ಶಿಕ್ಷಣ ಸೂಚ್ಯಂಕದಲ್ಲಿ ಮೈಸೂರು ಜಿಲ್ಲೆ 7ನೇ ಸ್ಥಾನದಿಂದ 14ನೇ ಸ್ಥಾನಕ್ಕೆ ಕುಸಿದಿರುವುದಕ್ಕೆ ಅಸಮಾಧಾನ ವ್ಯಕ್ತಪಡಿಸಿದ ಅವರು, ಮೈಸೂರು ಅಭಿವೃದ್ಧಿಯ ವೇಗ ಹೆಚ್ಚಾಗಬೇಕು. ನಿಗದಿತ ಅವಧಿಯಲ್ಲಿ ಕೆಲಸಗಳು ಪೂರ್ಣಗೊಳ್ಳಬೇಕು ಎಂದು ಸೂಚಿಸಿದರು.

ಮೈಸೂರಿನ ಜನತೆ ನನ್ನನ್ನು ಹುಡುಕಿಕೊಂಡು ಬೆಂಗಳೂರಿಗೆ ಬರುತ್ತಾರೆ. ಇವರಲ್ಲಿ ವೈಯುಕ್ತಿಕ ಸಮಸ್ಯೆ ಇರುವವರು ಕಡಿಮೆ.

ಹೆಚ್ಚಾಗಿ ಕಂದಾಯ ಇಲಾಖೆಯ ಸಮಸ್ಯೆಗೆ ಬರುವವರು ಹೆಚ್ಚು. ಮೈಸೂರಿನಲ್ಲೇ ಅವರ ಕೆಲಸ ಆಗಿದ್ದರೆ, ಅವರು ಬೆಂಗಳೂರಿಗೆ ಬರುವ ಅಗತ್ಯ ಇರುತ್ತಿರಲಿಲ್ಲ. ಜನರನ್ನು ಅಲೆದಾಡಿಸುವುದು ಬೇಡ. ಅವರ ಸಮಸ್ಯೆಗಳನ್ನು ಬಗೆಹರಿಸಿ ಎಂದು ಹೇಳಿದರು.


# ವಿಮಾನ ನಿಲ್ದಾಣದಲ್ಲಿ ನಮಾಜ್: ವಿವಾದಕ್ಕೆಡೆ

**ಬೆಂಗಳೂರು:** ದೇವನಹಳ್ಳಿ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಟರ್ಮಿನಲ್‌ನಲ್ಲಿ ನಮಾಜ್ ಮಾಡಿರುವ ವಿಡಿಯೋ ವೈರಲ್ ಆಗಿರುವುದು ವಿವಾದಕ್ಕೆ ಎಡೆ ಮಾಡಿಕೊಟ್ಟಿದೆ.

ಬೆಂಗಳೂರಿನ ದೇವನಹಳ್ಳಿಯ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಟರ್ಮಿನಲ್-2 ಒಳಗಡೆ ಮುಸ್ಲಿಂ ಸಮುದಾಯದ ಕೆಲವರು ನಮಾಜ್ ಮಾಡುತ್ತಿರುವ ವಿಡಿಯೋ ವೈರಲ್ ಆಗಿದೆ. ಈ ನಮಾಜ್ ಸಂದರ್ಭದಲ್ಲಿ ವಿಮಾನ ನಿಲ್ದಾಣದ ಭದ್ರತೆ ನೋಡಿಕೊಳ್ಳುವ ಕೇಂದ್ರೀಯ ಭದ್ರತಾ ಪಡೆ ಯೋಧರು ಇರುವುದು ವಿಡಿಯೋದಲ್ಲಿ ಕಂಡು ಬಂದಿದೆ.

ಸಾರ್ವಜನಿಕ ಸ್ಥಳದಲ್ಲಿ ನಮಾಜ್‌ಗೆ ಅವಕಾಶ ಮಾಡಿಕೊಟ್ಟಿರುವುದುಕ್ಕೆ ರಾಜ್ಯ ಬಿಜೆಪಿ ಆಕ್ರೋಶ ವ್ಯಕ್ತಪಡಿಸಿದೆ.

ಅನುಮತಿ ಪಡೆದರೂ ಆರ್‌ಎಸ್‌ಎಸ್ ಪಥ ಸಂಚಲನಕ್ಕೆ



ಆಕ್ಷೇಪ ತೆಗೆಯುತ್ತಿರುವವರು ಅತ್ಯಂತ ಭದ್ರತಾ ಪ್ರದೇಶವಾದ ವಿಮಾನ ನಿಲ್ದಾಣದಲ್ಲಿ ನಮಾಜ್ ನಡೆಸಲು ಅವಕಾಶ ಕೊಟ್ಟಿದ್ದಾರೆ. ವಿಮಾನ ನಿಲ್ದಾಣದ ಒಳಗೆ ನಮಾಜ್ ಮಾಡಲು ಅನುಮತಿ ಇದೆಯೇ ಎಂದು ರಾಜ್ಯ ಬಿಜೆಪಿ ವಕ್ತಾರ ವಿಜಯ್ ಪ್ರಸಾದ್ ಸರ್ಕಾರವನ್ನು ಪ್ರಶ್ನಿಸಿದ್ದಾರೆ.

ವಿಮಾನ ನಿಲ್ದಾಣದಲ್ಲಿ ಮಾಡಿರುವ ನಮಾಜ್‌ನ್ನು ಮುಖ್ಯಮಂತ್ರಿ ಸಿದ್ಧರಾಮಯ್ಯ, ಸಚಿವ ಪ್ರಿಯಾಂಕ ಖರ್ಗೆ ಒಪ್ಪುವರೇ ಎಂದು ಅವರು ಪ್ರಶ್ನಿಸಿದ್ದಾರೆ.

ವಿಮಾನ ನಿಲ್ದಾಣದಲ್ಲಿ ನಮಾಜ್ ಮಾಡಲು ಇವರೆಲ್ಲ ಪೂರ್ವಾನುಮತಿ ಪಡೆದಿದ್ದಾರೆಯೇ ಎಂದು ಪಬಿಜೆಪಿ ವಕ್ತಾರರು ಪ್ರಶ್ನಿಸಿ, ಸೂಕ್ಷ್ಮ ವಲಯದಲ್ಲಿ ನಡೆದಿರುವ ಈ ಪ್ರಕರಣವನ್ನು ಸರ್ಕಾರ ಗಂಭೀರವಾಗಿ ತೆಗೆದುಕೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

ಬೆಂಗಳೂರಿನ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಟರ್ಮಿನಲ್-2 ನಲ್ಲಿ ನಮಾಜ್ ಮಾಡಿರುವ ಬಗ್ಗೆ ನಮಗೆ ಮಾಹಿತಿ ಇಲ್ಲ. ಈ ಬಗ್ಗೆ ಮಾಹಿತಿ ಪಡೆದುಕೊಂಡು ಪ್ರತಿಕ್ರಿಯೆ ನೀಡುತ್ತೇನೆ ಎಂದು ಗೃಹ ಸಚಿವ ಡಾ.ಜಿ. ಪರಮೇಶ್ವರ್ ಹೇಳಿದರು.

# ಬಿಹಾರ್-ನಿತೀಶ್ ಎನ್‌ಡಿಎ ಸಿಎಂ ಅಭ್ಯರ್ಥಿಯಾಗಿ ಅನುಮೋದನೆ

**ಪಾಟ್ನಾ:** ಬಿಹಾರ ವಿಧಾನಸಭಾ ಚುನಾವಣೆಯ ಮೊದಲ ಹಂತಕ್ಕೆ ದಾಖಲೆ ಪ್ರಮಾಣದಲ್ಲಿ ಮತದಾನವಾಗಿರುವ ಹಿನ್ನೆಲೆಯಲ್ಲಿ ಎನ್‌ಡಿಎ ಅಲೆ ಬಲವಾಗಿದೆ ಎಂಬುದನ್ನು ಸ್ಪಷ್ಟವಾಗಿ ಸೂಚಿಸುತ್ತದೆ.

ನ.6 ರಂದು ಮೊದಲ ಹಂತಕ್ಕೆ ಮತದಾನ ನಡೆದ ನಂತರ, ರಕ್ಷಣಾ ಸಚಿವ ಮತ್ತು ಹಿರಿಯ ಬಿಜೆಪಿ ನಾಯಕ ರಾಜನಾಥ್ ಸಿಂಗ್ ಅವರು ನಿತೀಶ್ ಕುಮಾರ್ ಅವರನ್ನು ಎನ್‌ಡಿಎಯ ಮುಖ್ಯಮಂತ್ರಿ ಅಭ್ಯರ್ಥಿಯಾಗಿ ಅನುಮೋದಿಸಿದ್ದಾರೆ.

ಮುಖ್ಯಮಂತ್ರಿ ಅಭ್ಯರ್ಥಿಯನ್ನು ಘೋಷಿಸದಿರುವುದು ಮತದಾರರಲ್ಲಿ, ವಿಶೇಷವಾಗಿ ಸಾಮಾಜಿಕ ಕಲ್ಯಾಣ ಯೋಜನೆಗಳ ವಿಷಯದ ಕುರಿತು ಪ್ರಚಾರ ಮಾಡುತ್ತಿರುವ ನಿತೀಶ್ ಕುಮಾರ್ ಅವರ ಬೆಂಬಲಿಗರಲ್ಲಿ ಗೊಂದಲವನ್ನುಂಟುಮಾಡಿತ್ತು ಎಂದು ಬಿಜೆಪಿ ಉನ್ನತ ನಾಯಕರಿಗೆ ಪಕ್ಷದ ಕಾರ್ಯಕರ್ತರಿಗೆ ಮನವರಿಕೆ ಮಾಡಿದ್ದಾರೆ ಎಂದು ಎನ್‌ಡಿಎ ಮೂಲಗಳು ತಿಳಿಸಿವೆ.

ಮೊದಲ ಹಂತದ ಚುನಾವಣೆಯ ನಂತರ ರಾಜ್ಯ ಆಡಳಿತದ ಕೆಲವು ಉನ್ನತ ಅಧಿಕಾರಿಗಳೊಂದಿಗೆ ನಿತೀಶ್ ಅವರು ಮುಚ್ಚಿದ ಬಾಗಿಲುಗಳೊಂದಿಗೆ ಸಭೆ ನಡೆಸಿದ



ನಂತರ, ಎನ್‌ಡಿಎ ಅಧಿಕಾರಕ್ಕೆ ಮರಳಿದರೆ ನಿತೀಶ್ ಮುಂದಿನ ಮುಖ್ಯಮಂತ್ರಿಯಾಗುತ್ತಾರೆ ಎಂಬ ಬಿಜೆಪಿಯ ಸ್ಪಷ್ಟೀಕರಣವು ಮಹತ್ವದ್ದಾಗಿದೆ.

ನಿತೀಶ್ ಅವರ ಆಪ್ತರು ಎಂದು ಕರೆಯಲ್ಪಡುವ ಅಧಿಕಾರಿಗಳು, ಎನ್‌ಡಿಎ ಮಿತ್ರಪಕ್ಷಗಳ ಜತೆಗೆ ಜೆಡಿ (ಯು) ಅಭ್ಯರ್ಥಿಗಳ ಚುನಾವಣಾ ನಿರೀಕ್ಷೆಗಳ ಬಗ್ಗೆ ಅವರಿಗೆ ವಿವರಿಸಿದ್ದಾರೆ ಎಂದು ವರದಿಯಾಗಿದೆ.

ನಿತೀಶ್ ಅವರ ಗೌಪ್ಯ ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳು ಆಯಾ ಕ್ಷೇತ್ರಗಳಲ್ಲಿ ಲೋಕ ಜನಶಕ್ತಿ ಪಕ್ಷದ (ರಾಮ್ ವಿಲಾಸ್) ಕಾರ್ಯಕರ್ತರು ಮತ್ತು ಜೆಡಿ (ಯು) ಕಾರ್ಯಕರ್ತರ ನಡುವಿನ ಸಹಕಾರದ ಬಗ್ಗೆ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

2020 ರ ವಿಧಾನಸಭಾ ಚುನಾವಣೆಯಲ್ಲಿ, ಚಿರಾಗ್ ಪಾಸ್ವಾನ್ ವಿಧಾನಸಭಾ ಚುನಾವಣೆಯಲ್ಲಿ ಏಕಾಂ-ಗಿಯಾಗಿ ಸ್ಪರ್ಧಿಸಿ ಜೆಡಿಯು ವಿರುದ್ಧ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದ್ದರು, ಇದರಿಂದಾಗಿ ನಿತೀಶ್ ಅವರ ಪಕ್ಷಕ್ಕೆ 30 ಕ್ಕೂ ಹೆಚ್ಚು ವಿಧಾನಸಭಾ ಸ್ಥಾನಗಳಲ್ಲಿ ಹೆಚ್ಚಿನ ಹಿನ್ನಡೆ-ಯಾಗಿತ್ತು.

**ನಾಳೆ 2ನೇ ಹಂತಕ್ಕೆ ಮತದಾನ:** ಏತನ್ಮಧ್ಯೆ, ಬಿಹಾರ ವಿಧಾನಸಭೆಯ ಎರಡನೇ ಹಂತಕ್ಕೆ ನಾಳೆ ಮತದಾನ ನಡೆಯಲಿದ್ದು, ಆಯೋಗ ಅಗತ್ಯ ಸಿದ್ಧತೆಗಳನ್ನು ಕೈಗೊಂಡಿದೆ. 20 ಜಿಲ್ಲೆಗಳ ವ್ಯಾಪ್ತಿಯ 122 ಕ್ಷೇತ್ರಗಳಿಗೆ ಈ ಹಂತದಲ್ಲಿ ಚುನಾವಣೆ ನಡೆಯಲಿದೆ.

3 ಕೋಟಿ, 70 ಲಕ್ಷಕ್ಕೂ ಅಧಿಕ ಮತದಾರರು 136 ಮಹಿಳೆಯರು ಸೇರಿದಂತೆ 1 ಸಾವಿರದ 302 ಅಭ್ಯರ್ಥಿಗಳ ರಾಜಕೀಯ ಭವಿಷ್ಯವನ್ನು ನಿರ್ಧರಿಸಲಿದ್ದಾರೆ. ಭದ್ರತಾ ಕಾರಣಗಳಿಂದಾಗಿ 7 ಕ್ಷೇತ್ರಗಳಲ್ಲಿ ಮತದಾನದ ಗಡುವನ್ನು ಸಂಜೆ 5 ಕ್ಕೆ ಕೊನೆಗಳಿಸಲು ನಿರ್ಧರಿಸಲಾಗಿದೆ.

## ಮೂವರು ಐಸಿಸ್ ಉಗ್ರರ ಬಂಧನ



**ಅಹಮದಾಬಾದ್:** ಪಾಕಿಸ್ತಾನದಿಂದ ಡ್ರೋನ್ ಮೂಲಕ ಕಳ್ಳಸಾಗಣೆ ಮಾಡಿದ ಶಸ್ತ್ರಾಸ್ತ್ರಗಳು ಮತ್ತು ಮಾರಕ ರಿಸಿನ್ ಉತ್ಪಾದಿಸಲು ಬಳಸುವ ಸಾಮಗ್ರಿಗಳ ತಯಾರಿಕೆಯಲ್ಲಿ ನಿರತರಾಗಿದ್ದ ಮೂರು ಮಂದಿ ಐಸಿಸ್ ಉಗ್ರರನ್ನು ಗುಜರಾತ್‌ನಲ್ಲಿ ಬಂಧಿಸಿದ್ದು ದೇಶದ ಅನೇಕ ನಗರಗಳ ಮೇಲೆ ದಾಳಿ ಮಾಡಲು ಸಂಚು ರೂಪಿಸಿದ್ದ ಸಂಗತಿ ಬಯಲಾಗಿದೆ.

ಗುಜರಾತ್‌ನಲ್ಲಿ ಬಂಧಿಸಲ್ಪಟ್ಟ 35 ವರ್ಷದ ಹೈದರಾಬಾದ್ ಮೂಲದ ವೈದ್ಯ ಐಸಿಸ್ ಪ್ರಾಯೋಜಿತ ಭಯೋತ್ಪಾದಕ ಸಂಚಿನ ಕೇಂದ್ರ ವ್ಯಕ್ತಿ ಎಂದು ಗುರುತಿಸಲಾಗಿದೆ. ಈ ಪಿತೂರಿಯಲ್ಲಿ ಭಾಗವಹಿಸಿದ್ದ ಇತರ ಇಬ್ಬರು ಶಂಕಿತರಾದ ಉತ್ತರ ಪ್ರದೇಶದ ಶಾಮ್ಲಿಯ ದರ್ಜಿ ಮತ್ತು ಲಖಿಂಪುರ ಖೇರಿಯ ವಿದ್ಯಾರ್ಥಿಯನ್ನು ಬನಸ್ಕಾಂತದಲ್ಲಿ ಪತ್ತೆಹಚ್ಚಲಾಗಿದೆ.

ಭಾರತಕ್ಕೆ ಶಸ್ತ್ರಾಸ್ತ್ರಗಳನ್ನು ಕಳ್ಳಸಾಗಣೆ ಮಾಡಲು ಪಾಕಿಸ್ತಾನ ಡ್ರೋನ್‌ಗಳನ್ನು ಬಳಸುತ್ತಿದೆ, ಪಂಜಾಬ್ ಪೊಲೀಸರು ಜಾಲವನ್ನು ಭೇದಿಸಿ ಬೃಹತ್ ಸಂಗ್ರಹವನ್ನು ವಶಪಡಿಸಿಕೊಂಡಿದ್ದಾರೆ. ಬಂಧಿತ ಮೂವರು ಉಗ್ರರನ್ನು ಭಯೋತ್ಪಾದಕ ನಿಗ್ರಹ ಪಡೆ ಹೆಚ್ಚಿನ ವಿಚಾರಣೆಗೆ ಒಳಪಡಿಸಿದೆ.

ಗುಜರಾತ್ ಪೊಲೀಸರ ಭಯೋತ್ಪಾದನಾ ನಿಗ್ರಹ ದಳ ,ಎರಡು ಗ್ಲಾಕ್ ಪಿಸ್ತೂಲ್‌ಗಳು, ಬೆರೆಟ್ಟಾ, 30 ಲೈವ್ ಕಾರ್ಟ್ರಿಡ್ಜ್‌ಗಳು ಮತ್ತು ರಿಸಿನ್ ಅನ್ನು ಹೊರತೆಗೆಯುವ 4 ಕೆಜಿ ಕ್ಯಾಸ್ಟರ್-ಬೀನ್ ಮ್ಯಾಶ್‌ನೊಂದಿಗೆ ಅಹ್ಮದ್ ಮೊಹಿಯುದ್ದೀನ್ ಸಯ್ಯದ್‌ನನ್ನು ಬಂಧಿಸಿದೆ.

ಸಯ್ಯದ್ ಅವರ ದೂರವಾಣಿ ಕರೆ ದಾಖಲೆಗಳ ಆಧಾರದ ಮೇಲೆ ಉತ್ತರ ಪ್ರದೇಶದ ಆಜಾದ್ ಸುಲೇಮಾನ್ ಶೇಖ್ (20) ಮತ್ತು ಮೊಹಮ್ಮದ್ ಸುಹೇಲ್ ಮೊಹಮ್ಮದ್ ಸಲೀಮ್ ಖಾನ್ (23) ಅವರನ್ನು ಬಂಧಿಸಲಾಗಿದೆ. ಚೀನಾದಿಂದ ಎಂಬಿಬಿಎಸ್ ಪದವಿ ಪಡೆದಿರುವ ವೈದ್ಯರಿಗೆ ಇಬ್ಬರೂ ಬಂದೂಕುಗಳು ಮತ್ತು ಕಾರ್ಟ್ರಿಡ್ಜ್‌ಗಳನ್ನು ಪೂರೈಸುತ್ತಿದ್ದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ದೇಶಾದ್ಯಂತ ಭಯೋತ್ಪಾದಕ ದಾಳಿಗೆ ಯೋಜಿಸುತ್ತಿರುವ 3 ಜನರನ್ನು ಎಟಿಎಸ್ ಬಂಧಿಸಿದೆ. ಒಂದು ವರ್ಷದಿಂದ ಕಣ್ಗಾವಲು ಇರಿಸಲಾಗಿತ್ತು, ರಿಸಿನ್ ಎಂಬುದು ಕ್ಯಾಸ್ಟರ್ ಬೀನ್ಸ್‌ನಿಂದ ಪಡೆದ ಅತ್ಯಂತ ವಿಷಕಾರಿ ವಿಷವಾಗಿದೆ. ಎಣ್ಣೆ ಹೊರತೆಗೆದ ನಂತರ ಸೇವಿಸಿದರೆ, ಉಸಿರಾಡಿದರೆ ಅಥವಾ ಚುಚ್ಚುಮದ್ದು ಮಾಡಿದರೆ ಈ ವಸ್ತುವಿಗೆ ಯಾವುದೇ ಪ್ರತಿ ವಿಷವಿಲ್ಲ. ಚರ್ಮದ ಆರೈಕೆಗಾಗಿ ಮತ್ತು ವಿವಿಧ ವಾಣಿಜ್ಯ ಉತ್ಪನ್ನಗಳಲ್ಲಿ ಬಳಸಲಾಗುವ ಕ್ಯಾಸ್ಟರ್ ಆಯಿಲ್ ವಿಷದ ಅಂಶ ಹೊಂದಿರುವುದಿಲ್ಲ ಎಂದು ತಿಳಿಸಲಾಗಿದೆ

## ದೆಹಲಿ ವಾಯು ಗುಣಮಟ್ಟ ಕಳಪೆ

**ನವದೆಹಲಿ:** ವಾಯು ಗುಣಮಟ್ಟ ಕುರಿತು ರಾಷ್ಟ್ರರಾಜಧಾನಿಯಲ್ಲಿ ಪೋಷಕರ ಆತಂಕ ಹೆಚ್ಚುತ್ತಿರುವ ನಡುವೆಯೇ, ಸೋಮವಾರ ಬೆಳಗ್ಗೆ ದೆಹಲಿಯಲ್ಲಿ ಗಾಳಿಯ ಗುಣಮಟ್ಟವು ಅತ್ಯಂತ ಕಳಪೆ ವರ್ಗದಲ್ಲಿ ಉಳಿದಿದೆ.

ಸದ್ಯ ನಗರವನ್ನು ಹೊಗೆಯ ದಪ್ಪ ಪದರವು ಆವರಿಸಿದೆ. ಒಟ್ಟಾರೆ ವಾಯು ಗುಣಮಟ್ಟ ಸೂಚ್ಯಂಕ (ಎಕ್ಯೂಐ) ಬೆಳಗ್ಗೆ 7 ಗಂಟೆಗೆ 345 ರಷ್ಟಿತ್ತು ಎಂದು ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿ ಹೇಳಿದೆ.

ದೆಹಲಿಯಲ್ಲಿ ಮಾಲಿನ್ಯ ಮಟ್ಟ ಹದಗೆಡುತ್ತಿರುವ ಮಧ್ಯೆ, ಪೋಷಕರು ಮತ್ತು ಪರಿಸರ ಕಾರ್ಯಕರ್ತರು ಸೇರಿದಂತೆ ಹಲವಾರು ಜನರು ರಾಷ್ಟ್ರ ರಾಜಧಾನಿಯ ಇಂಡಿಯಾ ಗೇಟ್ ಬಳಿ ಪ್ರತಿಭಟನೆ ನಡೆಸಿದರು.

ಪ್ರತಿಭಟನಾಕಾರರು, ಅವರಲ್ಲಿ ಹೆಚ್ಚಿನವರು ಮಕ್ಕಳೊಂದಿಗೆ ತಾಯಂದಿರು, ಶುದ್ಧ ಗಾಳಿಯನ್ನು ಖಚಿತಪಡಿಸಿಕೊಳ್ಳಲು ಸರ್ಕಾರದ ತುರ್ತು ಕ್ರಮವನ್ನು ಒತ್ತಾಯಿಸಿದರು.

ನೋಯ್ಡಾದಲ್ಲಿ, ಸೆಕ್ಟರ್ 62 ರಲ್ಲಿ 342, ಸೆಕ್ಟರ್ 1 ರಲ್ಲಿ 325 ಮತ್ತು ಸೆಕ್ಟರ್ 116 ನಲ್ಲಿ 339 ರಲ್ಲಿ ಎಕ್ಯೂಐ ದಾಖಲಾಗಿದೆ. ಗ್ರೇಟರ್ ನೋಯ್ಡಾದಲ್ಲಿ, ನಾಲೆಡ್ಜ್ ಪಾರ್ಕ್-3 ಮತ್ತು ನಾಲೆಡ್ಜ್ ಪಾರ್ಕ್-5 ಕ್ರಮವಾಗಿ 316 ಮತ್ತು 314 ಎಕ್ಯೂಐ ಮಟ್ಟವನ್ನು ವರದಿ ಮಾಡಿದೆ.

Published and Owned by : **PRATHIBHA M.S.**, Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**